ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 56

13–8–2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 56

## ಕೆ.ಎನ್. ರಾಜಣ್ಣ ರಾಜೀನಾಮೆ : ವಿಧಾನಸಭೆಯಲ್ಲಿ ಕೋಲಾಹಲ

# 'ವಜಾಕ್ಕೆ ಕಾರಣ ನೀಡಿ' :ಬಿಜೆಪಿ ಪಟ್ಟು!

**ಬೆಂಗಳೂರು:** ಕರ್ನಾಟಕ ಸಚಿವ ಸಂಪುಟದಿಂದ ಕೆ.ಎನ್. ರಾಜಣ್ಣ ಅವರನ್ನು ವಜಾಗೊಳಿಸಿರುವುದು ಮಂಗಳವಾರ ವಿಧಾನಸಭೆಯಲ್ಲಿ ಭಾರಿ ಕೋಲಾಹಲಕ್ಕೆ ಕಾರಣವಾಗಿದ್ದು, ಪ್ರತಿಪಕ್ಷ ಬಿಜೆಪಿ ಅವರ ವಜಾಕ್ಕೆ ಕಾರಣಗಳನ್ನು ತಿಳಿಸುವಂತೆ ಸರ್ಕಾರವನ್ನು ಒತ್ತಾಯಿಸಿದೆ.

ಹೌದು.. ಮತಕಳ್ಳತನ ವಿಚಾರವಾಗಿ ಬಹಿರಂಗವಾಗಿ ಮಾತನಾಡಿ ಕಾಂಗ್ರೆಸ್ ಹೈಕಮಾಂಡ್ ಕೆಂಗಣ್ಣಿಗೆ ಗುರಿಯಾಗಿದ್ದ ಮಾಜಿ ಸಹಕಾರ ಸಚಿವ ಕೆಎನ್ ರಾಜಣ್ಣ ಅವರನ್ನು ಸಿದ್ದರಾಮಯ್ಯ ಸಂಪುಟದಿಂದ ನಿನ್ನೆ ವಜಾಗೊಳಿಸಲಾಗಿತ್ತು. ಕಾಂಗ್ರೆಸ್ ಹೈಕಮಾಂಡ್ ನಿರ್ದೇಶನದ ನಂತರ ಸಹಕಾರ ಸಚಿವರಾಗಿ ಸೇವೆ ಸಲ್ಲಿಸಿದ್ದ ರಾಜಣ್ಣ ಅವರನ್ನು ಸೋಮವಾರ ಸಂಪುಟದಿಂದ ಕೈಬಿಡಲಾಗಿತ್ತು. ಈ ಬೆಳವಣಿಗೆ ರಾಜ್ಯಾದ್ಯಂತ ವ್ಯಾಪಕ ಸುದ್ದಿಗೆ ಗ್ರಾಸವಾಗಿದ್ದು, ರಾಜಕೀಯ ಚರ್ಚೆಗೆ ಕಾರಣವಾಗಿದೆ.

ಇಂದು ಇದೇ ವಿಚಾರ ವಿಧಾನಸಭೆ ಕಲಾಪದಲ್ಲೂ ಮಾರ್ದನಿಸಿದ್ದು, ಪ್ರತಿಪಕ್ಷ ಬಿಜೆಪಿ ಈ ಕುರಿತು ಸಿದ್ದರಾಮಯ್ಯ



ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿ–ದೆ. ರಾಜಣ್ಣ ಅವರ ವಜಾಕ್ಕೆ ಸರ್ಕಾರ ಕಾರಣಗಳನ್ನು ನೀಡಲೇಬೇಕು ಎಂದು ಒತ್ತಾಯಿಸಿದೆ. ಆದರೆ ಸರ್ಕಾರ ಮಾತ್ರ ಯಾವುದೇ ಚರ್ಚೆಯಿಂದ ದೂರವಿದ್ದು, ರಾಜಣ್ಣ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸುವ ಅಧಿಸೂಚನೆಯನ್ನು ಮಂಡಿಸಿದ್ದು ಕುತೂಹಲ ಕೆರಳಿಸಿತು.

ಪ್ರಶ್ನೋತ್ತರ ಅವಧಿ ಮತ್ತು ಶೂನ್ಯ ವೇಳೆಯ ನಂತರ ವಿಧಾನಸಭೆಯಲ್ಲಿ ರಾಜಣ್ಣ ಅವರನ್ನು ವಜಾಗೊಳಿಸಿದ ಅಧಿಸೂಚನೆಯನ್ನು ಮಂಡಿಸಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್, ಯಾವುದೇ ಸಚಿವರು ಸಚಿವ ಸಂಪುಟದಿಂದ ಹೊರಬಂದರೆ, ಅವರು ಸ್ಪೀಕರ್ ಅನುಮತಿಯೊಂದಿಗೆ ಹೇಳಿಕೆ ನೀಡಬಹುದು, ಆದರೆ ಅದನ್ನು ಮೀರಿ, ನಿಯಮಗಳ ಪ್ರಕಾರ ಯಾವುದೇ ಚರ್ಚೆ ಅಥವಾ ವಿವರಣೆಯನ್ನು ಅನುಮತಿಸಲಾಗುವುದಿಲ್ಲ ಎಂದು ಹೇಳಿದರು.

ಈ ಹಂತದಲ್ಲಿ, ವಿರೋಧ ಪಕ್ಷದ ಉಪ ನಾಯಕ ಅರವಿಂದ್ ಬೆಲ್ಲದ್ ಮತ್ತು ಹಿರಿಯ ಬಿಜೆಪಿ ಶಾಸಕ ಸುರೇಶ್ ಕುಮಾರ್ ಅವರು ಆದಾಗ್ಯೂ, ಪಾಟೀಲ್ ಮುಂದುವರಿಸಿ, ಸಚಿವರನ್ನು ಸರ್ಕಾರಗಳಿಂದ ತೆಗೆದುಹಾಕುವ ಹಿಂದಿನ ಸಂದರ್ಭಗಳಲ್ಲಿ, ವಿಧಾನಸಭೆಯಲ್ಲಿ ಯಾವುದೇ ಚರ್ಚೆಗಳು ನಡೆದಿಲ್ಲ ಎಂದು ಹೇಳಿದರು. "ಉದಾಹರಣೆಗೆ ಜಗದೀಪ್ ಧಂಖರ್ ಉಪಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದಾಗ, ಅದರ ಬಗ್ಗೆ ಚರ್ಚೆ ನಡೆದಿತ್ತೇ?" ರಾಜೀನಾಮೆ ವಜಾಗೊಳಿಸುವುದಕ್ಕಿಂತ ಭಿನ್ನವಾಗಿದೆ ಎಂದು ಬಿಜೆಪಿ ಸದಸ್ಯರು ಸೂಚಿಸಿದರು. ಈ ವೇಳೆ ಮಾತನಾಡಿದ ಅರವಿಂದ್ ಬೆಲ್ಲದ್, 'ರಾಜಣ್ಣ ಅವರ ತಪ್ಪು ಏನು? ರಾಜ್ಯದ ಜನರು ತಿಳಿದುಕೊಳ್ಳಬೇಕು..... ಸತ್ಯವನ್ನು ಹೇಳಿದ್ದಕ್ಕಾಗಿ ಅವರನ್ನು ವಜಾಗೊಳಿಸಲಾಗಿದೆಯೇ?" ಎಂದು ಪ್ರಶ್ನಿಸಿದರು.

ಇದಕ್ಕೆ ಪ್ರತಿಯಾಗಿ, ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಪಕ್ಷದಿಂದ ಏಕೆ ಹೊರಹಾಕಲಾಯಿತು ಎಂದು ಬಿಜೆಪಿಯನ್ನು ಪ್ರಶ್ನಿಸಿದರು. "ಯಾವುದೇ ಸಚಿವರನ್ನು ಸರ್ಕಾರದಿಂದ ತೆಗೆದುಹಾಕಲು ನಿಮ್ಮ ಅನುಮತಿ ಪಡೆಯಬೇಕೇ? ಯಾರನ್ನಾದರೂ ಸಂಪುಟದಿಂದ ತೆಗೆದುಹಾಕುವುದು ಅಥವಾ ತೆಗೆದುಹಾಕುವುದು ಮುಖ್ಯಮಂತ್ರಿಯ ವಿಶೇಷ ಹಕ್ಕು. ಅದಕ್ಕೂ ನಿಮಗೂ ಏನು ಸಂಬಂಧ?" ಎಂದು ಕಿಡಿಕಾರಿದರು.

ಇದಕ್ಕೆ ತೀವ್ರವಾಗಿ ಪ್ರತಿಕ್ರಿಯಿಸಿದ ಬಿಜೆಪಿ ಶಾಸಕರು, ಯತ್ನಾಳ್ ಅವರನ್ನು ಪಕ್ಷದಿಂದ ತೆಗೆದುಹಾಕಲಾಯಿತು ಮತ್ತು ಅವರು ಸಂಪುಟದಲ್ಲಿ ಸಚಿವರಾಗಿರಲಿಲ್ಲ. ಇದು ಮುಖ್ಯಮಂತ್ರಿಯ ನಿರ್ಧಾರವಾಗಿದ್ದರೆ, ಅದು ಸರಿಯಾಗುತ್ತಿತ್ತು, ಆದರೆ ಇದು ಕಾಂಗ್ರೆಸ್ ಹೈಕಮಾಂಡ್ ನಿರ್ಧಾರ ಎಂದು ಹೇಳಲಾಗುತ್ತದೆ, ಆದ್ದರಿಂದ ಇದನ್ನು ಚರ್ಚಿಸಬೇಕು" ಎಂದು ಹೇಳಿದರು.

## ಆ.15 ರಂದು ಸ್ವಾತಂತ್ರ್ಯ ದಿನಾಚರಣೆ

# ಜಿಲ್ಲಾ ಉಸುವಾರಿ ಸಚಿವರಿಂದ ರಾಷ್ಟ್ರಧ್ವಜಾರೋಹಣ

**ದಾವಣಗೆರೆ :** ಜಿಲ್ಲಾಡಳಿತ ವತಿಯಿಂದ ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು ಜಿಲ್ಲಾ ಕ್ರೀಡಾಂಗಣದಲ್ಲಿ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಅವರು ಬೆಳಗ್ಗೆ 9 ಗಂಟೆ–ಗೆ ಜಿಲ್ಲಾ ಕ್ರೀಡಾಂಗಣದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸುವರು.

ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ. ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್ ಭೋಜೇಗೌಡ, ಡಿ.ಎಸ್ ಅರುಣ್, ಚಿದಾನಂದ. ಎಂ.ಗೌಡ, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಆಸಗೋಡು ಜಯಸಿಂಹ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿಯ ಅಧ್ಯಕ್ಷರಾದ ಎನ್.ಜಯದೇವನಾಯ್ಕ, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು.ಟಿ.ಬಸವರಾಜ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲ್‌ರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಆಯುಕ್ತೆ ರೇಣುಕಾ ಉಪಸ್ಥಿತರಿರುವರು.

ಅಂದು ಸಂಜೆ 5 ಗಂಟೆಗೆ ಕುವೆಂಪು ಕನ್ನಡ ಭವನದಲ್ಲಿ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿ–ವಿದ್ಯಾರ್ಥಿನಿಯರಿಂದ

# ಇಂದು ಕಾರ್ಯತಂತ್ರ, ನೀತಿ, ನಿರೂಪಣ ಕಾರ್ಯಗಾರ

**ದಾವಣಗೆರೆ:** ಕರ್ನಾಟಕ ನಗರ ಮತ್ತು ಗ್ರಾಮಾಭ್ಯುದಯ 'ಸ್ವಯಂ ಸೇವಾ ಸಂಸ್ಥೆಗಳ ಒಕ್ಕೂಟ (ಫೆವಾರ್ಡ್–ಕ) ದಿಂದ ಆ.13ರಂದು ಬೆಳಿಗ್ಗೆ 10–30ಕ್ಕೆ ಶಿವಮೊಗ್ಗ ವಿಭಾಗಿಯ ಆರು ಜಿಲ್ಲೆಗಳ ಸ್ವಯಂ ಸೇವಾ ಸಂಸ್ಥೆಗಳ ಐದು ವರ್ಷಗಳ (2025–30 ರ) ಕಾರ್ಯತಂತ್ರ, ನೀತಿ– ನಿರೂಪಣ ಕಾರ್ಯಗಾರದ ಉದ್ಘಾಟನಾ ಸಮಾರಂಭವನ್ನು ನಗರದ ಎವಿಕೆ ಕಾಲೇಜು ರಸ್ತೆಯಲ್ಲಿರುವ ರಂಗಮಹಲ್ ನಲ್ಲಿ ಹಮ್ಮಿಕೊಳ್ಳಲಾಗಿದೆ.

ಫೆವಾರ್ಡ್–ಕ. ದಾವಣಗೆರೆ ಜಿಲ್ಲಾ ಒಕ್ಕೂಟದ ಅಧ್ಯಕ್ಷ ಡಾ. ಮೃತ್ಯುಂಜಯ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ್ ವಿಠಲರಾವ್, ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ದಿನೇಶ್ ಶೆಟ್ಟಿ, ಜಿಲ್ಲಾ ಸಂಘ ಸಂಸ್ಥೆಗಳ ನೋಂದಣಾಧಿಕಾರಿ ಮಧು ಶ್ರೀನಿವಾಸ್, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ ಧಾರವಾಡ ಜಂಟಿ ನಿರ್ದೇಶಕರು ವಿನಯ್, ಫೆವಾರ್ಡ್–ಕದ ರಾಜ್ಯಾಧ್ಯ ಮಹೇಶ್ ಚಂದ್ರಗುರು, ವಿಭಾಗೀಯ ಉಪಾಧ್ಯಕ್ಷ ಎಚ್.ಎಫ್. ಅಕ್ಕಿ ಮತ್ತು ವಿಶೇಷ ಆಹ್ವಾನಿತರಾಗಿ ನಬಾರ್ಡ್ ನ ಜಿಲ್ಲಾ ವ್ಯವಸ್ಥಾಪರಾಧ ರಶ್ಮಿ ರೇಖಾ, ಫೆವಾರ್ಡ್–ಕ ನಿಕಟಪೂರ್ವ ಅಧ್ಯಕ್ಷ ಆಂಜನೇಯ ರೆಡ್ಡಿ, ಮಾಜಿ ಅಧ್ಯಕ್ಷ ಶ್ರೀ ರೂಪ ನಾಯಕ್ ಪಾಲ್ಗೊಳ್ಳಲಿದ್ದಾರೆ.

# ರಾಜಕಾರಣದಿಂದ ನಿವೃತ್ತಿ ಬಯಸುವುದಿಲ್ಲ

## ಹೊನ್ನಾಳಿ ಶಾಸಕ ಡಿ.ಜಿ. ಶಾಂತನಗೌಡ ಸ್ಪಷ್ಟನೆ

**ಹೊನ್ನಾಳಿ :** ಈ ಹಿಂದೆ ಒಂದು ಸಂದರ್ಭದಲ್ಲಿ ಇದೇ ನನ್ನ ಕೊನೆಯ, ಚುನಾವಣೆ ರಾಜಕೀಯ ನಿವೃತ್ತಿ ಪಡೆಯುತ್ತೇನೆ ಎಂದು ಹೇಳಿದ್ದು ನಿಜ. ಆದರೆ, ತನ್ನ ಹಿತೈಷಿಗಳ ಅಭಿಲಾಷೆ ಯಂತೆ ತಾನು ತನ್ನ ಜೀವವಿರುವವರೆಗೆ ಈ ರಾಜಕಾರಣದಲ್ಲಿ ಮುಂದುವರೆ ಯುತ್ತೇನೆ ಎಂದು ಶಾಸಕ ಡಿ.ಜಿ.ಶಾಂತನಗೌಡ ಸ್ಪಷ್ಟಪಡಿಸಿದರು.

ಭದ್ರಾ ಜಲಾಶಯದ ಬಲದಂಡೆಯ ಮೂಲಕ ನಾಲೆ ಸೀಳಿ ನೀರು ಒಯ್ಯಲಾಗುತ್ತಿದೆ ಎಂಬ ವಿಪಕ್ಷಗಳ ಆರೋಪಗಳಿಗೆ ಸ್ಪಷ್ಟನೆ ನೀಡುವ ಸಲುವಾಗಿ ಹರಿಹರ, ಮಾಯಕೊಂಡ, ಚನ್ನಗಿರಿ, ಹರಪನಹಳ್ಳಿ ಶಾಸಕರುಗಳೊಂದಿಗೆ ತಾಲ್ಲೂಕಿನ ಕುಂದೂರು ಗ್ರಾಮದಲ್ಲಿ ಶನಿವಾರ ಆಯೋಜಿಸಲಾಗಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ಪಟ್ಟಣ ಮತ್ತು ತಾಲ್ಲೂ ಕಿನ 346 ಹಳ್ಳಿಗಳು, ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲ್ಲೂಕಿನ 106 ಗ್ರಾಮಗಳಿಗೆ ಭದ್ರಾ ಜಲಾಶಯದ ಬಲದಂಡೆ ನಾಲೆಯ ಮೂಲಕ ಬಹು ಗ್ರಾಮ ಕುಡಿಯುವ ನೀರು ಯೋಜನೆ ಯಡಿ ನೀರು ಹರಿಸುವ ಕಾಮಗಾರಿ ಶೇ. 70 ರಷ್ಟು ಮುಗಿಯುತ್ತಾ ಬಂದಿದೆ ಎಂದರು.

ಆದರೆ ವಿಪಕ್ಷ ದವರು ಈ ಯೋಜ ನೆಯ ಕುರಿತು ಜನ ಮತ್ತು ರೈತರಲ್ಲಿ ಆಧಾರ ರಹಿತ ಹೇಳಿಕೆಗಳನ್ನು ನೀಡುವ ಮೂಲಕ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ವಿಶೇಷವಾಗಿ ಕುಡಿಯುವ ನೀರಿನ ಯೋಜನೆಗಳಿಗೆ ಯಾರೂ ಕೂಡ ವಿರೋಧ ಮಾಡುವಂತಿಲ್ಲ. ಇದಕ್ಕೆ ನಮ್ಮ ಸರ್ಕಾರ ಬದ್ಧವಾಗಿದ್ದು ಭದ್ರಾ ನಾಲಾ ಕೊನೆ ಭಾಗದ ರೈತರಿಗೂ ಕೂಡ ನೀರು ಒದಗಿಸುವ



ಇಚ್ಛಾಶಕ್ತಿಯೊಂದಿಗೆ ಸಂಬಂಧಿಸಿದ ಇಲಾಖೆಗಳ ಇಂಜಿನಿಯರ್ ಗಳನ್ನು ಇಟ್ಟುಕೊಂಡು ಕಾಮಗಾರಿ ಪ್ರದೇಶಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದೆ ಎಂದರು.

ರಾಜೀನಾಮೆ ನೀಡಲು ಸಿದ್ದ: ಈ ತಾಲೂಕಿನಲ್ಲಿ ಯೂರಿಯಾ ಗೊಬ್ಬರ ಕಾಳಸಂತೆಯಲ್ಲಿ ಮಾರಾಟವಾಗುತ್ತಿದೆ ಎಂದು ವಿಪಕ್ಷದವರು ಸುಳ್ಳು ಆರೋಪ ಮಾಡುತ್ತಿದ್ದು ಇದು ಸತ್ಯಕ್ಕೆ ದೂರವಾಗಿದ್ದು, ತಾಲ್ಲೂಕಿನಲ್ಲಿ ಒಂದು ಚೀಲ ಕೂಡ ಕಾಳಸಂತೆಯಲ್ಲಿ ಮಾರಾಟವಾಗಿರುವುದನ್ನು ಸಾಬೀತು ಪಡಿಸಿದರೆ ತಾನು ರಾಜೀನಾಮೆ ನೀಡುವುದಾಗಿ ಹೇಳಿದರು.

ಕೇಂದ್ರ ಸರ್ಕಾರದಿಂದ ಇನ್ನೂ 1.60 ಲಕ್ಷ ಮೆಟ್ರಿಕ್ ಟನ್ ಗೊಬ್ಬರ ಬರಬೇಕಾಗಿದೆ ಎಂದ ಅವರು, ಕರ್ನಾಟಕದಿಂದ ಕೇಂದ್ರಕ್ಕೆ ಹೋಗಿರುವ ಬಿಜೆಪಿ ಸಂಸದರು, 3 ಜನ ಮಾಜಿ ಮುಖ್ಯಮಂತ್ರಿಗಳು ಏನು ಮಾಡುತ್ತಿದ್ದಾರೆ. ಇವರಿಗೆ ರೈತರ ಬಗ್ಗೆ ಕಾಳಜಿ ಇಲ್ಲವೇ ? ಎಂದು ಪ್ರಶ್ನಿಸಿದ ಅವರು, ಕೇಂದ್ರ ಸರ್ಕಾರ ರಾಜ್ಯದ ಬಗ್ಗೆ ದ್ವೇಷದ ರಾಜಕಾರಣ ಮಾಡಬಾರದು ಎಂದರು.

ರಾಜ್ಯ ಹೆದ್ದಾರಿಯಲ್ಲಿ ಟೈರ್ ಸುಟ್ಟು ಪ್ರತಿಭಟನೆ ಮಾಡುವ ವಿಪಕ್ಷದವರು 2 ಸಾವಿರ ಗುಂಡಿಗಳಿವೆ ಎಂದು ಆರೋಪಿಸುತ್ತಿದ್ದಾರೆ. ಆದರೆ ವಾಸ್ತವವಾಗಿ 3 ಸಾವಿರಕ್ಕೂ ಹೆಚ್ಚಿನ ಗುಂಡಿಗಳಿವೆ ಎಂದು ನನ್ನ ಗಮನದಲ್ಲಿದ್ದು, ಇದಕ್ಕಾಗಿ 20 ಕೋಟಿ ಅನುದಾನಕ್ಕೆ ಹಾಕಿದ್ದೇನೆ ಎಂದು ಹೇಳಿದರು.

ಕಳೆದ 2 ವರ್ಷಗಳ ಕಾಂಗ್ರೆಸ್ ಸರ್ಕಾರ ಏನು ಮಾಡಿದೆ ಎಂದು ಪ್ರಶ್ನೆ ಮಾಡುತ್ತಿದ್ದಾರೆ. ತನ್ನ ಕ್ಷೇತ್ರದಲ್ಲಿ ಒಟ್ಟು ರೂ. 367.64 ಕೋಟಿ ವಿವಿಧ ಇಲಾಖೆಗಳಿಗೆ ಅನುದಾನ ಬಿಡುಗಡೆಯಾಗಿದ್ದು, ಇದರಲ್ಲಿ ಕೂಡ ಕನಿಷ್ಟ ರೂ. 100 ಸಹ ಸುಳ್ಳಿಲ್ಲ ಎಂದು ಸ್ಪಷ್ಟ ಪಡಿಸಿದರು.

ಮಾಯಕೊಂಡ ಶಾಸಕ ಬಸವಂತಪ್ಪ ಮಾತನಾಡಿ, ದೇಶದ ಸಮೃದ್ದಿಗೆ ರೈತರೇ ಕಾರಣ. ಭದ್ರಾ ನಾಲಾ ಕೊನೆ ಭಾಗದ ರೈತರಿಗೆ ಅನ್ಯಾಯವಾಗದಂತೆ ನೋಡಿಕೊಳ್ಳಲು ಬದ್ಧರಾಗಿದ್ದೇವೆ, ಕೆರೆ ನೀರು ತುಂಬಿಸುವ ಯೋಜನೆ ಯಶಸ್ವಿಗೆ ಸಿರಿಗೆರೆ ಶ್ರೀಗಳ ಕೊಡುಗೆ ಅಪಾರವಾಗಿದೆ ಎಂದು ಹೇಳಿದರು. ನೀರು, ಕರೆಂಟ್ ರೈತರ ಎರಡು ಕಣ್ಣಿದ್ದಂತೆ. ರಾಜ್ಯ ಸರ್ಕಾರ ಕೂಡ ಇದನ್ನು ಒದಗಿಸಲು ಹೆಚ್ಚು ಆದ್ಯತೆ ನೀಡಿದೆ ಎಂದರು.

ಚನ್ನಗಿರಿ ಶಾಸಕ ಬಸವರಾಜ ಶಿವಗಂಗಾ ಮಾತನಾಡಿ, ಮೂರು ಬಾರಿ ಶಾಸಕರಾಗಿ ಇದರಲ್ಲಿ ಒಂದು ಬಾರಿ ಸಚಿವರಾಗಿರುವ ಈ ಕ್ಷೇತ್ರದ ಮಾಜಿ ಶಾಸಕರು ಈ ಯೋಜನೆಯ ಬಗ್ಗೆ ನೈಜ್ಯತೆಯನ್ನು ಅರಿತು ಮಾತನಾಡಬೇಕು. ವಾಸ್ತವವಾಗಿ ಈ ಯೋಜನೆ ಉದ್ಘಾಟನೆಯಾಗಿದ್ದು ಬಿಜೆಪಿ ಸರ್ಕಾರದ ಅವಧಿಯಲ್ಲೇ, ಇದನ್ನು ಮರೆಯಬಾರದು ಎಂದು ಪರೋಕ್ಷವಾಗಿ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಅವರಿಗೆ ಟಾಂಗ್ ನೀಡಿದರು. ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ತೇಜಸ್ವಿ ಪಟೇಲ್ ಮಾತನಾಡಿ, ಕುಡಿಯುವ ನೀರಿಗೆ ಪ್ರತ್ಯೇಕ ಯೋಜನೆ ರೂಪಿಸಬೇಕು, ಭದ್ರಾ ಜಲಾಶಯದ ಎಲ್ಲಾ ಅಚುಕಟ್ಟು ಪ್ರದೇಶದ ಸಮಗ್ರ ಸಮೀಕ್ಷೆ ನಡೆಸಬೇಕು ಎಂದು ಹೇಳಿದರು

ಹರಪನಹಳ್ಳಿ ಶಾಸಕರಾದ ಶ್ರೀಮತಿ ಲತಾ ಮಲ್ಲಿಕಾರ್ಜುನ್, ಹರಿಹರದ ಮಾಜಿ ಶಾಸಕ ಎಸ್. ರಾಮಪ್ಪ ಮಾತನಾಡಿದರು. ಕಾರ್ಯಕ್ರಮದಲ್ಲಿ ಕಾಂಗ್ರೆಸ್ ತಾ. ಅಧ್ಯಕ್ಷ ಎಚ್.ಎ. ಗದ್ದಿಗೇಶ್, ಡಿಸಿಸಿ ಬ್ಯಾಂಕ್ ನಿರ್ದೇಶಕರಾದ ಡಿ.ಜಿ.ವಿಶ್ವನಾಥ್, ಸು–ರೇಂದ್ರಗೌಡ, ಶಿಮುಲ್ ನಿರ್ದೇಶಕ ಬಿ.ಜಿ.ಬಸವರಾಜಪ್ಪ, ಕೆಂಗಲಹಳ್ಳಿ ಷಣ್ಮುಖಪ್ಪ, ಎಂ.ಸಿ.ಮೋಹನ, ವರದರಾಜಪ್ಪಗೌಡ, ಎಚ್.ಎ. ಉಮಾಪತಿ, ಮಧುಗೌಡ, ಯುವಕಾಂಗ್ರೆಸ್ ಮನು ವಾಲಜ್ಜಿ, ಆರ್. ನಾಗಪ್ಪ, ಪಿ.ಎಲ್.ಡಿ.ಬ್ಯಾಂಕ್ ಅಧ್ಯಕ್ಷ ರಮೇಶ್, ಕುಂದೂರು ಮಂಜುನಾಥ್ ಸೇರಿದಂತೆ ಅನೇಕ ಮುಖಂಡರು ಇದ್ದರು.

# ದೇವಾಲಯದಲ್ಲಿ ಬೆಂಕಿ: 7 ಮಂದಿ ಸಜೀವ ದಹನ

**ವಾರಣಾಸಿ,ಆ.10–** ಉತ್ತರ ಪ್ರದೇಶದ ವಾರಣಾಸಿಯ ಚೌಕ್‌ನಲ್ಲಿರುವ ಪುರಾತನ ಆತ್ಮವಿಶ್ವೇಶ್ವರ ದೇವಸ್ಥಾನದಲ್ಲಿ ಸಂಭವಿಸಿದ ಬೆಂಕಿ ಅವಘಡದಲ್ಲಿ 7 ಜನರು ಸುಟ್ಟು ಕರಕಲಾಗಿದ್ದಾರೆ. ಅನೇಕರು ಗಾಯಗೊಂಡಿದ್ದಾರೆ.

ದೇವಾಲಯದಲ್ಲಿ ಅಲಂಕಾರದ ಸಮಯದಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಕಾಣಿಸಿಕೊಂಡಿದ್ದು, ಇದು ಹತ್ತಿರದ ಜನರನ್ನು ಆವರಿಸಿದೆ. ಅದರಲ್ಲಿ ಏಳು ಜನರು ಸಜೀವ ದಹನ ಗೊಂಡಿದ್ದಾರೆ.

ಗಾಯಾಳುಗಳನ್ನು ಹತ್ತಿರದ ಮಹಮೂರ್‌ಗಂಜ್‌ನಲ್ಲಿರುವ ಜಿಎಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಎಲ್ಲರೂ ಚಿಕಿತ್ಸೆ ಪಡೆಯುತ್ತಿದ್ದಾರೆ. ಗಾಯಗೊಂಡವರಲ್ಲಿ ಮೂವರು ಮಕ್ಕಳೂ ಸೇರಿದ್ದಾರೆ.

ಬ್ರಹ್ಮನಲ್ ಚೌಕಿ ಅಡಿಯಲ್ಲಿರುವ ದೇವಾಲಯದ ಗರ್ಭಗುಡಿಯಲ್ಲಿ ಹರಿಯಾಲಿ ಶೃಂಗಾರ್ ಮತ್ತು ಆರತಿ ನಡೆಯುತ್ತಿದ್ದಾಗ ಈ ಘಟನೆ ಸಂಭವಿಸಿದೆ.

# ಪ್ರತಿಯೊಬ್ಬರ ಮನೆಗಳ ಮೇಲೆ ತ್ರಿವರ್ಣಧ್ವಜ ಹಾರಸಿ : ಎಂ.ಪಿ.ರೇಣುಕಾಚಾರ್ಯ

**ಹೊನ್ನಾಳಿ :** ದೇಶಕ್ಕೆ ಸ್ವಾತಂತ್ರ್ಯ ದೊ–ರೆತು 75 ವರ್ಷಗಳು ಗತಿಸಿದ ಈ ಕಾಲ ಘಟ್ಟದಲ್ಲಿ ದೇಶಾದ್ಯಂತ ಬಿಜೆಪಿ ಹರಗರ್ ತಿರಂಗ ಕಾರ್ಯಕ್ರಮದಡಿ ಸರ್ವರ ಮನೆಗಳ ಮೇಲೆ ನಮ್ಮ ತ್ರಿವರ್ಣಧ್ವಜ ಹಾರಾಡಬೇಕೆಂದು ಮನೆಗಳ ಮೇಲೆ ಧ್ವಜಾರೋಹಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಹೇಳಿದರು.

ಪಟ್ಟಣದ ತಮ್ಮ ನಿವಾಸದ ಮೇಲೆ ಮಂಗಳವಾರ ಹರ್‌ಗರ್ ತ್ರಿವರ್ಣ ಧ್ವಜಾರೋಹಣ ಕಾರ್ಯಕ್ರಮ ನಡೆಸಿದ ನಂತರ ಅವರು ಮಾತನಾಡಿದರು.

ಹರ್‌ಗರ್ ತಿರಂಗ ಕಾರ್ಯಕ್ರಮ ಆ.10ರಿಂದ ಆರಂಭವಾಗಿದೆ, ಎಲ್ಲಾ ಮನೆಗಳ ಮೇಲೆ ತ್ರಿವರ್ಣ ಧ್ವಜ ಹಾರಾಡಬೇಕು,



ಈ ಹಿನ್ನೆಲೆಯಲ್ಲಿ ಈ ಹಿಂದೆ ಹಮ್ಮಿಕೊಂಡಿದ್ದ ತಿರಂಗ ಯಾತ್ರೆ ಕಾರ್ಯಕ್ರಮದಡಿ 7 ತಿರಂಗ ಯಾತ್ರೆ ಕಾರ್ಯಕ್ರಮ ಹಮ್ಮಿಕೊಂಡಿದ್ದೆವು. ಪ್ರಧಾನಿ ನರೇಂದ್ರ ಮೋದಿಯವರ ಆದೇಶದಂತೆ ಅವರು ಕೊಟ್ಟಂತಹ ಎಲ್ಲಾ ಕಾರ್ಯಕ್ರಮಗಳನ್ನು ಹೊನ್ನಾಳಿ ಮತ್ತು ನ್ಯಾಮತಿ ಅವಳಿ ತಾಲೂಕುಗಳಲ್ಲಿ ಚಾಚೂ ತಪ್ಪದೇ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಾಮಾನ್ಯ ಜನರಿಗೆ ಮುಟ್ಟಿಸುವ ಕೆಲಸ ಮಾಡುತ್ತಿದ್ದೇವೆ ಎಂದು ಹೇಳಿದರು.

ತಿರಂಗ ಧ್ವಜವನ್ನು ಆರೋಹಣ ಮಾಡುವುದೆಷ್ಟು ಮುಖ್ಯವೋ, ಅದನ್ನು ಕೆಳಗಿಳಿಸುವುದು ಅಷ್ಟೇ ಮುಖ್ಯವಾದ ಪ್ರಯುಕ್ತ ಆ.15ರ ಸಂಜೆ ಸಮಯಕ್ಕೆ ಸರಿಯಾಗಿ ತಿರಂಗ ಧ್ವಜವನ್ನು ಕೆಳಗಿಳಿಸಬೇಕು ಎಂದು ಮನವಿ ಮಾಡಿದರು.

ಮೋದಿವರು ಪರಿಸರ ಸಂರಕ್ಷಣೆ ದೃಷ್ಠಿಯಿಂದ ತಾಯಿಯ ಹೆಸರಿನಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕೆ ಕರೆ ಕೊಟ್ಟ ಪ್ರಯುಕ್ತ, ಈಗಾಗಲೇ ಅವಳಿ ತಾಲೂಕಿನಾದ್ಯಂತ, ಶಾಲಾಕಾಲೇಜುಗಳ ಆವರಣ ಸೇರಿದಂತೆ ಇತರ ಕಾಲಿ ಸ್ಥಳಗಳಲ್ಲಿ 875 ಸಸಿಗಳನ್ನು ನೆಟ್ಟು ಅವುಗಳ ಸಂರಕ್ಷಣೆ ಜವಾಬ್ದಾರಿಯನ್ನು ನೀಡಲಾಗಿದೆ, ಮುಂದಿನ ದಿನಗಳಲ್ಲಿ ಸಾವಿರಕ್ಕೂ ಹೆಚ್ಚು ಸಸಿ ನೆಟ್ಟು ಪರಿಸರ ಸಂರಕ್ಷಣೆಗೆ ಕೈ ಜೋಡಿಸುವುದಾಗಿ ತಿಳಿಸಿದರು.

ನರೇಂದ್ರಮೋದಿಯವರ ಸ್ವಚ್ಛತಾ ಆಂದೋಲನ ಕಾರ್ಯಕ್ರಮದಡಿ ಪಟ್ಟಣದ ಸಂಗೊಳ್ಳಿ ರಾಯಣ್ಣ ಪ್ರತಿಮೆ ಒಳಾವರಣದಲ್ಲಿ ಸ್ವಚ್ಛಗೊಳಿಸಿ ಪ್ರತಿಮೆಗೆ ಗಂಗಾಜಲದಿಂದ ಶುಚಿಗೊಳಿಸಿ ಪುಷ್ಪನಮನ ಮಾಡಲಾಗಿದೆ ಎಂದು ಹೇಳಿದರು.

ಬಿಜೆಪಿ ಮಂಡಲ ಅಧ್ಯಕ್ಷ ಅರಕೆರೆ ನಾಗರಾಜ್, ಮಾಜಿ ಅಧ್ಯಕ್ಷ ಜೆ.ಕೆ.ಸುರೇಶ್, ಮುಖಂಡರಾದ ತರಗನಹಳ್ಳಿ ರಮೇಶಗೌಡ, ಬೀರಪ್ಪ, ರಂಗಪ್ಪ, ರವಿಕುಮಾರ್, ಬಾಬು ಹೋಬಳದಾರ್, ಮಂಜುನಾಥ ಇಂಚರ ಹಾಗೂ ಇತರರು ಇದ್ದರು.

# ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಆಶಾಕಾರ್ಯಕರ್ತೆಯರ ಪ್ರತಿಭಟನೆ

**ಚಿಕ್ಕಮಗಳೂರು–** ಮುಖ್ಯಮಂತ್ರಿಗಳು ಘೋಷಿಸಿದ ರಾಜ್ಯಸರ್ಕಾರದ ಗೌರವಧನ ಮತ್ತು ಕೇಂದ್ರದ ಭಾಗಶಃ ಪ್ರೋತ್ಸಾಹ ಧನ ಸೇರಿಸಿ ಮಾಸಿಕ 10 ಸಾವಿರ ರೂ ಗ್ಯಾರಂಟಿಗೊಳಿಸುವ ಆದೇಶವನ್ನು ಏಪ್ರಿಲ್‌ನಿಂದ ಅನ್ವಯವಾಗುವಂತೆ ಆದೇಶ ಹೊರಡಿಸಿ ಗೌರವಧನ ನೀಡಬೇಕೆಂದು ಒತ್ತಾಯಿಸಿ ಇಂದು ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ಜಿಲ್ಲಾ ಶಾಖೆ ಆಜಾದ್ ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ಜಿಲ್ಲೆಯಾದ್ಯಂತ ಆರೋಗ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಸುಮಾರು 500 ಕ್ಕೂ ಹೆಚ್ಚು ಆಶಾ ಕಾರ್ಯಕರ್ತೆಯರು ನಗರದ ಆಜಾದ್ ವೃತ್ತದಲ್ಲಿ ಸಮಾವೇಶಗೊಂಡು ಪ್ರತಿಭಟನೆ ನಡೆಸಿದರು. ನಂತರ ಅಪರ ಜಿಲ್ಲಾಧಿಕಾರಿ ನಾರಾಯಣ ಕನಕರಡ್ಡಿ ಅವರಿಗೆ ಮನವಿ ಸಲ್ಲಿಸಿ ಕೂಡಲೇ ನಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಮಾಡಿದರು.

ರಾಜ್ಯ ಬಜೆಟ್‌ನಲ್ಲಿ ಎಲ್ಲಾ ಅಂಗನವಾಡಿ ಮತ್ತು ಬಿಸಿಯೂಟ ಕಾರ್ಯಕರ್ತೆಯರಿಗೆ ಗೌರವಧನ ಹೆಚ್ಚಿಸಿದಂತೆ ಆಶಾ ಕಾರ್ಯಕರ್ತೆಯರಿಗೂ 1 ಸಾವಿರ ರೂ ಪ್ರೋತ್ಸಾಹಧನ ಹೆಚ್ಚಳ ಮಾಡಬೇಕೆಂದು ಒತ್ತಾಯಿಸಿದರು.

ಜನಸಂಖ್ಯೆಯ ಮಿತಿ, ಅವೈಜ್ಞಾನಿಕ ಮೌಲ್ಯಮಾಪನ ಶಿಕ್ಷಣದ ಹೆಸರಿನಲ್ಲಿ ಆಶಾ ಕಾರ್ಯಕರ್ತೆಯರನ್ನು ಕೈಬಿಡಲು ಹುನ್ನಾರ ನಡೆಸುತ್ತಿರುವ ಆದೇಶವನ್ನು ಕೈಬಿಡಬೇಕೆಂದು ಆಗ್ರಹಿಸಿದರು.

ಸಂಘದ ಜಿಲ್ಲಾಧ್ಯಕ್ಷೆ ತಾರಾಕೃಷ್ಣ ಮಾತನಾಡಿ, ಸರ್ಕಾರ ಕೊಟ್ಟ ಮಾತಿನಂತೆ ಆಶಾ ಕಾರ್ಯಕರ್ತೆಯರಿಗೆ 10 ಸಾವಿರ ರೂ ಗೌರವ




ಧನ ಕೂಡಲೇ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು. ಬೇಡಿಕೆಗಳನ್ನು ತಕ್ಷಣವೇ ಈಡೇರಿಸದಿದ್ದರೆ ಇಂದು ಜಿಲ್ಲಾಮಟ್ಟದಲ್ಲಿ ಮುಂದೆ ರಾಜ್ಯಮಟ್ಟದಲ್ಲಿ ಪ್ರತಿಭಟನೆ ನಡೆಸಲು ಆಶಾ ಕಾರ್ಯಕರ್ತೆಯರು ಮುಂದಾಗುವುದಾಗಿ ಎಚ್ಚರಿಸಿದ ಅವರು, ಇಂದು ರಾಜ್ಯದ 31 ಜಿಲ್ಲಾಕೇಂದ್ರದಲ್ಲಿ ಪ್ರತಿಭಟನೆ ನಡೆಸಲಾಗುವುದೆಂದು ಹೇಳಿದರು.ಕಳೆದ ವರ್ಷ ಬೆಂಗಳೂರಿನ ಸ್ವತಂತ್ರ ಮೈದಾನದಲ್ಲಿ ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ನಡೆದ ಪ್ರತಿಭಟನೆಯ ಸಂದರ್ಭದಲ್ಲಿ ಆಗಮಿಸಿದ್ದ ಮುಖ್ಯಮಂತ್ರಿಗಳು ಇನ್ನೊಂದು ತಿಂಗಳಲ್ಲಿ ನಿಮ್ಮ ಬೇಡಿಕೆಗಳನ್ನು ಈಡೇರಿಸುವುದಾಗಿ ಭರವಸೆ ನೀಡಿದ್ದು, ಇದೂವರೆಗೂ ಕಾರ್ಯರೂಪಕ್ಕೆ ತಂದಿಲ್ಲ ಎಂದು ದೂರಿದರು.

ಸಮಾಜ ಸೇವಕಿ ರಾಧಾಸುಂದ್ರೇಶ್ ಮಾತನಾಡಿ, ಆಶಾ ಕಾರ್ಯಕರ್ತೆರು ಮಾಡಿದ ಕೆಲಸಕ್ಕೆ ಸಮಾನಾಗಿ ವೇತನ ಕೊಡಿ ಎಂದು ಕೇಳುತ್ತಿದ್ದಾರೆ. ನ್ಯಾಯಯುತವಾಗಿರುವ ಅವರ ಬೇಡಿಕೆಗಳನ್ನು ಕೂಡಲೇ ಸರ್ಕಾರ ಇತ್ಯರ್ಥಪಡಿಸಲು ಮುಂದಾಗಬೇಕು ಎಂದು ಆಗ್ರಹಿಸಿದರು. ಆಶಾ ಕಾರ್ಯಕರ್ತೆಯರು ನಡೆಸುತ್ತಿರುವ ಈ ಹೋರಾಟಕ್ಕೆ ಬೆಂಬಲ ನೀಡುವುದಾಗಿ ಘೋಷಿಸಿದ ಅವರು, ಸರ್ಕಾರ ನುಡಿದಂತೆ ನಡೆಯಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಎಐಟಿಯುಸಿ ಮುಖಂಡ ಶಿವಪ್ರಕಾಶ್, ಜಿಲ್ಲಾ ಕಾರ್ಯದರ್ಶಿ ಮೈನಾ, ಸಂಘದ ತಾಲ್ಲೂಕು ಅಧ್ಯಕ್ಷರುಗಳಾದ ಜ್ಯೋತಿ, ಗೀತಾ, ವಿಮಲಾಕ್ಷಿ.ಬಿ, ಗಾಯತ್ರಿ, ಪವಿತ್ರ, ನಿರ್ಮಲ, ರತ್ನಮ್ಮ, ಸಾವಿತ್ರಿ, ಪ್ರೇಮ, ರೇಷ್ಮ, ಶ್ರೀಲತ, ಆಶಾ, ರೇಣುಕ, ನಂದಿನಿ, ಶೀಲಾ, ನಾಗಮ್ಮ, ನಳಿನ, ಚಂದ್ರಿಕ, ಶಾಂತ, ಮಂಜುಳ, ಲಾವಣ್ಯ, ಮಾಲತಿ, ಕನ್ನಡ ಸೇನೆ ಅಧ್ಯಕ್ಷ ರಾಜೇಗೌಡ, ಮತ್ತಿತರರು ಇದ್ದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ವಿಧಿಯನ್ನು ಆಧರಿಸದಿರಿ ಮತ್ತು ನಿಮ್ಮ ಆರೋಗ್ಯ ಸುಧಾರಿಸಲು ಪ್ರಯತ್ನಿಸಿ ಏಕೆಂದರೆ ಅದೃಷ್ಟವು ಒಂದು ಸೋಮಾರಿ ದೇವತೆಯಾಗಿದ್ದು ಇದು ಎಂದಿಗೂ ತಾನಾಗಿಯೇ ನಿಮ್ಮ ಬಳಿ ಬರುವುದಿಲ್ಲ. ನಿಮ್ಮ ತೂಕವನ್ನು ನಿಯಂತ್ರಿಸಲು ಮತ್ತು ನಿಮ್ಮ ಆರೋಗ್ಯವನ್ನು ಪುನಃ ಪಡೆಯಲು ವ್ಯಾಯಾಮ ಮಾಡಲು ಇದು ಒಳ್ಳೆಯ ಸಮಯ. ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

### ವೃಷಭ ರಾಶಿ

ಯಶಸ್ಸು ಹತ್ತಿರವಿರುವಂತೆ ತೋರಿದರೂ ಸಹ ಶಕ್ತಿ ಕುಂಠಿತವಾಗುತ್ತದೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ. ಅವರ ಆಸಕ್ತಿ ಕಾಯ್ದುಕೊಳ್ಳಲು ಪ್ರೀತಿಯ ಅಸ್ತ್ರ ಬಳಸಿ ಮತ್ತು ಯಾವುದೇಅನಗತ್ಯ ಒತ್ತಡ ತಪ್ಪಿಸಿ. ಪ್ರೀತಿಯಿಂದ ಪ್ರೀತ ಜನಿಸುತ್ತದೆಂದು ನೆನಪಿಡಿ.

### ಮಿಥುನ ರಾಶಿ

ವಿಶೇಷವಾಗಿ ಬಿಕ್ಕಟ್ಟಿನ ಸಮಯದಲ್ಲಿ ನಿಮ್ಮ ತಾಳ್ಮೆ ಕಳೆದುಕೊಳ್ಳಬೇಡಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ಒಟ್ಟಾರೆ ಒಂದು ಲಾಭದಾಯಕ ದಿನವಾದರೂ ನೀವು ನಿರಾಸೆ ಭರವಸೆಯಿಡಬಹುದಾದ ಯಾರಾದರೂ ನಿಮ್ಮನ್ನು ನಿರಾಸೆಗೊಳಿಸುತ್ತಾರೆ.

### ಕರ್ಕ ರಾಶಿ

ಅನಿರೀಕ್ಷಿತ ಪ್ರಯಾಣದಿಂದ ಸುಸ್ತಾಗಬಹುದು ಹಾಗೂ ಇದು ನಿಮ್ಮನ್ನು ಕರಿಕಿರಿಗೊಳ್ಳುವಂತೆ ಮಾಡಬಹುದು. ಸ್ನಾಯುಗಳಿಗೆ ಆರಾಮ ನೀಡಲು ನಿಮ್ಮ ದೇಹವನ್ನು ತೈಲದಿಂದ ಮಸಾಜ್ ಮಾಡಿ ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ 'ಯೋಜನೆಗಳಲ್ಲಿ ಹೂಡಿಕೆ ಮಾಡಿ. ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು. ನೀವು ಇಂದು ಪ್ರೀತಿಯ ಸಮೃದ್ಧ ಚಾಕೋಲೇಟ್‌ನ ರುಚಿ ಸವಿಯುತ್ತೀರಿ.

### ಸಿಂಹ ರಾಶಿ

ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು– ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ಕೌಟುಂಬಿಕ ಕಾರ್ಯಗಳು ಮತ್ತು ಪ್ರಮುಖ ಸಮಾರಂಭಗಳಿಗೆ ಪವಿತ್ರವಾದ ದಿನ. ಪ್ರೀತಿಪಾತ್ರರು ಪ್ರಣಯದ ಮೂಡ್‌ನಲ್ಲಿರುತ್ತಾರೆ. ಇಂದು ನಿಮ್ಮ ಮನಸ್ಸಿನಲ್ಲಿ ಉದ್ಭವವಾಗುವ ಹೊಸ ಹಣಗಳಿಕೆಯ ವಿಚಾರಗಳ ಲಾಭ ತೆಗೆದುಕೊಳ್ಳಿ.

### ಕನ್ಯಾ ರಾಶಿ

ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ. ನೀವು ನಿಮ್ಮ ಸ್ನೇಹಿತರೊಂದಿಗೆ ಎಲ್ಲಿಗಾದರೂ ಸುತ್ತಾಡಲು ಹೋಗುತ್ತಿದ್ದರೆ, ಹಣವನ್ನು ಚೆನ್ನಾಗಿ ಯೋಚಿಸಿ ಖರ್ಚು ಮಾಡಿ. ಹಣದ ನಷ್ಟವಾಗಬಹುದು. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ.

### ತುಲಾ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ನಿಮ್ಮ ಮಕ್ಕಳ ಸಮಸ್ಯೆಗಳನ್ನು ನಿಭಾಯಿಸಲು ಸ್ವಲ್ಪ ಸಮಯ ತೆಗೆದುಕೊಳ್ಳಿ.

### ವೃಶ್ಚಿಕ ರಾಶಿ

ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ – ಯಾವುದೇ ಬದ್ಧತೆಗೊಳಗಾಗುವ ಮುನ್ನ ಸಾಧಕ ಬಾಧಕಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ.

### ಧನು ರಾಶಿ

ನೀವು ಭಯವೆಂಬ ದೈತ್ಯನ ಜೊತೆ ಹೋರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ. ಇಲ್ಲದಿದ್ದಲ್ಲಿ ನೀವು ಈ ರಾಕ್ಷಸನಿಗೆ ಒಬ್ಬ ಜಡ ಮತ್ತು ನಿಷ್ಕರುಣೆಯ ಬಲಿಯಾಗುತ್ತೀರಿ. ನಕ್ಷತ್ರಪುಂಜಗಳ ಚಾಲನೆ ನಿಮಗಾಗಿ ಉತ್ತಮವಾಗಿಲ್ಲ. ಇಂದಿನ ದಿನ ನೀವು ನಿಮ್ಮ ಹಣವನ್ನು ತುಂಬಾ ಸುರಕ್ಷಿತವಾಗಿಡಬೇಕು. ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ. ನಿಮ್ಮ ಪ್ರಿಯತಮೆಯ ಜೊತೆ ಇಂದು ಸಭ್ಯತೆಯಿಂದ ವರ್ತಿಸಿ.

### ಮಕರ ರಾಶಿ

ಯಾರಾದರೂ ನಿಮಗೆ ಅಸಮಾಧಾನವುಂಟುಮಾಡಬಹುದ ಾದರೂ ಈ ಕಿರಿಕಿರಿಗಳು ನಿಮ್ಮನ್ನು ಆವರಿಸಲು ಬಿಡಬೇಡಿ. ಈ ಅನಾವಶ್ಯಕವಾದ ಚಿಂತೆಗಳು ಮತ್ತು ಉದ್ವೇಗಗಳು ದೇಹದ ಮೇಲೆ ಖಿನ್ನತೆಯ ಪರಿಣಾವ ಬೀರಬಹುದು ಮತ್ತು ಚರ್ಮದ ಸಮಸ್ಯೆ ಉಂಟುಮಾಡಬಹುದು. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ.

### ಕುಂಭ ರಾಶಿ

ನಿಮ್ಮ ಪ್ರಚಂಡ ಬೌದ್ಧಿಕ ಸಾಮರ್ಥ್ಯ ಅಂಗವೈಕಲ್ಯದ ವಿರುದ್ಧ ಹೊರಾಡಲು ಸಹಾಯ ಮಾಡುತ್ತದೆ. ಕೇವಲ ಸಕಾರಾತ್ಮಕ ಆಲೋಚನೆಗಳ ಜೊತೆ ಮಾತ್ರ ನೀವು ಈ ಸಮಸ್ಯೆಯ ವಿರುದ್ಧ ಹೊರಾಡಬೇಕು. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು.

### ಮೀನ ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನಿಮ್ಮ ಮನೆಯಲ್ಲಿ ಸ್ವಲ್ಪ ಸ್ವಚ್ಛತಾ ಕಾರ್ಯವನ್ನು ತಕ್ಷಣ ಕೈಗೊಳ್ಳಬೇಕು.

## ಕಲೆಯಿಂದ ಮನ ಮುದ, ಬದುಕು ಹದ: ಮಮತಾ ಅರಸೀಕೆರೆ

**ಚಿಕ್ಕಮಗಳೂರು:** ಕಲಾವಿದರಿಗೆ ಸಂಯಮ ಹೆಚ್ಚಾಗಿರುತ್ತದೆ. ಕಲೆಯೊಂದಿಗಿನ ಸಾಮರಸ್ಯದಿಂದ ಮನಸ್ಸು ಮುದಗೊಳ್ಳುವುದರ ಜೊತೆಗೆ ಬದುಕೂ ಹದಗೊಳ್ಳುತ್ತದೆ ಎಂದು ಕರ್ನಾಟಕ ನಾಟಕ ಅಕಾಡೆಮಿ ಸದಸ್ಯೆ, ಕವಯತ್ರಿ ಮಮತಾ ಅರಸೀಕೆರೆ ಹೇಳಿದರು.

ನಗರದ ಕೆಂಪನಹಳ್ಳಿಯ ಕಲ್ಕಟ್ಟೆ ಪುಸ್ತಕದ ಮನೆಯಲ್ಲಿ ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಗೌರವ ಸ್ವೀಕರಿಸಿ ಅವರು ಮಾತನಾಡಿದರು.

ಯಾವುದೇ ಕಲೆಯು ಹುಟ್ಟಿನಿಂದ ಬಂದಿದ್ದರೂ ಸಾಧನೆ ಇಲ್ಲದಿದ್ದರೆ ಅದು ಜನಪ್ರಿಯವಾಗುವುದಿಲ್ಲ. ಜೊತೆಗೆ ಪರಿಪೂರ್ಣತೆಯ ಕಡೆಗೆ ಹೊರಳುವುದೂ ಇಲ್ಲ. ಆಧುನಿಕ ಕಾಲದಲ್ಲಿ ಸುಮ್ಮನೆ ಕುಳಿತರೆ ಅವಕಾಶವೂ ಲಭಿಸುವುದಿಲ್ಲ. ಸಾಧನೆ ಜೊತೆಗೆ ಮುನ್ನುಗ್ಗುವ ಛಾತಿಯೂ ಇರಬೇಕು. ಒಳ್ಳೆಯ ಕಲಾವಿದರು ಮೌನವಾದರೆ ಸಾಮಾನ್ಯ ಕಲಾವಿದರು ಕಲೆಯನ್ನು ಎತ್ತರಕ್ಕೆ ಕೊಂಡೊಯ್ಯುವಲ್ಲಿ ಸೋಲುತ್ತಾರೆ. ಆಗ ಒಂದು ಕಲಾಪ್ರಕಾರವೇ ಅವನತಿಯ ಹಾದಿ ಹಿಡಿಯುತ್ತದೆ ಎಂದು ಅಭಿಪ್ರಾಯಪಟ್ಟರು.

ಶ್ರುತಿ ಶುದ್ಧ ಗಾಯಕ ಮೌನವಾದರೆ ಅಪಶ್ರುತಿಯವರೇ ಮುನ್ನುಗ್ಗುತ್ತಾರೆ. ಆಗ ಹಾಳಾಗುವುದು ಸಂಗೀತ. ಇದರ ಸಹವಾಸವೇ ಬೇಡ ಎಂದು ಶ್ರೋತೃ ದೂರ ಸರಿಯುತ್ತಾನೆ. ಒಳ್ಳೆಯ ಬರಹಗಾರ ಅಪರೂಪಕ್ಕೆ ಬರೆದರೆ, ಸಾಮಾನ್ಯ ಬರಹಗಾರ ಮುನ್ನೆಲೆಗೆ ಬಂದರೆ, ಸಾಹಿತ್ಯದ ಸಹವಾಸವೇ ಬೇಡ ಎಂದು ಓದುಗರು ಹಿಂದೆ ಸರಿಯುತ್ತಾರೆ. ಅದೇ ರೀತಿ ತಾಂತ್ರಿಕ ವೈಭವದಿಂದ ನಟ, ನಟಿಯರೂ ಈಗ ಅದ್ಭುತ ಅನಿಸುತ್ತಾರೆ. ಆದರೆ ನೈಜ ಕಲೆಯ ದೃಷ್ಟಿಯಿಂದ ನೋಡಿದಾಗ ಇದೂ ಸಹ ಸೋಲಾಗಿ ಕಾಣುತ್ತದೆ ಎಂದು ಮಮತಾ ವಿಶ್ಲೇಷಿಸಿದರು.

ತೊಗರಿಹಂಕಲ್‌ನ ಶಿಕ್ಷಕಿ ಸುನೀತಾ ಮಾತನಾಡಿ, ಮಮತಾ ಅರಸೀಕೆರೆಯವರ ಕವನಗಳು ಜನರ ಮನಸ್ಸು ತಟ್ಟುತ್ತವೆ. ನೇರ ನಿಷ್ಠುರತನದಿಂದ ಇವರು ವಸ್ತು ಪ್ರೀತಿಯಿಂದ ಇಷ್ಟವಾಗುತ್ತಾರೆ. ಉದ್ಯೋಗ ಮತ್ತು ಹವ್ಯಾಸ ಎಲ್ಲವನ್ನೂ



ನಗರದ ಕೆಂಪನಹಳ್ಳಿಯ ಕಲ್ಕಟ್ಟೆ ಪುಸ್ತಕದ ಮನೆಯಲ್ಲಿ ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಕರ್ನಾಟಕ ನಾಟಕ ಅಕಾಡೆಮಿ ಸದಸ್ಯೆ ಮಮತಾ ಅರಸೀಕೆರೆ ಅವರನ್ನು ಗೌರವಿಸಲಾಯಿತು.

ನಿಭಾಯಿಸುವ ತಾಕತ್ತು ಎಲ್ಲರಿಗಿರುವುದಿಲ್ಲ. ಅದು ಮಮತಾ ಅವರಿಗೆ ಲಭಿಸಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಕಲೇಶಪುರ ಸ್ಪೈಸಸ್ ಬೋರ್ಡ್‌ನ ನಿವೃತ್ತ ಅಧಿಕಾರಿ ರೋನಾಲ್ಡ್ ಮಾತನಾಡಿ, ಬೇರೆ ಬೇರೆ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಕರೆಸಿ ಕೆಂಪನಹಳ್ಳಿಯ ನಮ್ಮ ವಠಾರವನ್ನು ಕಲ್ಕಟ್ಟೆ ಪುಸ್ತಕದ ಮನೆಯು ಸಾಂಸ್ಕೃತಿಕವಾಗಿ ಶ್ರೀಮಂತಗೊಳಿಸುತ್ತಿದೆ. ನಾಡಿನ ಸುವಿಖ್ಯಾತರನ್ನು ಹತ್ತಿರದಲ್ಲಿ ಕಂಡು ಮಾತನಾಡಿಸುವ ಅವಕಾಶ ನಮಗೆ ಇದರಿಂದ ಲಭ್ಯವಾಗುತ್ತಿದೆ. ಮುಂದಿನ ಪೀಳಿಗೆಯ ಕುತೂಹಲ ಹೆಚ್ಚಾಗಲು ಇದು ಸಹಕಾರಿ ಎಂದು ಹೇಳಿದರು.

ಪ್ರಮುಖರಾದ ಕೇದಾರ್, ಕಮಲಾಕ್ಷಿ, ಅನನ್ಯ, ಹಿರೇಮಗಳೂರು ರಾಕೇಶ್, ಸುಜಾತಾ, ಕಮಲಮ್ಮ, ಸಚಿನ್ ಮೊದಲಾದವರು ಉಪಸ್ಥಿತರಿದ್ದರು. ನಾಗರಾಜರಾವ್ ಕಲ್ಕಟ್ಟೆ ನಿರೂಪಿಸಿ, ವಂದಿಸಿದರು.

## ಧರ್ಮಸ್ಥಳದ ಧರ್ಮರಕ್ಷಣೆಗೆ ಸಭೆ

**ದಾವಣಗೆರೆ :** ಧರ್ಮಸ್ಥಳ..ಲಕ್ಷಾಂತರ ಸದ್ಭಕ್ತರ ಪುಣ್ಯಸ್ಥಳ! ಶತಮಾನಗಳ ಇತಿಹಾಸದ ಪರಂಪರೆಯಲ್ಲಿ ನೇತ್ರಾವತಿಯ ತಟದಲ್ಲಿ ನೆಲೆಯಾದ ಮಂಜುನಾಥ ಸ್ವಾಮಿಯ ಆರಾಧನೆಯಲ್ಲಿ, ಸಾವಿರಾರು ಸಾಮಾಜಿಕ ಕಾರ್ಯಗಳ ಮೂಲಕ ಜಗತ್ ಪ್ರಸಿದ್ಧಿಯನ್ನ ಕಂಡ ಕ್ಷೇತ್ರ ಈಗ ವಿವಾದಗಳ ಸುಳಿಯಲ್ಲಿ ಸಿಲುಕಿರುವುದು ಭಕ್ತ ಕೋಟಿಗೆ ಅರಗಿಸಲಾಗದಷ್ಟು ನೋವಿಗೆ ಕಾರಣವಾಗುತ್ತಿದೆ.

ಆದ್ದರಿಂದ ಕರಾವಳಿ ಮಿತ್ರ ಮಂಡಳಿ ದಾವಣಗೆರೆ ಇವರ ವತಿಯಿಂದ ನಾಳೆ ಬೆಳಗ್ಗೆ ನಗರದ ರೋಟರಿ ಬಾಲಭವನದಲ್ಲಿ ಬೆಳಗ್ಗೆ 11.,00 ಗಂಟೆಗೆ ಸಾರ್ವಜನಿಕರ ಸಭೆ ಕರೆಯಲಾಗಿದೆ

ಈ ಸಭೆಯ ಅಧ್ಯಕ್ಷರಾಗಿ ನಗರದ ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿಯವರು ವಹಿಸಲಿದ್ದಾರೆ ಈ ಕಾರ್ಯಕ್ರಮಕ್ಕೆ ತಾವೆಲ್ಲರೂ ಆಗಮಿಸಿ ಬೆಂಬಲ ಸೂಚಿಸಬೇಕಾಗಿ ತಮ್ಮಲ್ಲಿ ವಿನಂತಿ ಎಂದು ಕರಾವಳಿ ಮಿತ್ರಮಂಡಳಿಯ ಪದಾಧಿಕಾರಿಗಳಾದ ಅಂಕಿತ್ ಹಾಗೂ ಮಹೇಶ್ ಶೆಟ್ಟಿ ಸಂಕಲ್ಪ ಫೌಂಡೇಶನ್ ಮಾಂತೇಶ್ ರಿದ್ದಿ –ಸಿದ್ದಿ ಫೌಂಡೇಶನ್ ರಾಜು



ಭಂಡಾರಿ ಶ್ರೀಕಾಂತ್ ಬಗೆರ ಯುವ ಮುಖಂಡರಾದ ಸಾಗರ್ ಎಲ್ ಎಮ್ ಎಚ್ ತಿಳಿಸಿದ್ದಾರೆ

## ಪರಿಶಿಷ್ಟರ ಅಭಿವೃದ್ಧಿಗಾಗಿ ವಿವಿಧ ಆರ್ಥಿಕ ಯೋಜನೆಗಳಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲೆಯ ಪರಿಶಿಷ್ಟ ಜಾತಿಯವರ ಆರ್ಥಿಕ ಅಭಿವೃದ್ಧಿಗಾಗಿ

ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಆದಿಜಾಂಬವ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಹಾಗೂ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮಗಳಿಂದ 2025-26 ನೇ ಸಾಲಿಗೆ ವಿವಿಧ ಯೋಜನೆಗಳಡಿ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿಯನ್ನು ಸಲ್ಲಿಸಲು ಸೆ.10 ರಂದು ಕೊನೆಯ ದಿನವಾಗಿದ್ದು, 2023-24 ಮತ್ತು 2024-25 ನೇ ಸಾಲಿನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಿದವರು ಮತ್ತೊಮ್ಮೆ ಅರ್ಜಿಯನ್ನು ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ವಿವಿಧ ಆರ್ಥಿಕ ಯೋಜನೆಗಳಾದ ನೇರಸಾಲ ಯೋಜನೆ, ಉದ್ಯಮಶೀಲತಾ ಅಭಿವೃದ್ಧಿ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಫಾಸ್ಟ್ ಫುಡ್ ಟ್ರಕ್ ಟ್ರೈಲರ್/ಮೊಬೈಲ್ ಕಿಚನ್ ಫುಡ್ ಕಿಯೋಸ್ಕ್, ಹೈನುಗಾರಿಕೆ ಯೋಜನೆ, ಕುರಿ ಸಾಕಾಣಿಕೆ ಯೋಜನೆ, ಮೈಕ್ರೋಕ್ರೆಡಿಟ್ ಪ್ರೇರಣಾ ಯೋಜನೆ, ಗಂಗಾ ಕಲ್ಯಾಣ

ಯೋಜನೆ, ಹಾಗೂ ಭೂ ಒಡೆತನ ಯೋಜನೆಗಳಿಗೆ ಶಿವಮೊಗ್ಗ-1, ಗ್ರಾಮ-1, ಕರ್ನಾಟಕ-1, ಸೇವಾ ಸಿಂಧು, ಪೋರ್ಟಲ್ ಮೂಲಕ ದಾಖಲೆಗಳೊಂದಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ https://sevasindhu.karnataka.gov.in ಹಾಗೂ ದೂ.ಸಂ.08182-224349 ನ್ನು ಸಂಪರ್ಕಿಸಬಹುದು ಎಂದು ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರೋಗ್ಯಯುತ ಆಹಾರ ಪದ್ಧತಿ ಪಾಲಿಸಿ ವೈದ್ಯರ ಸಲಹೆಯ ನಿರ್ಲಕ್ಷ್ಯ ಬೇಡ ಕಡ್ಡಾಯ ದೈಹಿಕ ಚಟುವಟಿಕೆ ಇರಲಿ

**ಹಾಸನ:** ಆರೋಗ್ಯಯುತ ಆಹಾರ ಪದ್ಧತಿಯೊಂದಿಗೆ ವೈದ್ಯರ ಸಲಹೆಗಳನ್ನು ಪಾಲಿಸಿದರೆ ಮಧುಮೇಹ ಕಾಯಿಲೆಯನ್ನು ನಿಯಂತ್ರಿಸಬಹುದು ಎಂದು ಖ್ಯಾತ ಮಧುಮೇಹ ತಜ್ಞ ಮತ್ತು ವಿಶ್ರಾಂತ ಕುಲಪತಿ ಡಾ//ಎಂ.ಎ ಶೇಖರ್ ಸಲಹೆ ನೀಡಿದರು.

ನಗರದ ಎಂ.ಜಿ ರಸ್ತೆಯ ಶ್ರೀಣಟಿಜಜಜಿಟಿಜಜ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ನಡೆದ 'ಗುರು ತೋರಿದ ದಾರಿ ತಿಂಗಳ ಮಾಮನ ತೇರು' 131ನೇ ಹುಣ್ಣಿಮೆ ಕಾರ್ಯಕ್ರಮದಲ್ಲಿ ಅಂಗೈಯಲ್ಲಿ ಆರೋಗ್ಯ ಎಂಬ ವಿಷಯದ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು.

ನಾವು ಸಾಧ್ಯವಾದಷ್ಟು ನೈಸರ್ಗಿಕವಾದ ರೀತಿಯಲ್ಲಿ, ನಮಗೆ ಬಂದಿರುವ ಆರೋಗ್ಯ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಪ್ರಯತ್ನ ಪಡಬೇಕು. ಯಾಕೆಂದರೆ ನೈಸರ್ಗಿಕವಾಗಿ ಸಿಗುವ ಆಹಾರ ಪದಾರ್ಥಗಳಿಂದ ದೇಹಕ್ಕೆ ಯಾವುದೇ ರೀತಿಯ ಅಡ್ಡಪರಿಣಾಮಗಳು ಕೂಡ ಎದುರಾಗುವುದಿಲ್ಲ,ಪ್ರಾದೇಶಿಕವಾಗಿ ಬೆಳೆಯುವ ಆಹಾರ ಪದ್ಧತಿಯನ್ನು ರೂಢಿಸಿಕೊಳ್ಳುವುದರಿಂದ ದೈಹಿಕವಾಗಿ ಆರೋಗ್ಯಕ್ಕೆ ಹೆಚ್ಚಿನ ಲಾಭ ಸಿಗಬಹುದು ಎಂದರು.

ಸಾವಿರಾರು ವರ್ಷಗಳಿಂದಲೂ ಪ್ರಸಿದ್ಧವಾಗಿರುವ ಆಯುರ್ವೇದ ಪದ್ಧತಿ ಈಗಲೂ ಕೂಡ ನಮ್ಮೆಲ್ಲರ ಮಧ್ಯೆ ಇದೆ. ಆಹಾರ,ವಿಹಾರ,ವಿಚಾರ ಇದಿಷ್ಟನ್ನು ನಿಖರವಾಗಿ ಅರಿತರೆ ಮಧುಮೇಹವನ್ನು ನಿಯಂತ್ರಣದಲ್ಲಿ ಇಟ್ಟುಕೊಳ್ಳಬಹು. ಇದಕ್ಕಾಗಿ ವೈದ್ಯರು ನೀಡಿದ ಔಷಧಿಗಳು ಹಾಗೂ ಕಟ್ಟು ನಿಟ್ಟಿನ ಆಹಾರ ಪದ್ಧತಿಯನ್ನು ಅನುಸರಿಸಬೇಕು, ಅಲ್ಲದೆ ಪ್ರತಿದಿನ ವ್ಯಾಯಾಮವನ್ನು ಶಿಸ್ತುಬದ್ಧವಾಗಿ ಅನುಸರಿಬೇಕು ಎಂದು ತಿಳಿಸಿದರು.

ಮಧುಮೇಹ ಕಾಯಿಲೆ ಇರುವವರು ಯಾವುದನ್ನು ತಿನ್ನಬೇಕು ಎನ್ನುವುದಕ್ಕಿಂತ ಯಾವುದನ್ನು ತಿನ್ನಬಾರದು ಎಂಬುದರ ಬಗೆಗೆ ಹೆಚ್ಚಿನ ಕಾಳಜಿ ವಹಿಸುವುದು ಒಳ್ಳೆಯದು. ಆಹಾರ ಇರಲಿ,ಇಲ್ಲವೇ ಹಣ್ಣುಗಳಿರಲಿ ಯಾವುದನ್ನು ಎಷ್ಟು ಬಳಸಬೇಕು ಯಾವ ಹಣ್ಣುಗಳಿಂದ ಕೊಂಚ ಅಂತರ ಕಾಯ್ದುಕೊಳ್ಳಬೇಕು ಎಂಬುದನ್ನು ಅರಿಯುವುದು ಒಳ್ಳೆಯದು ಎಂದ ಅವರು ಇಲ್ಲದರ ಬಗೆಗೆ ಚಿಂತಿಸುವುದನ್ನು ಬಿಟ್ಟು ಇರುವುದರಲ್ಲಿ ಖುಷಿ ಪಡಿ ಅಲ್ಲದೆ ಒತ್ತಡದಿಂದ ದೂರವಿರಿ ಎಂದರು.

ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಹಾಸನ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಮಾತನಾಡಿ, ಮಧುಮೇಹವನ್ನು ನಿಯಂತ್ರಣ ಮಾಡುವುದು ಸ್ವಲ್ಪ ಕಷ್ಟವಾದರೂ, ಶರೀರಕ್ಕೆ ಒಗ್ಗುವ ಆಹಾರ ಶೈಲಿಯನ್ನು ರೂಢಿಸಿಕೊಂಡು ಉತ್ತಮ ಆರೋಗ್ಯ ಕಾಯ್ದುಕೊಳ್ಳಲು ಸಾಧ್ಯವಿದೆ ಎಂದರು.

ಮನುಷ್ಯನಿಗೆ ಉತ್ತಮ ಆರೋಗ್ಯ ಕಾಯ್ದುಕೊಳ್ಳಲು ಪರಿಸರದ ಸಮತೋಲನ ಕೂಡ ಮುಖ್ಯ.ಈ ನಿಟ್ಟಿನಲ್ಲಿ ಪರಿಸರವನ್ನು ಉಳಿಸುವ ಕೆಲಸವನ್ನು ಎಲ್ಲರೂ ಸೇರಿ ಮಾಡಬೇಕಿದೆ ಎಂದ ಅವರು,ಭೈರವೈಕ್ಯ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿಯವರು 5 ಕೋಟಿ ಸಸಿ ನೆಟ್ಟು ಬೆಳಸಿದ್ದರು ಎಂಬುದನ್ನು ಸ್ಮರಿಸಿದರು.



ಹಾಸನದ ಶ್ರೀ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ನಡೆದ ಗುರು ತೋರಿದ ದಾರಿ ತಿಂಗಳ ಮಾಮನ ತೇರು 131ನೇ ಹುಣ್ಣಿಮೆ ಕಾರ್ಯಕ್ರಮವನ್ನು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನದ ಮಠ ಹಾಸನದ ಶ್ರೀ ಶಂಭುನಾಥ ಸ್ವಾಮೀಜಿ ಉದ್ಘಾಟಿಸಿದರು.

**ಬದುಕಿನಲ್ಲಿ ಸೋದರನ ಪಾತ್ರ ಬಹಳ ಮುಖ್ಯ. ಸಹೋದರ ಸಹೋದರಿಯ ಬಾಂದವ್ಯದ ಸಂಕೇತವಾಗಿ ಆಚರಿಸುವ ರಕ್ಷಾ ಬಂಧನ ಹಬ್ಬಕ್ಕೆ ಅದರದೇ ಆದ ಹಿನ್ನಲೆಯಿದೆ. ಇದು ಸಮಾಜದಲ್ಲಿ ಒಳಿತನ್ನು ಸಾರುವ ಸಂಬಂಧಗಳನ್ನು ಬೆಸೆಯುವ ಹಬ್ಬವಾಗಿದೆ.**
**ಶ್ರೀ ಶಂಭುನಾಥ ಸ್ವಾಮೀಜಿ**
**ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಹಾಸನ ಶಾಖಾ ಮಠ,ಹಾಸನ**

ಕಾರ್ಯಕ್ರಮದಲ್ಲಿ ಹಾಸನ ರೆಡ್ ಕ್ರಾಸ್ ಸಂಸ್ಥೆಯ ಅಧ್ಯಕ್ಷ ಹೆಮ್ಮಿಗೆ ಮೋಹನ್,ರಾಜ್ಯ ಒಕ್ಕಲಿಗರ ಸಂಘದ ಸದಸ್ಯ ರಘುಗೌಡ, ಸಮಾಜ ಸೇವಕ ಲಕ್ಷ್ಮೀಕಾಂತ್ (ಕಂಚಮಾರನಹಳ್ಳಿ ಕಾಂತಣ್ಣ),ಶ್ರೀ ಮಠದ ವ್ಯವಸ್ಥಾಪಕ ಚಂದ್ರಶೇಖರ್, ಕಸಾಪ ಗೌರವ ಕಾರ್ಯದರ್ಶಿ ಬಿ.ಆರ್ ಬೊಮ್ಮೇಗೌಡ,ಡಾ. ದೇವಿಪ್ರಸಾದ್,ಜಯಲಕ್ಷ್ಮೀ ರಾಜಣ್ಣ, ಶಿವರಾಮೇಗೌಡ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಉಪನ್ಯಾಸಕ ಮಂಜುನಾಥ್ ಕಾರ್ಯಕ್ರಮದ ನಿರೂಪಣೆ ನಡೆಸಿಕೊಟ್ಟರು. ಭಾಗ್ಯಲಕ್ಷ್ಮೀ ಪ್ರಾರ್ಥಿಸಿದರು.ಬಿಜಿಎಸ್ ಪಿಯು ಕಾಲೇಜಿನ ಪ್ರಾಂಶುಪಾಲ ಮೋಹನ್ ಸ್ವಾಗತಿಸಿದರು, ಬಿಜಿಎಸ್ ಆಂಗ್ಲ ಮಾಧ್ಯಮ ಶಾಲೆಯ ಮುಖ್ಯೋಪಾಧ್ಯಾಯ ದರ್ಶನ್ ವಂದಿಸಿದರು.

## ವಿಶ್ವ ಆದಿವಾಸಿ ದಿನಾಚರಣೆ ಅಂಗವಾಗಿ ಆದಿವಾಸಿಗಳ ಬೇಡಿಕೆಗಳ ಈಡೇರಿಕೆಗೆ ಮನವಿ ಸಲ್ಲಿಕೆ

**ಚಿಕ್ಕಮಗಳೂರು:** ವಿಶ್ವ ಆದಿವಾಸಿ ದಿನಾಚರಣೆ ಅಂಗವಾಗಿ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಿಂದ ಜಿಲ್ಲಾಧಿಕಾರಿಗಳ ಮೂಲಕ ಆದಿವಾಸಿಗಳ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರವನ್ನು ಒತ್ತಾಯಿಸಿ ಮನವಿ ಸಲ್ಲಿಕೆ ಮಾಡಲಾಗುತ್ತಿದೆ ಎಂದು ಕರ್ನಾಟಕ ಆದಿವಾಸಿ ರಕ್ಷಣಾ ಪರಿಷತ್ ರಾಜ್ಯ ಸಂಘಟನಾ ಕಾರ್ಯದರ್ಶಿ ಶ್ರೀನಿವಾಸ ಗೌಡ್ಲು ತಿಳಿಸಿದರು.

ನಗರದ ಪ್ರೆಸ್ ಕ್ಲಬ್ ನಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಳೆ ಹಾಗೂ ಇತರೆ ಕಾರಣಗಳಿಂದಾಗಿ ವಿಶ್ವ ಆದಿವಾಸಿ ದಿನಾಚರಣೆ ನಡೆಸಲು ಸಾಧ್ಯವಾಗಿಲ್ಲ. ಹೀಗಾಗಿ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ನಮ್ಮ ಬೇಡಿಕೆಗಳನ್ನೊಳಗೊಂಡ ಮನವಿ ಸಲ್ಲಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ರಾಜ್ಯದ 49 ಪರಿಶಿಷ್ಟ ಪಂಗಡಗಳನ್ನು ಒಳಗೊಂಡಂತೆ ಕರ್ನಾಟಕ ಆದಿವಾಸಿ ಅಭಿವೃದ್ಧಿ ನಿಗಮವನ್ನು ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಪ್ರತ್ಯೇಕಿಸಿ ಸ್ಥಾಪಿಸಬೇಕು. ಈ ಅಭಿವೃದ್ಧಿ ನಿಗಮದ ಮೂಲಕ ಜಿಲ್ಲಾವಾರು ಮತ್ತು ಬುಡಕಟ್ಟುವಾರು ಆದಿವಾಸಿ ಪರ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಬೇಕು. ಭಾರತ ಸರ್ಕಾರದ ಬುಡಕಟ್ಟು ವ್ಯವಹಾರಗಳ ಸಚಿವಾಲಯದ ಅರಣ್ಯ ಹಕ್ಕು ಕಾಯ್ದೆ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ವಿಸ್ತರಿಸಿ ಅನುಷ್ಠಾನಗೊಳಿಸಬೇಕು. ಇತ್ತೀಚೆಗೆ ರಾಜ್ಯ ಸರ್ಕಾರದ ಅರಣ್ಯ ಇಲಾಖೆಯು ಅರಣ್ಯ ಹಕ್ಕು ಕಾಯ್ದೆ ಉಲ್ಲಂಘನೆ ಮಾಡಿದ ಆದೇಶವನ್ನು ಹಿಂಪಡೆದು, ಪಾರಂಪರಿಕ ಅರಣ್ಯ ಹಕ್ಕು ಕಾಯ್ದೆ ಸಂರಕ್ಷಿಸಬೇಕು ಎಂದು ಒತ್ತಾಯಿಸಿದರು.



ರಾಜ್ಯ ಸರ್ಕಾರದಿಂದಲೇ ವಿಶ್ವ ಆದಿವಾಸಿ ದಿನಾಚರಣೆ ಆಚರಿಸಬೇಕು. ಈ ದಿನದಂದು ಆದಿವಾಸಿ ಸಾಧಕರನ್ನು ಗುರುತಿಸಿ ಆದಿವಾಸಿ ಸಿರಿ, ಧರತಿ ಆಬಾ ಬಿರಸಾ ಮುಂಡಾ ಎಂಬ ಹೆಸರಿನಡಿ ಪ್ರಶಸ್ತಿ ನೀಡಿ ಗೌರವಿಸಬೇಕು. ಬುಡಕಟ್ಟುಗಳ ಸಾಂಸ್ಕೃತಿಕ, ಸಾಹಿತ್ಯಿಕ ಸಂಘಟನೆಗಾಗಿ ರಾಜ್ಯ, ಜಿಲ್ಲೆ ಮತ್ತು ತಾಲೂಕು ಮಟ್ಟದಲ್ಲಿ ಆದಿವಾಸಿ ಭವನಗಳನ್ನು ಸರ್ಕಾರವೇ ಕಟ್ಟಿಸಲು ಯೋಜನೆ ರೂಪಿಸಿ ಅನುಷ್ಠಾನಗೊಳಿಸಬೇಕು. ಪಶ್ಚಿಮಘಟ್ಟ ಪ್ರದೇಶದಲ್ಲಿನ ಲೈನ್ ಮನೆಗಳಲ್ಲಿರುವ ಜೀತದ ಆದಿವಾಸಿಗಳ ಸಮೀಕ್ಷೆ ಮಾಡಿ ಅವರಿಗೆ ಸಮಗ್ರ ಪುನರ್ ವಸತಿ ಕಲ್ಪಿಸಬೇಕು ಎಂದು ಮನವಿ ಮೂಲಕ ಸರ್ಕಾರವನ್ನು ಒತ್ತಾಯಿಸಲಾಗುತ್ತಿದೆ ಎಂದರು.

ರಾಜ್ಯದ ಮೂಲ ಬುಡಕಟ್ಟುಗಳ ಅರಣ್ಯ ಹಕ್ಕುಗಳನ್ನು ಸಂರಕ್ಷಿಸಲು ಪಶ್ಚಿಮ ಘಟ್ಟ ಪ್ರದೇಶವನ್ನು ಸಂವಿಧಾನದ ಆರನೇ ಅನುಸೂಚಿಯಲ್ಲಿ ಸೇರಿಸಲು ರಾಜ್ಯ ಸರ್ಕಾರ ಭಾರತ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು. ಲ್ಯಾಂಪ್ಸ್ ಕಿರು ಅರಣ್ಯ ಉತ್ಪನ್ನಗಳಿಗೆ ಬೇರೆಬೇರೆ ರಾಜ್ಯಗಳು ಬೆಂಬಲ ಬೆಲೆ ನೀಡುವಂತೆ ಕರ್ನಾಟಕದ ರಾಜ್ಯ ಸರ್ಕಾರವು ಬೆಂಬಲ ಬೆಲೆ ನೀಡಬೇಕು. ಜೊತೆಗೆ 2026-27ನೇ ಸಾಲಿನ ಆಯವ್ಯಯದಲ್ಲಿ ಬೆಂಬಲ ಬೆಲೆ ಘೋಷಣೆ ಮಾಡಬೇಕು ಎಂದು ಆಗ್ರಹಿಸಿದರು.

ಆದಿವಾಸಿಗಳ ಕೇಂದ್ರಿತ ಉನ್ನತ ಮತ್ತು ಸಮಗ್ರ ಅಧ್ಯಯನಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಬುಡಕಟ್ಟು ವಿಶ್ವವಿದ್ಯಾಲಯವನ್ನು ಕರ್ನಾಟಕದ ಪಶ್ಚಿಮ ಘಟ್ಟ ಪ್ರದೇಶದ ಜಿಲ್ಲೆಯೊಂದರಲ್ಲಿ ಆರಂಭಿಸಬೇಕು. ಆದಿವಾಸಿ ಮಕ್ಕಳ ವಿದ್ಯಾರ್ಜನೆಗಾಗಿ ಏಕಲವ್ಯ ಮಾದರಿ ವಸತಿ ಶಾಲೆಗಳನ್ನು ಆರಂಭಿಸಲು ಭಾರತ ಸರ್ಕಾರಕ್ಕೆ ಕರ್ನಾಟಕ ಸರ್ಕಾರ ಶಿಫಾರಸ್ಸು ಮಾಡಬೇಕು ಎಂದು ಮನವಿ ಮೂಲಕ ಸರ್ಕಾರವನ್ನು ಒತ್ತಾಯಿಸುವುದಾಗಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ಆದಿವಾಸಿ ರಕ್ಷಣಾ ಪರಿಷತ್ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೇಶ್, ಪ್ರಮುಖರಾದ ವಿಜಯೇಂದ್ರ, ಮುಜೇಕಾನ್ ಅನಿಲ್ ಕುಮಾರ್, ಕೆ.ಎಲ್. ಕುಮಾರ್, ನಾಗರತ್ನ, ಭವಾನಿ, ಚಂದ್ರು ಮತ್ತಿತರರಿದ್ದರು.

## ನಿಧನ ಸುದ್ದಿಗಳು

### ಶ್ರೀಮತಿ ನಿರ್ಮಲ ನಿಧನ

**ದಾವಣಗೆರೆ :** ಸಿಟಿ ಕೆಎಸ್ಆರ್ಟಿಸಿ ಬಸ್ ಸ್ಟಾಂಡ್ ಹತ್ತಿರ, ಗಣೇಶ ಲೇ ಔಟ್ ವಾಸಿ, ಶ್ರೀ ಟಿ. ಕೃಷ್ಣಮೂರ್ತಿ ಅವರ ಪತ್ನಿ

ಶ್ರೀಮತಿ ನಿರ್ಮಲ ದಿನಾಂಕ; 12-08-20250 ಮಂಗಳವಾರ ಬೆಳಗಿನ ಜಾವ 12.45 ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 52 ವರ್ಷ ವಯಸ್ಸಾಗಿತ್ತು. ಪತಿ, ಮೂವರು ಪುತ್ರರು, ಓರ್ವ ಪುತ್ರಿ, ಸೊಸೆ, ಅಳಿಯ, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 12-08.2025ರ ಮಂಗಳವಾರ ಮಧ್ಯಾಹ್ನ 1ಕ್ಕೆ ಭರಮಸಾಗರ ಹತ್ತಿರದ ಮೃತರ ಸ್ವಗ್ರಾಮ ಹಂಪನೂರಿನಲ್ಲಿ ನೆರವೇರಿದೆ.

### ಭೀಮಾಬಾಯಿ ಲಿಂಬಾವಳಿ ನಿಧನ

**ಬಾಗಲಕೋಟೆ:** ಮಾಜಿ ಸಚಿವ ಅರವಿಂದ ಲಿಂಬಾವಳಿ ಅವರ ತಾಯಿ ಭೀಮಾಬಾಯಿ ಲಿಂಬಾವಳಿ (84) ಸೋಮವಾರ ನಿಧನರಾದರು.ಅವರಿಗೆ ಅರವಿಂದ ಲಿಂಬಾವಳಿ ಸೇರಿ ಐವರು ಪುತ್ರರು, ಇಬ್ಬರು ಪುತ್ರಿಯರು ಇದ್ದಾರೆ. ತುಳಸಿಗೇರಿ ಗ್ರಾಮದ ಅವರ ಜಮೀನಿನಲ್ಲಿ ಸೋಮವಾರ ಸಂಜೆ ಅಂತ್ಯಕ್ರಿಯೆ ನಡೆಯಿತು

### ಶ್ರೀಮತಿ ಶಿವಲಿಂಗಮ್ಮ ನಿಧನ

**ದಾವಣಗೆರೆ :** ಕುವೆಂಪು ನಗರ, 18ನೇ ಮೇನ್, (ಬಾಪೂಜಿ ಹೈಸ್ಕೂಲ್ ಹಿಂಭಾಗ) # 3364/ಎ4ಬಿ ವಾಸಿ ದಿ। ಶ್ರೀ ಸಾಸಲು ನೀಲಕಂಠಪ್ಪನವರ ಧರ್ಮಪತ್ನಿ ಹಾಗೂ ಜಯಂತ್ ಟೈಲ್ಸ್ ಮಾಲೀಕರಾದ ಶ್ರೀ ಎಸ್.ಎನ್. ನಾಗರಾಜ್ ಮತ್ತು ಶ್ರೀ ಎಸ್. ಎನ್. ರಮೇಶ್ (ಟೈಲ್ಸ್) ಅವರ ತಾಯಿ ಶ್ರೀಮತಿ ಶಿವಲಿಂಗಮ್ಮ ಅವರು ದಿನಾಂಕ 11-08-2025ರ ಸೋಮವಾರ ರಾತ್ರಿ 10:30ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. 'ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 12-08-2025ರ ಮಂಗಳವಾರ ಮಧ್ಯಾಹ್ನ 1 ಗಂಟೆಗೆ ಶಾಮನೂರಿನ ವೀರಶೈವ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು.

# ಇಸ್ಲಾಂ ಧರ್ಮಕ್ಕೆ ಮತಾಂತರಗೊಳ್ಳದ ಮಹಿಳೆ ಕತ್ತು ಸೀಳಿ ಹತ್ಯೆ



**ಬುರ್ಹಾನ್‌ಪುರ:** ಇಸ್ಲಾಂ ಧರ್ಮಕ್ಕೆ ಮತಾಂತರಗೊಳ್ಳಲು ನಿರಾಕರಿಸಿದ ಮಹಿಳೆ ಕತ್ತು ಸೀಳಿ ಕೊಲೆ ಮಾಡಿರುವ ಘಟನೆ ಮಧ್ಯಪ್ರದೇಶದಲ್ಲಿ ನಡೆದಿದೆ. ಇಲ್ಲಿನ ಬುರ್ಹಾನ್‌ಪುರ ಜಿಲ್ಲೆಯ ನವರಾದ ನೇಪಾನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 35 ವರ್ಷದ ಮಹಿಳೆಯೊಬ್ಬರು ಇಸ್ಲಾಂ ಧರ್ಮಕ್ಕೆ ಮತಾಂತರಗೊಳ್ಳಲು ಮತ್ತು ತನ್ನ ಮೇಲೆ ದೌರ್ಜನ್ಯ ಎಸಗಿದ ವ್ಯಕ್ತಿಯನ್ನು ಮದುವೆಯಾಗಲು ನಿರಾಕರಿಸಿದ ಆರೋಪದ ಮೇಲೆ ಕ್ರೂರವಾಗಿ ಹತ್ಯೆ ಮಾಡಲಾಗಿದೆ.

ಕೊಲೆಗೀಡಾದ ಮಹಿಳೆಯನ್ನು ಭಾಗ್ಯಶ್ರೀ ನಾಮದೇವ್ ಧನುಕ್ ಎಂದು ಗುರುತಿಸಲಾಗಿದೆ. ಆಕೆಯನ್ನು ಕೊಲೆ ಮಾಡಿದ ಪಾಪಿಯನ್ನು ಶೇಖ್ ರಯೀಸ್‌ನನ್ನು ಬಂಧಿಸಲಾಗಿದೆ. ರಯೀಸ್ ಆಕೆಯ ಕೂದಲನ್ನು ಹಿಡಿದು, ಹೊಡೆಯುತ್ತಿದ್ದರು, ಕಿರುಕುಳ ನೀಡುತ್ತಿದ್ದರು. ಮದುವೆ ಮತ್ತು ಧಾರ್ಮಿಕ ಮತಾಂತರಕ್ಕಾಗಿ ಅವನು ಬಹಳ ಸಮಯದಿಂದ ಆಕೆ-ಯ ಮೇಲೆ ಒತ್ತಡ ಹೇರುತ್ತಿದ್ದನು. ನನ್ನ ಸಹೋದರಿ ನಿರಾಕರಿಸಿದ್ದರಿಂದ, ಅವನು ರಾತ್ರಿಯಲ್ಲಿ ಮನೆಗೆ ನುಗ್ಗಿ ಆಕೆಯ ಕತ್ತು ಸೀಳಿ ಕೊಲೆ ಮಾಡಿದ್ದಾನೆ ಎಂದು ಭಾಗ್ಯಶ್ರೀ ಸಹೋದರಿ ತಿಳಿಸಿದ್ದಾರೆ.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಅಂತರ ಸಿಂಗ್ ಕನೇಶ್, ಆರೋಪಿಯ ವಿರುದ್ಧ ಕೊಲೆ ಮತ್ತು ದೌರ್ಜನ್ಯದ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ಆತನನ್ನು ಬಂಧಿಸಲಾಗಿದೆ ಎಂದು ದೃಢಪಡಿಸಿದ್ದಾರೆ. ಈ ಘಟನೆ ಹಿಂದೂ ಸಮುದಾಯದಲ್ಲಿ ಆಕ್ರೋಶಕ್ಕೆ ಕಾರಣವಾಯಿತು.

ಪ್ರತಿಭಟನಾಕಾರರನ್ನು ಪ್ರತಿನಿಧಿಸುವ ಅಮಿತ್ ವರುದೆ, ಇದನ್ನು ಲವ್ ಜಿಹಾದ್ ಎಂದು ಕರೆಯಲಾಗುವ ಪ್ರಕರಣ ಎಂದು ಕರೆದರು, ಪೊಲೀಸರ ನಿರ್ಲಕ್ಷ್ಯದ ಆರೋಪ ಮಾಡಿದರು. ಅವರು ಕೇವಲ ಮೂರು-ನಾಲ್ಕು ದಿನಗಳ ಹಿಂದೆ ದೂರು ನೀಡಿದ್ದರು, ಆದರೆ ಆರೋಪಿಯನ್ನು ಬಿಡುಗಡೆ ಮಾಡಲಾಗಿದೆ ಎಂದು ಆರೋಪಿಸಿದ್ದಾರೆ.

ಮಾಜಿ ಸಚಿವೆ ಅರ್ಚನಾ ಚಿಟ್ನಿಸ್ ದುಃಖತಪ್ತ ಕುಟುಂಬವನ್ನು ಭೇಟಿ ಮಾಡಿ ನಿರ್ಲಕ್ಷ್ಯ ವಹಿಸಿದ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು. ತ್ವರಿತ ಆಡಳಿತಾತ್ಮಕ ಕ್ರಮದಲ್ಲಿ, ಅಧಿಕಾರಿಗಳು ಆರೋಪಿಗಳ ಅಕ್ರಮ ಆಸ್ತಿಗಳನ್ನು ಗುರುತಿಸಿದರು. ಎಸ್‌ಡಿಎಂ ಭಗೀರಥ ವಖಾಲ, ಆರೋಪಿಗಳು ಅತಿಕ್ರಮಣ ಮತ್ತು ಕಾನೂನುಬಾಹಿರ ಚಟುವಟಿಕೆಗಳನ್ನು ಮಾಡಿದ್ದಾರೆ. ಆಡಳಿತವು ಗಮನಕ್ಕೆ ತೆಗೆದುಕೊಂಡಿದೆ ಎಂದು ಹೇಳಿದರು.

# ನೇಹಾ ಹಿರೇಮಠ ಕೊಲೆ ಪ್ರಕರಣ: ಆರೋಪಿ ಫಯಾಜ್‌ಗೆ ಜಾಮೀನು ನಿರಾಕರಣೆ



**ಹುಬ್ಬಳ್ಳಿ:** 2024ರ ಏಪ್ರಿಲ್ 18ರಂದು ಕಾಲೇಜು ಆವರಣದಲ್ಲಿ 23 ವರ್ಷದ ಕಾಲೇಜು ವಿದ್ಯಾರ್ಥಿನಿ ನೇಹಾ ಹಿರೇಮಠಳನ್ನು ಚೂರಿ ಇರಿದು ಬರ್ಬರವಾಗಿ ಹತ್ಯೆ ಮಾಡಿದ್ದ ಆರೋಪಿ ಫಯಾಜ್‌ನ ಜಾಮೀನು ಅರ್ಜಿಯನ್ನು ನ್ಯಾಯಾಲಯ ವಜಾಗೊಳಿಸಿದೆ.

ಜಾಮೀನು ಅರ್ಜಿಯ ವಿಚಾರಣೆ ನಡೆಸಿದ ಮೊದಲ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಪಲ್ಲವಿ ಬಿ ಆರ್ ಅವರು ಜಾಮೀನು ಅರ್ಜಿಯನ್ನು ತಿರಸ್ಕರಿಸಿದರು.

ನೇಹಾಳ ತಂದೆ ಹಿರೇಮಠ್ ಭಾವುಕ: ನನ್ನ ಮಗಳ ಜೀವ ತೆಗೆದ ವ್ಯಕ್ತಿಗೆ ನ್ಯಾಯಾಧೀಶರು ಜಾಮೀನು ನಿರಾಕರಿಸಿದ್ದಾರೆ. ಇದು ನಮ್ಮ ಮೊದಲ ಗೆಲುವು ಎಂದು ಹಿರೇಮಠ್ ತಿಳಿಸಿದ್ದಾರೆ. ಆರೋಪಿಗೆ ಮರಣದಂಡನೆ ಶಿಕ್ಷೆಯಾಗುವವರೆಗೂ ತನ್ನ ಹೋರಾಟ ಮುಂದುವರಿಯಲಿದೆ ಎಂದು ಹೇಳಿದರು. ಕಳೆದ 1 ವರ್ಷ 4 ತಿಂಗಳಿನಿಂದ ಧಾರವಾಡ ಕೇಂದ್ರ ಕಾರಾಗೃಹದಲ್ಲಿ ಬಂಧಿಯಾಗಿರುವ ಫಯಾಜ್ ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ನ್ಯಾಯಾಲಯದ ಮುಂದೆ ಹಾಜರಾಗಿದ್ದು ವಿಚಾರಣೆಯನ್ನು ಆಗಸ್ಟ್ 6ಕ್ಕೆ ಮುಂದೂಡಲಾಗಿದೆ.

# ಡೆತ್‌ನೋಟ್ ಬರೆದಿಟ್ಟು 7ನೇ ತರಗತಿ ವಿದ್ಯಾರ್ಥಿ ಆತಹತ್ಯೆ

**ಬೆಂಗಳೂರು :** ನನ್ನನ್ನು ಕ್ಷಮಿಸಿ .. ಎಂದು ಏಳನೇ ತರಗತಿ ವಿದ್ಯಾರ್ಥಿ ತನ್ನ ಪೋಷಕರಿಗೆ ಪತ್ರ ಬರೆದು ಆತಹತ್ಯೆ ಮಾಡಿಕೊಂಡಿದ್ದಾನೆ. ಸಿಕೆ ಅಚ್ಚುಕಟ್ಟು ಪೊಲೀಸ್ ಠಾಣೆ ವ್ಯಾಪ್ತಿಯ ಬನಶಂಕರಿ 3ನೇ ಹಂತ, ಬನಗಿರಿ ನಗರದ ನಿವಾಸಿ ಗಣೇಶ್ ಪ್ರಸಾದ್ ಅವರ ಪುತ್ರ ಗಂಧಾರ್ (14) ಆತಹತ್ಯೆ ಮಾಡಿಕೊಂಡಿರುವ ವಿದ್ಯಾರ್ಥಿ.

ಮ್ಯೂಸಿಕ್ ಆರ್ಟಿಸ್ಟ್ ಆಗಿರುವ ಗಣೇಶ್ ಪ್ರಸಾದ್ ಅವರಿಗೆ ಇಬ್ಬರು ಮಕ್ಕಳು. ಈ ಪೈಕಿ ಗಂಧಾರ್ 7ನೇ ತರಗತಿ ವ್ಯಾಸಂಗ ಮಾಡುತ್ತಿದ್ದನು. ರಾತ್ರಿ ಎಂದಿನಂತೆ ಊಟ ಮಾಡಿ ಗಂಧಾರ್ ಮಲಗಿದ್ದಾನೆ. ಇಂದು ಬೆಳಗ್ಗೆ ಎಷ್ಟುಹೊತ್ತಾದರೂ ರೂಂ ನಿಂದ ಹೊರಗೆ ಬಂದಿಲ್ಲ.

ಶಾಲೆಗೆ ಕಳುಹಿಸುವ ಸಲುವಾಗಿ ಮಗನನ್ನು ಎಬ್ಬಿಸಲು ತಂದೆ ರೂಂ ಬಳಿ ಹೋಗಿ ಕೂಗಿದರೂ ಹೊರಗೆ ಬಂದಿಲ್ಲ. ತಕ್ಷಣ ಬಾಗಿಲು ತಳ್ಳಿ ನೋಡಿದಾಗ ಗಿಟಾರ್ ನೇತುಹಾಕುವ ಮೊಳೆಗೆ ವೇಲ್‌ನಿಂದ ನೇಣುಬಿಗಿದುಕೊಂಡು ಆತಹತ್ಯೆ ಮಾಡಿಕೊಂಡಿರುವುದು ಕಂಡು ಗಾಬರಿಯಾಗಿ ಚೀರಿ-ಕೊಂಡಿದ್ದಾರೆ.

ರೂಂನಲ್ಲಿದ್ದ ಕಾಗದ ತೆಗೆದು ನೋಡಿದಾಗ, ಅದರಲ್ಲಿ ನನಗೆ ಕ್ಷಮಿಸಿ ಎಂದು ಆತಹತ್ಯೆಗೂ ಮುನ್ನ ಬರೆದಿರುವುದು ಕಂಡುಬಂದಿದೆ. ಮಗನ ಸಾವಿನಿಂದ ಪೋಷಕರ ಆಕ್ರಂದನ ಮುಗಿಲು ಮುಟ್ಟಿತ್ತು. ಸುದ್ದಿ ತಿಳಿದು ಸಿಕೆ ಅಚ್ಚುಕಟ್ಟು ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ, ಪರಿಶೀಲಿಸಿ ಡೆತ್‌ನೋಟ್ ವಶಕ್ಕೆ ಪಡೆದು ಬಾಲಕನ ಮೃತದೇಹವನ್ನು ಕೆಂಪೇಗೌಡ ಆಸ್ಪತ್ರೆಗೆ ರವಾನಿಸಿದ್ದಾರೆ. ಆತಹತ್ಯೆಗೆ ನಿಖರವಾದ ಕಾರಣವೇನೆಂಬುವುದು ಸದ್ಯಕ್ಕೆ ತಿಳಿದುಬಂದಿಲ್ಲ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

# 20 ನವಿಲುಗಳ ಅನುಮಾನಾಸ್ಪದ ಸಾವು

## ತನಿಖೆಗೆ ಸಚಿವ ಖಂಡ್ರೆ ಆದೇಶ



**ತುಮಕೂರು:** ಕರ್ನಾಟಕದಲ್ಲಿ ವನ್ಯಜೀವಿಗಳ ಸರಣಿ ಸಾವು ಪ್ರಕರಣ ಮುಂದುವರೆದಿದ್ದು, 4 ಹುಲಿಗಳ ಸಾವು ಪ್ರಕರಣ ಹಸಿರಾಗಿರುವಂತೆಯೇ ಇತ್ತ 20 ನವಿಲುಗಳು ಅನುಮಾನಾಸ್ಪದವಾಗಿ ಸಾವನ್ನಪ್ಪಿವೆ.

ಕರ್ನಾಟಕದ ತುಮಕೂರು ಜಿಲ್ಲೆಯ ಮಧುಗಿರಿ ತಾಲೂಕಿನ ಮಿಡಿಗೇಶಿಯ ಹನುಮಂತಪುರ ಗ್ರಾಮದ ಕೆರೆ ಕೋಡಿ ನೀರು ಹರಿಯುವ ಪಕ್ಕದ ಜಮೀನುಗಳಲ್ಲಿ 5 ಗಂಡು ಹಾಗೂ 15 ಹೆಣ್ಣು ಸೇರಿ ಒಟ್ಟು 20 ನವಿಲುಗಳು ನಿಗೂಢವಾಗಿ ಸಾವನ್ನಪ್ಪಿರುವುದು ಪತ್ತೆ ಆಗಿದೆ.

ಬೆಳಗ್ಗೆ ರೈತರು ಜಮೀನಿಗೆ ಬಂದಾಗ ನವಿಲುಗಳ ಮೃತದೇಹಗಳು ಪತ್ತೆ ಆಗಿದ್ದು, ಆಗಸ್ಟ್ 1ರ ರಾತ್ರಿ ನವಿಲುಗಳು ಮೃತಪಟ್ಟ ಬಗ್ಗೆ ಸ್ಥಳೀಯರು ಅನುಮಾನ ವ್ಯಕ್ತಪಡಿಸಿದ್ದಾರೆ.

**ಕ್ರಿಮಿನಾಶಕ ಸೇವನೆ ಶಂಕೆ:** ಇನ್ನು ನವಿಲುಗಳ ಸಾವಿಗೆ ನಿಖರ ಮಾಹಿತಿ ತಿಳಿದುಬಂದಿಲ್ಲ. ಕ್ರಿಮಿನಾಶಕ ಸಿಂಪಡಣೆ ಮಾಡಿರುವ ಬೆಳೆಗಳನ್ನು ಸೇವಿಸಿ ನವಿಲುಗಳು ಮೃತಪಟ್ಟಿರಬಹುದು ಅಥವಾ ಯಾರಾದರೂ ಏನಾದರೂ ಮಾಡಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ.

**ಅಧಿಕಾರಿಗಳು ದೌಡು :** ಇತ್ತ ನವಿಲುಗಳ ಸಾವಿನ ವಿಚಾರ ತಿಳಿಯುತ್ತಲೇ ಘಟನಾ ಸ್ಥಳಕ್ಕೆ ಅಧಿಕಾರಿಗಳು ದೌಡಾಯಿಸಿದ್ದಾರೆ. ಘಟನಾ ಸ್ಥಳಕ್ಕೆ ಅರಣ್ಯಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ನ್ಯಾಯಾಧೀಶರ ಅನುಮತಿ ಬಳಿಕ ಎಫ್‌ಎಸ್‌ಎಲ್?ಗೆ ರವಾನೆ ಮಾಡಲಾಗಿದೆ. ಆ ಮೂಲಕ ನವಿಲುಗಳ ಸಾವಿನ ಕಾರಣದ ವರದಿ ಪಡೆಯಲು ಅರಣ್ಯಾಧಿಕಾರಿಗಳು ಮುಂದಾಗಿದ್ದಾರೆ.

**ಸಚಿವ ಈಶ್ವರ್ ಖಂಡ್ರೆ ಆಘಾತ, ತನಿಖೆಗೆ ಆದೇಶ:** ಇನ್ನು ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನ ಮಿಡಿಗೇಸಿ ಬಳಿ ರೈತನ ಜಮೀನಿನಲ್ಲಿ 19 ನವಿಲುಗಳು ಸಾವನ್ನಪ್ಪಿದ ಘಟನೆಗೆ ಸಂಬಂಧಿಸಿದಂತೆ ಅರಣ್ಯ, ಜೀವಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ಆಘಾತ ವ್ಯಕ್ತಪಡಿಸಿದ್ದು, ಈ ಸಂಬಂಧ ಉಪ ಅರಣ್ಯ ಸಂರಕ್ಷಣಾಧಿಕಾರಿ (ಡಿಸಿಎಫ್) ನೇತೃತ್ವದಲ್ಲಿ ತನಿಖೆಗೆ ಆದೇಶಿಸಿದ್ದಾರೆ.

ನಮ್ಮ ರಾಷ್ಟ್ರೀಯ ಪಕ್ಷಿ ನವಿಲಿನ ಹತ್ಯೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ನವಿಲುಗಳ ಸಾವು ಕೀಟನಾಶಕ ಸೇವನೆಯಿಂದ ಸಂಭವಿಸಿದೆ ಎಂದು ಮಾಧ್ಯಮಗಳಲ್ಲಿ ವರದಿಯಾಗಿದೆ. ನವಿಲುಗಳನ್ನು ಕೊಲ್ಲಲು ಈ ಕೀಟನಾಶಕವನ್ನು ಬಳಸಲಾಗಿದೆಯೇ ಅಥವಾ ಬೆಳೆಗಳ ಮೇಲೆ ಸಿಂಪಡಿಸಲಾದ ಕೀಟನಾಶಕ ತುಂಬಿದ ಬೆಳೆಗಳನ್ನು ತಿಂದು ನವಿಲುಗಳು ಸಾವನ್ನಪ್ಪಿವೆಯೇ ಎಂದು ತನಿಖೆ ನಡೆಸಲು ಆದೇಶಿಸಲಾಗಿದ್ದು, 5 ದಿನಗಳಲ್ಲಿ ವರದಿ ಸಲ್ಲಿಸಲು ಮತ್ತು ನಿಯಮಗಳ ಪ್ರಕಾರ ಕ್ರಮ ಕೈಗೊಳ್ಳಲು ಅವರು ಡಿಸಿಎಫ್ ನೇತೃತ್ವದ ತಂಡಕ್ಕೆ ನಿರ್ದೇಶನ ನೀಡಿದ್ದಾರೆ.

ಶೆಡ್ಯೂಲ್ 1 ಮತ್ತು 2 ರ ಅಡಿಯಲ್ಲಿ ವನ್ಯಜೀವಿಗಳ ಯಾವುದೇ ಸಾವನ್ನು ಲೆಕ್ಕಪರಿಶೋಧನೆ ಮಾಡಬೇಕು ಮತ್ತು ತಕ್ಷಣವೇ ಸಚಿವರ ಕಚೇರಿಗೆ ಮಾಹಿತಿಯನ್ನು ಒದಗಿಸಬೇಕು ಎಂದು ಅವರು ನಿರ್ದೇಶನ ನೀಡಿದ್ದಾರೆ.

**ರಾಜ್ಯದಲ್ಲಿ ಮುಂದವರೆದ ವನ್ಯಜೀವಿಗಳ ಸಾವು :** ಇನ್ನು ಇತ್ತೀಚಿನ ದಿನಗಳಲ್ಲಿ ರಾಜ್ಯದಲ್ಲಿ ವನ್ಯಜೀವಿಗಳ ಸಾವು ಇದೇ ಮೊದಲೇನಲ್ಲ.. ಈ ಹಿಂದೆ ಚಾಮರಾಜನಗರದ ಮಲೆ ಮಹದೇಶ್ವರ ವನ್ಯಧಾಮದಲ್ಲಿ ಐದು ಹುಲಿಗಳ ಹತ್ಯೆ ಪ್ರಕರಣ ಸಾಕಷ್ಟು ಸಂಚಲನ ಸೃಷ್ಟಿಸಿತ್ತು. ಹುಲಿಗಳನ್ನ ಕೊಂದ ಮೂವರನ್ನು ಪೊಲೀಸರು ಬಂಧಿಸಿದ್ದರು.

ಈ ಪ್ರಕರಣದ ಬಳಿಕ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಕಂದೇಗಾಲ ಗ್ರಾಮದ ಹೊರವಲಯದಲ್ಲಿ ಬರೋಬ್ಬರಿ 18 ಕೋತಿಗಳ ಶವ ಪತ್ತೆ ಆಗಿತ್ತು. ಕಿಡಿಗೇಡಿಗಳು ವಿಷ ಹಾಕಿದ್ದರು.

# ಮೈಸೂರು ದಸರಾ 2025: ಮೊದಲ ಹಂತದ ಗಜಪಯಣಕ್ಕೆ ಚಾಲನೆ




**ಮೈಸೂರು:** ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವ 2025ಕ್ಕೆ ಸೋಮವಾರ ಅಧಿಕೃತ ಚಾಲನೆ ಸಿಕ್ಕಿದೆ.

ನಾಗರಹೊಳೆ ರಾಷ್ಟ್ರೀಯ ಉದ್ಯಾನವನದ ಹೆಬ್ಬಾಗಿಲು ವೀರನಹೊಸಳ್ಳಿಯ ಬಳಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಅವರು ಸಾಂಪ್ರದಾಯಿಕವಾಗಿ ಪೂಜೆ ಸಲ್ಲಿಸುವ ಮೂಲಕ ಗಜಪಯಣಕ್ಕೆ ಚಾಲನೆ ನೀಡಿದರು.

ವೀರನಹೊಸಹಳ್ಳಿಯಲ್ಲಿಂದು ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವ 14 ಆನೆಗಳ ಪೈಕಿ 9 ಆನೆಗಳ ಮೊದಲ ತಂಡಕ್ಕೆ ಸಾಂಪ್ರದಾಯಿಕವಾಗಿ ಪೂಜೆ ನೆರವೇರಿಸಿ, ಕಬ್ಬು, ಅಕ್ಕಿ, ಬೆಲ್ಲ ತಿನ್ನಿಸಿ ಗಜಪಯಣಕ್ಕೆ ಚಾಲನೆ ನೀಡಲಾಯಿತು.

ಈ ಬಾರಿಯೂ 750 ಕೆ.ಜಿ ತೂಕದ ಅಂಬಾರಿಯನ್ನು ಹೊರಲಿರುವ ಅಭಿಮನ್ಯು, ಇಡೀ ತಂಡವನ್ನು ಮುನ್ನಡೆಸಲಿದ್ದಾನೆ. ವಿವಿಧ ಆನೆ ಶಿಬಿರಗಳಿಂದ ಆನೆಗಳನ್ನು ಆಯ್ಕೆ ಮಾಡಿರುವ ಅಧಿಕಾರಿಗಳು ಈಗಾಗಲೇ ಆನೆಗಳ ಆರೋಗ್ಯ ತಪಾಸಣೆ ಪೂರ್ಣಗೊಳಿಸಿದ್ದಾರೆ. ಆನೆ ಶಿಬಿರದಲ್ಲಿರುವ ಹೆಣ್ಣು ಆನೆಗಳ ಗರ್ಭಧಾರಣೆ ಪರೀಕ್ಷೆಗಾಗಿ ರಕ್ತಗಳ ಮಾದರಿ ಸಂಗ್ರಹಿಸಿ ಲ್ಯಾಬ್‌ನಲ್ಲಿ ಪರೀಕ್ಷೆ ಮಾಡಿಸಿ ನಂತರ ಈ ಹೆಣ್ಣಾನೆಗಳನ್ನು ದಸರಾಗೆ ಆಯ್ಕೆ ಮಾಡಲಾಗಿದೆ. ನಾಳೆ ಒಂದು ದಿನ ಮೈಸೂರಿನಲ್ಲಿ ವಿಶ್ರಾಂತಿ ಪಡೆಯಲಿರುವ ಗಜಪಡೆ ಆ.7ರಂದು ಅರಮನೆ ಪ್ರವೇಶ ಮಾಡಲಿವೆ.

# ಸಾರಿಗೆ ಸಿಬ್ಬಂದಿ ಮುಷ್ಕರಕ್ಕೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ಬೆಂಬಲ



**ಚಿತ್ರದುರ್ಗ:** 38 ತಿಂಗಳ ಬಾಕಿ ವೇತನ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಿಬ್ಬಂದಿಗಳು ನಡೆಸುತ್ತಿರುವ ಮುಷ್ಕರಕ್ಕೆ ಕರ್ನಾಟಕ ದಲಿತ ಸಂಘರ್ಷ ಸಮಿತಿ(ಶೋಷಿತರ ವಾದ)ಬೆಂಬಲಿಸಿ ಜಿಲ್ಲಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮಂಗಳವಾರ ಮನವಿ ಸಲ್ಲಿಸಿತು.

ರಾಜ್ಯ ಸರ್ಕಾರದ ಐದು ಉಚಿತ ಗ್ಯಾರೆಂಟಿಗಳಲ್ಲಿ ಶಕ್ತಿ ಯೋಜನೆ ಯಶಸ್ವಿಯಾಗಿದೆ ಎಂದರೆ ಅದ-ಕ್ಕೆ ಕೆ.ಎಸ್.ಆರ್.ಟಿ.ಸಿ. ಬಸ್ ಚಾಲಕರು, ನಿರ್ವಾಹಕರು ಹಾಗು ಸಿಬ್ಬಂದಿಗಳ ಪರಿಶ್ರಮವಿದೆ. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳನ್ನು ಕೂಡಲೆ ಈಡೇರಿಸುವ ರಾಜ್ಯ ಸರ್ಕಾರ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ನೌಕರರು, ಅಂಗನವಾಡಿ, ಆಶಾ ಕಾರ್ಯಕರ್ತೆಯರು ಹಾಗು ಹೊರಗುತ್ತಿಗೆ ನೌಕರರನ್ನು ಕೀಳಾಗಿ ಕಾಣುವುದು ಸರಿಯಲ್ಲ. ನಾನಾ ಸಂಘಟನೆಗಳು ಮುಷ್ಕರಕ್ಕೆ ಬೆಂಬಲಿಸಿ ಪ್ರತಿಭಟಿಸುವ ಮುನ್ನಾ ರಾಜ್ಯ ಸರ್ಕಾರ ಕೆ.ಎಸ್.ಆರ್.ಟಿ.ಸಿ. ಸಿಬ್ಬಂದಿಗಳ ಬೇಡಿಕೆಯನ್ನು ಈಡೇರಿಸುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಸಿ.ಹೆಚ್.ಮಂಜುನಾಥ್ ಸರ್ಕಾರವನ್ನು ಒತ್ತಾಯಿಸಿದರು.

ಬಿ.ಟಿ.ಚಿದಾನಂದಮೂರ್ತಿ, ರಂಗಸ್ವಾಮಿ, ಭೀಮಣ್ಣ, ಎನ್.ರಂಗಸ್ವಾಮಿ ಹಾಗೂ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪದಾಧಿಕಾರಿಗಳು ಈ ಸಂದರ್ಭದಲ್ಲಿದ್ದರು.

## ಉದ್ಯೋಗ ಆಕಾಂಕ್ಷಿಗಳಿಗೆ ಗುಡ್ ನ್ಯೂಸ್

# ಕೆಎಎಸ್ ನೇಮಕ ಪ್ರಕ್ರಿಯೆ ಮುಂದುವರಿಕೆಗೆ ಹೈಕೋರ್ಟ್ ಸಮ್ಮತಿ

**ಬೆಂಗಳೂರು:** ಸರಕಾರಿ ನೇಮಕಾತಿಯಲ್ಲಿ ಮೀಸಲು ಜಾರಿ ಸಂಬಂಧ ನಿಯಮ ಉಲ್ಲಂಘನೆಯಾಗಿದೆಯೆಂದು 348 ಕೆಎಎಸ್ ಅಧಿಕಾರಿಗಳ ನೇಮಕ ಕುರಿತ ಅಧಿಸೂಚನೆ ರದ್ದುಗೊಳಿಸಿದ್ದ ಕೆಎಟಿ ಆದೇಶ ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಮೇಲ್ಮನವಿ ಆಲಿಸಿದ ಹೈಕೋರ್ಟ್, ಕೆಎಎಸ್ ನೇಮಕ ಪ್ರಕ್ರಿಯೆ ಮುಂದುವರಿಸಲು ಸಮ್ಮತಿಸಿದೆ.

ಇದರಿಂದಾಗಿ ಅತಂತ್ರಕ್ಕೆ ಸಿಲುಕಿದ್ದ ನೇಮಕಾತಿಯನ್ನು ಮತ್ತೆ ಮುಂದುವರಿಸಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಹಸಿರು ನಿಶಾನೆ ದೊರೆತಂತಾಗಿದೆ. ಮುಖ್ಯ ಪರೀಕ್ಷೆ ಬರೆದು ನೇಮಕಕ್ಕೆ ಚಾತಕ ಪಕ್ಷಿಗಳಂತೆ ಕಾಯುತ್ತಿದ್ದ ಅಭ್ಯರ್ಥಿಗಳು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.

ಕೆಎಟಿ ಕಳೆದ ಮೇ 28ರಂದು ನೀಡಿದ್ದ ಆದೇಶ ಪ್ರಶ್ನಿಸಿ ಸರಕಾರ ಸಲ್ಲಿಸಿದ್ದ ಮೇಲ್ಮನವಿಯನ್ನು ಆಲಿಸಿದ ನ್ಯಾ. ಡಿ.ಕೆ. ಸಿಂಗ್ ಮತ್ತು ನ್ಯಾ. ವೆಂಕಟೇಶ್ ಟಿ. ನಾಯಕ್ ಅವರಿದ್ದ ವಿಭಾಗೀಯಪೀಠ ಈ ಮಧ್ಯಂತರ ಆದೇಶವನ್ನು ಮಾಡಿದೆ.

ವಾದ-ಪ್ರತಿವಾದ ಆಲಿಸಿದ ನ್ಯಾಯಾಲಯ ಮೂಲ ಅರ್ಜಿದಾರರಾದ ಬಿ.ಎನ್. ಮಧು, ಕರ್ನಾಟಕ ಲೋಕಸೇವಾ ಆಯೋಗ ಸೇರಿದಂತೆ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಿ ಮೂರು ವಾರಗಳಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸುವಂತೆ ಸೂಚನೆ ನೀಡಿತು. ಅಲ್ಲದೆ, ಪ್ರತಿವಾದಿಗಳು ಸಲ್ಲಿಸಿದ ಆಕ್ಷೇಪಣೆಗೆ ಸರಕಾರದ ಪ್ರತಿ ಆಕ್ಷೇಪಣೆಗಳಿದ್ದರೆ ಒಂದು ವಾರದಲ್ಲಿ ಸಲ್ಲಿಸಬೇಕು ಎಂದು ನಿರ್ದೇಶನ ನೀಡಿರುವ ನ್ಯಾಯಾಲಯ ವಿಚಾರಣೆಯನ್ನು ಐದು ವಾರ ಮುಂದೂಡಿದೆ.




ಅಲ್ಲದೆ, ಕೆಎಎಸ್ ನೇಮಕ ಪ್ರಕ್ರಿಯೆ ಮುಂದುವರಿಸಲು ಕೆಪಿಎಸ್‌ಸಿಗೆ ನ್ಯಾಯಾಲಯ ಅನುಮತಿ ನೀಡಿದೆ. ಆದರೆ ಆಯ್ಕೆ ಪಟ್ಟಿಯ ಫಲಿತಾಂಶವನ್ನು ನ್ಯಾಯಾಲಯದ ಅನುಮತಿ ಇಲ್ಲದೆ ಪ್ರಕಟಿಸುವಂತಿಲ್ಲ ಎಂದು ಮಧ್ಯಂತರ ಆದೇಶ ನೀಡಿದೆ. ಅಲ್ಲದೆ, ಎಲ್ಲ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಿ ಆಕ್ಷೇಪಣೆ ಸಲ್ಲಿಸುವಂತೆ ಸೂಚಿಸಿದೆ.

**ಪ್ರಕರಣದ ಹಿನ್ನೆಲೆ:** ಈ ಹಿಂದಿನ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರಕಾರ 2022ರಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಶೈಕ್ಷಣಿಕ ಸಂಸ್ಥೆಗಳಲ್ಲಿ ಸೀಟು ಹಂಚಿಕೆ ಮೀಸಲು ಮತ್ತು ರಾಜ್ಯ ಸೇವೆಯಲ್ಲಿ ನೇಮಕ ಹುದ್ದೆಗಳಿಗೆ ಮೀಸಲು) ಸುಗ್ರೀವಾಜ್ಞೆ ಜಾರಿಗೊಳಿಸಿತ್ತು. ಅದರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮೀಸಲಾತಿ ಪ್ರಮಾಣ ಶೇ. 18ರಿಂದ ಶೇ. 24ಕ್ಕೆ ಹೆಚ್ಚಿಸಿತ್ತು. ಅದನ್ನು ಆಧರಿಸಿ ಕರ್ನಾಟಕ ಸರಕಾರಿ ಸೇವೆಯಲ್ಲಿ ರೋಸ್ಟರ್ ಮೀಸಲು ನಿಗದಿಪಡಿಸಲಾಯಿತು. ಆನಂತರ ಅದನ್ನು ಆಧರಿಸಿ ಕೆಪಿಎಸ್‌ಸಿ 384 ಗ್ರೂಪ್ 'ಎ' ಮತ್ತು 'ಬಿ' ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಕ್ಕೆ ಅಧಿಸೂಚನೆ ಹೊರಡಿಸಿತ್ತು.

ಅದನ್ನು ಪ್ರಶ್ನಿಸಿ ರಾಮನಗರ ಜಿಲ್ಲೆಯ ಚನ್ನಪಟ್ಟಣದ ಬಿ.ಎನ್. ಮಧು ಸಲ್ಲಿಸಿದ್ದ ಅರ್ಜಿ ಪರಿಶೀಲಿಸಿದ ಕೆಎಟಿ ಅಧ್ಯಕ್ಷ ನ್ಯಾ. ಬಿ.ಆರ್. ಬೂದಿಹಾಳ್ ಹಾಗೂ ಆಡಳಿತ ಸದಸ್ಯ ರಾಘವೇಂದ್ರ ಔರಾದ್ಕರ್ ಅವರಿದ್ದ ನ್ಯಾಯಪೀಠ, ಕಳೆದ ಮೇ 28ರಂದು ಆದೇಶ ನೀಡಿತ್ತು. ಸರಕಾರಿ ನೇಮಕಾತಿಗಳಲ್ಲಿ ಮೀಸಲು ಪ್ರಮಾಣವನ್ನು ಶೇ. 50ರಿಂದ ಶೇ. 56ಕ್ಕೆ ಹೆಚ್ಚಳ ಮಾಡಿದ ರಾಜ್ಯ ಸರಕಾರದ ಆದೇಶದ ಆಧಾರದ ಮೇಲೆ ಕರ್ನಾಟಕ ಲೋಕಸೇವಾ ಆಯೋಗ 2024ರ ಫೆ. 26ರಂದು ಹೊರಡಿಸಿದ್ದ 384 ಗೆಜೆಟೆಡ್ ಪ್ರೊಬೇಷನರ್ ನೇಮಕ ಅಧಿಸೂಚನೆಯನ್ನು ಕೆಎಟಿ ರದ್ದುಪಡಿಸಿತ್ತು.

# ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿಗೆ ಸುಪ್ರೀಂಕೋರ್ಟ್ ಹಿಗ್ಗಾಮುಗ್ಗಾ ತರಾಟೆ

**ನವದೆಹಲಿ :** ಚೀನಾ ಭಾರತದ 2 ಸಾವಿರ ಕಿ.ಮೀ ಭೂ ಪ್ರದೇಶವನ್ನು ಕಬಳಿಸಿದೆ ಎಂದು ನಿಮಗೆ ಹೇಗೆ ಗೊತ್ತು? ನೀವು ನಿಜವಾಗಿಯೂ ಭಾರತದ ಪ್ರಜೆಯಾಗಿದ್ದ-ರೆ ಈ ಮಾತನ್ನು ಹೇಳುತ್ತಿದ್ದೀರಾ? ಅರುಣಾಚಲಪ್ರದೇಶದಲ್ಲಿ ಚೀನಾ ಸೈನಿಕರು ಭಾರತಕ್ಕೆ ಸೇರಿದ 2000 ಕಿ.ಮೀ ಭೂಪ್ರದೇಶವನ್ನು ಆಕ್ರಮಿಸಿದೆ ಎಂಬ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಮಾಡಿದ ಆರೋಪಕ್ಕೆ ಸುಪ್ರೀಂಕೋರ್ಟ್ ಹಿಗ್ಗಾಮುಗ್ಗಾ ತರಾಟೆ-ಗೆ ತೆಗೆದುಕೊಂಡಿದೆ.

ಲಕ್ನೋದ ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯ ತಮ ಹೇಳಿಕೆ ಕುರಿತು ಹೊರಡಿಸಿದ್ದ ಸಮನ್ಸ್ ಪ್ರಶ್ನಿಸಿ ರಾಹುಲ್ ಗಾಂಧಿ ಸುಪ್ರೀಂಕೋರ್ಟ್‌ನಲ್ಲಿ ಮೇಲನವಿ ಸಲ್ಲಿಸಿದ್ದರು.

ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದ ದೀಪಂಕರ್ ದತ್ತ ಮತ್ತು ಎ.ಜಿ.ಮಸಿಹ್ ಅವರನ್ನೊಳಗೊಂಡ ದ್ವಿಸದಸ್ಯ ಪೀಠವು, ಚೀನಾ ಅರುಣಾಚಲ ಪ್ರದೇಶದಲ್ಲಿ 2 ಸಾವಿರ ಕಿ.ಮೀ ಪ್ರದೇಶವನ್ನು ಕಬಳಿಕೆ ಮಾಡಿದೆ ಎಂದು ಅಷ್ಟು ನಿರ್ಧಿಷ್ಟವಾಗಿ ಯಾವ ಗ್ಯಾರಂಟಿ ಮೇಲೆ ನೀವು ಹೇಳುತ್ತೀರಿ. ಇದು ನಿಮಗೆ ಹೇಗೆ ತಿಳಿಯಿತು ಎಂದು ರಾಹುಲ್ ಗಾಂಧಿ ಪರ ವಕೀಲರನ್ನು ಪ್ರಶ್ನೆ ಮಾಡಿದರು.

ನೀವೊಬ್ಬ ಜವಾಬ್ದಾರಿಯುತ ಪ್ರತಿಪಕ್ಷದ ನಾಯಕ. ಕೇವಲ ಹೊರಗಡೆ ಆರೋಪ ಮಾಡುವುದು ಸರಿಯಲ್ಲ. ಸೂಕ್ಷ್ಮ ವಿಷಯಗಳನ್ನು ಸಂಸತ್ತಿನಲ್ಲಿ ಪ್ರಶ್ನೆ ಮಾಡಬಹುದು. ಅಲ್ಲಿ ಮಾತ್ರ ಪ್ರಶ್ನೆ ಕೇಳದೆ ಸಾರ್ವಜನಿಕವಾಗಿ ಆರೋಪ ಮಾಡುವುದು ಸರಿಯೇ? ಎಂದು ಪ್ರಶ್ನಿಸಿದರು.

ರಾಹುಲ್ ಆರೋಪಕ್ಕೆ ತಿರುಗೇಟು ಕೊಟ್ಟಿದ್ದ ವಿದೇಶಾಂಗ ವ್ಯವಹಾರಗಳ



ಸಚಿವ ಎಸ್.ಜೈಶಂಕರ್, ಕೆಲವು ವ್ಯಕ್ತಿಗಳು ರಾಜಕೀಯ ಲಾಭಕ್ಕಾಗಿ ಚೀನಾ ವಿಷಯದ ಬಗ್ಗೆ ಉದ್ದೇಶಪೂರ್ವಕವಾಗಿ ಸುಳ್ಳು ಮಾಹಿತಿ ಹರಡುತ್ತಿದ್ದಾರೆ. 1962 ರಲ್ಲಿ ಕಳೆದುಕೊಂಡ ಭೂಮಿಯನ್ನು ಇತ್ತೀಚಿನ ಬೆಳವಣಿಗೆ ಎಂದು ಅವರು ದಾರಿತಪ್ಪಿಸುವ ರೀತಿಯಲ್ಲಿ ಬಿಂಬಿಸುತ್ತಾರೆ ಎಂದು ತಿರುಗೇಟು ನೀಡಿದ್ದರು.

ಗಡಿಯಾಚೆ ಸಂಘರ್ಷ ಉಂಟಾದರೆ, ಎರಡೂ ಕಡೆಗಳಲ್ಲಿ ಸಾವುನೋವುಗಳು ಸಂಭವಿಸುವುದು ಅಸಾಮಾನ್ಯವೇ? ಕೇವಲ ಸಾರ್ವಜನಿಕ ವೇದಿಕೆ ಅಲ್ಲದೆ ಬೇರೆ ಕಡೆ-ಯೂ ಈ ಮಾತನ್ನು ಉಲ್ಲೇಖಿಸಿದ್ದಾರೆ. ಲೋಕಸಭೆಯಲ್ಲಿ ಮಾತ್ರ ಏಕೆ ಪ್ರಸ್ತಾಪಿಸಿಲ್ಲ ಎಂದು ನ್ಯಾಯಮೂರ್ತಿಗಳು ಪ್ರಶ್ನೆ ಮಾಡಿದರು.

ರಾಹುಲ್ ಗಾಂಧಿ ಪರ ಹಿರಿಯ ವಕೀಲ ಡಾ. ಅಭಿಷೇಕ್ ಮನು ಸಿಂಘ್ವಿ ವಾದ ಮಂಡಿಸಿ, ವಿರೋಧ ಪಕ್ಷದ ನಾಯಕರೊಬ್ಬರು ಸಮಸ್ಯೆಗಳನ್ನು ಎತ್ತಲು ಸಾಧ್ಯವಾಗದಿದ್ದರೆ, ಅದು ದುರದೃಷ್ಟಕರ ಪರಿಸ್ಥಿತಿಯಾಗುತ್ತದೆ. ಪತ್ರಿಕೆಗಳಲ್ಲಿ ಪ್ರಕಟವಾಗುವ ವಿಷಯಗಳನ್ನು ಅವರು ಹೇಳಲು ಸಾಧ್ಯವಾಗದಿದ್ದರೆ, ಅವರು ವಿರೋಧ ಪಕ್ಷದ ನಾಯಕರಾಗಲು ಸಾಧ್ಯವಿಲ್ಲ ಎಂದು ಹೇಳಿದರು.

ಆಗ ನ್ಯಾಯಮೂರ್ತಿ ದತ್ತ ಅವರು, ಹಾಗಾದರೆ ನೀವು ಇಂಥ ವಿಷಯಗಳನ್ನು ಏಕೆ ಸಂಸತ್‌ನಲ್ಲಿ ಪ್ರಶ್ನೆ ಮಾಡಬಾರದು. ಕೇವಲ ಸಾರ್ವಜನಿಕ ವೇದಿಕೆಗಳಲ್ಲಿ ಮಾತ್ರ ಮಾತನಾಡಬೇಕೆ? ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡುವುದಕ್ಕಷ್ಟೇ ಸೀಮಿತವೇ? ಎಂದು ತರಾಟೆಗೆ ತೆಗೆದು-ಕೊಂಡರು.

ರಾಹುಲ್ ಗಾಂಧಿ ಹೇಳಿಕೆ:

ಜನವರಿ 2023ರಲ್ಲಿ ತಮ ಭಾರತ್ ಜೋಡೋ ಯಾತ್ರೆಯನ್ನು ಮುಕ್ತಾಯಗೊಳಿಸುವ ಮುನ್ನಾದಿನ ರಾಹುಲ್ ಗಾಂಧಿ, ಚೀನಾ ನಮ ಭೂಮಿಯನ್ನು ವಶಪಡಿಸಿಕೊಂಡಿದೆ ಎಂಬುದನ್ನು ಸಂಪೂರ್ಣವಾಗಿ ನಿರಾಕರಿಸುವ ಸರ್ಕಾರದ ವಿಧಾನವು ಅತ್ಯಂತ ಅಪಾಯಕಾರಿ, ಏಕೆ-ಂದರೆ ಇದು ಬೀಜಿಂಗ್ ಅನ್ನು ಇನ್ನಷ್ಟು ಆಕ್ರಮಣಕಾರಿಯಾಗಿ ವರ್ತಿಸಲು ಧೈರ್ಯ ತುಂಬಬಹುದು ಎಂದು ಎಚ್ಚರಿಸಿದ್ದರು.

ಈ ಚೀನಿಯರನ್ನು ನಿಭಾಯಿಸುವ ಮಾರ್ಗವೆಂದರೆ ಅವರೊಂದಿಗೆ ದೃಢವಾಗಿ ವ್ಯವಹರಿಸುವುದು ಮತ್ತು ಅವರು ನಮ ನೆಲದ ಮೇಲೆ ಕುಳಿತಿದ್ದಾರೆ ಮತ್ತು ನಾವು ಅದನ್ನು ಸಹಿಸುವುದಿಲ್ಲ ಎಂದು ಸ್ಪಷ್ಟವಾಗಿ ಹೇಳುವುದು. ಚೀನಿಯರು ಭಾರತದಿಂದ ಯಾವುದೇ ಭೂಮಿಯನ್ನು ತೆಗೆದುಕೊಂಡಿಲ್ಲ ಎಂಬ ಅಭಿಪ್ರಾಯದಲ್ಲಿರುವ ದೇಶದ ಏಕೈಕ ವ್ಯಕ್ತಿ ಭಾರತದ ಪ್ರಧಾನಿ. ನಾನು ಇತ್ತೀಚೆಗೆ ಕೆಲವು ಮಾಜಿ ಸೈನಿಕರನ್ನು ಭೇಟಿಯಾದೆ, ಲಡಾಖ್‌ನ ನಿಯೋಗವೂ ಸಹ, ನಮ ಭಾರತದ ಭೂಪ್ರದೇಶದ 2000 ಚದರ ಕಿಲೋಮೀಟರ್‌ಗಳನ್ನು ಚೀನಿಯರು ವಶಪಡಿಸಿಕೊಂಡಿದ್ದಾರೆಂದು ಸ್ಪಷ್ಟವಾಗಿ ತಿಳಿಸಿದ್ದಾರೆ ಗಾಂಧಿ ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದರು. ಒಂದು ಕಾಲದಲ್ಲಿ ಭಾರತದ ಭೂಪ್ರದೇಶದಲ್ಲಿದ್ದ ಅನೇಕ ಗಸ್ತು ಕೇಂದ್ರಗಳು ಈಗ ಚೀನಾದ ನಿಯಂತ್ರಣದಲ್ಲಿವೆ ಎಂದು ಮಾಜಿ ಸೇನಾ ಸಿಬ್ಬಂದಿ ತನಗೆ ಹೇಳಿದ್ದಾಗಿ ಅವರು ತಿಳಿಸಿದ್ದರು.

# ಸಮರ್ಪಕ ವಿದ್ಯುತ್ ಸರಬರಾಜಿಗೆ ಒತ್ತಾಯಿಸಿ ಪ್ರತಿಭಟನೆ

**ಚಿತ್ರದುರ್ಗ:** ಸಮರ್ಪಕವಾದ ವಿದ್ಯುತ್ ಸರಬರಾಜು ಮಾಡುವಂತೆ ಆಗ್ರಹಿಸಿ ಸೋಮವಾರ ನಗರದ ಬೆಸ್ಕಾಂ ಇಲಾಖೆಯ ಮುಖ್ಯ ಕಾರ್ಯಪಾಲಕ ಇಂಜಿನಿಯರ್‌ಯ ಮುಂದೆ ಪ್ರತಿಭಟನೆಯನ್ನು ಕರ್ನಾಟಕ ರಾಜ್ಯ ರೈತ ಸಂಘದವತಿಯಿಂದ ನಡೆಸಲಾಯಿತು.

ಚಿತ್ರದುರ್ಗ ತಾಲ್ಲೂಕು, ಕಸಬಾ ಹೋಬಳಿ ಗೋನೂರು ಈ4 ಫೀಡರ್ ಹಂಪಯ್ಯನಮಾಳಿಗೆ, ಬೊಮ್ಮನಹಳ್ಳಿ, ಬಚ್ಚಬೋರನಹಟ್ಟಿ, ಸಾಸಲಹಟ್ಟಿ, ಕಲ್ಲೇನಹಳ್ಳಿ ಇನ್ನೂ ಸುಮಾರು 10ಕ್ಕೂ ಹೆಚ್ಚು ಹಳ್ಳಿಗಳಿಗೆ ಈ ಫೀಡರ್‌ನಿಂದ ವಿದ್ಯುತ್ ಸರಬರಾಜು ಆಗುತ್ತದೆ. ಸರ್ಕಾರವು ಕೃಷಿ ಪಂಪ್‌ಸೆಟ್‌ಗಳಿಗೆ 7 ಗಂಟೆಗಳ ಕಾಲ ವಿದ್ಯುತ್ ಸರಬರಾಜು ಮಾಡಬೇಕೆಂದು ಆದೇಶಿಸಿರುತ್ತದೆ. ಆದರೆ ಈ ಫೀಡರ್‌ನಲ್ಲಿ 4-5 ಗಂಟೆಗಳ ಕಾಲ ಗುಣಮಟ್ಟದ ವಿದ್ಯುತ್‌ನ್ನು ಕೊಡುತ್ತಿಲ್ಲ.



ಕರೆಂಟ್ ಬಂದ 3 ಗಂಟೆ ಅವಧಿಯಲ್ಲಿ ಸುಮಾರು 10-12 ಸಾರಿ ಟ್ರಿಪ್ ಆಗುತ್ತದೆ. ಇದನ್ನು ಸೆಕ್ಷನ್ ಆಫೀಸರ್ ಗಮನಕ್ಕೆ ತಂದರೂ ಸಹ ಸರಿಪಡಿಸುತ್ತಿಲ್ಲ ರಾತ್ರಿಯ ವೇಳೆಯಲ್ಲಿ ವಿದ್ಯುತ್‌ನ್ನು ಪಂಪ್‌ಸೆಟ್‌ಗಳಿಗೆ ಕೊಡುವುದಿಲ್ಲ. ರೈತರು ತಮ್ಮ ಜಮೀನಿನಲ್ಲಿ ಹೂ, ಸೊಪ್ಪು, ತರಕಾರಿ, ಈರುಳ್ಳಿ ಹಾಕಿರುತ್ತಾರೆ. ಸಮರ್ಪಕವಾದ ವಿದ್ಯುತ್ ಕೊಡದ ಕಾರಣ ಬೆಳೆಗಳೆಲ್ಲ ಒಣಗುತ್ತಿವೆ. ಸರ್ಕಾರದ ಆದೇಶದಂತೆ 7 ಗಂಟೆಗಳ ವಿದ್ಯುತ್‌ನ್ನು ಸರಬರಾಜು ಮಾಡಬೇಕೆಂದು ಒತ್ತಾಯಿಸಿದರು.

ಈ ಫೀಡರ್‌ನಲ್ಲಿ ಲೈನ್ ಮ್ಯಾನ್‌ಗಳು ಕೇವಲ ಇಬ್ಬರಿದ್ದು, ಇವರು ವಿದ್ಯುತ್ ತಂತಿ ಕಟ್ಟಾದಾಗ ಟಿಸಿಯಲ್ಲಿ ಸಮಸ್ಯೆಯಾದಾಗ ನಾವು ಕಂಬ ಹತ್ತುವುದಿಲ್ಲ, ನಮಗೆ ಕಂಬ ಹತ್ತುವುದಕ್ಕೆ ಹೇಳಬೇಡಿ, ವಿದ್ಯುತ್ ಲೈನ್ ಏನಾದರೂ ತೊಂದರೆ-ಯಾದರೆ ನೀವೇ ಸರಿಪಡಿಸಿಕೊಳ್ಳಿ ಎಂದು ರೈತರಿಗೆ ಲೈನ್ ಮ್ಯಾನ್ ಹೇಳುತ್ತಾರೆ ಹಾಗೂ ಏನೇ ಲೈನ್‌ನಲ್ಲಿ ತೊಂದರೆಯಾದಾಗ ಲೈನ್ ಮ್ಯಾನ್‌ಗಳಿಗೆ ಫೋನ್ ಮಾಡಿದರೆ ಆಗ ಅವರು ಪೋನ್‌ನ್ನು ಸ್ವಿಚ್ ಆಫ್ ಮಾಡಿರುತ್ತಾರೆ ಇದರಿಂದ ಕೂಡಲೇ ಮೇಲಾಧಿಕಾರಿಗಳು ಲೈನ್ ಮ್ಯಾನ್‌ಗಳನ್ನು ಬದಲಿಸಿ ರೈತರಿಗೆ ಸ್ಪಂದಿಸುವರನ್ನು ನೇಮಿಸಬೇಕು ಹಾಗೂ ಗುಣಮಟ್ಟದ ವಿದ್ಯುತ್‌ನ್ನು ಕೃಷಿ ಪಂಪ್‌ಸೆಟ್‌ಗಳಿಗೆ ನೀಡಬೇಕೆಂದು ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಧನಂಜಯ, ಬಸ್ತಿಹಳ್ಳಿ ಸುರೇಶ್ ಬಾಬು, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ವಿಶ್ವನಾಥ್ ಶೆಟ್ಟಿ, ಕೃಷ್ಣಮೂರ್ತಿ, ಮಂಜುನಾಥ್ ರೆಡ್ಡಿ, ಲಕ್ಷ್ಮಣ್, ವೆಂಕಟೇಶ್, ಬಸವರಾಜು, ಚಿದಾನಂದ, ರಾಮಣ್ಣ, ಸಂಪತ್ತ್ ಕುಮಾರ್, ಉಮೇಶ್, ಮೊಡಲಗಿರಿಯಪ್ಪ, ಅಜ್ಜಪ್ಪ, ಪಾಂಡುರಂಗಪ್ಪ, ಶಂಕರಪ್ಪ, ಗೋವಿಂದಪ್ಪ, ಚಂದ್ರಪ್ಪ, ಈರಣ್ಣ ಪ್ರಹ್ಲಾದ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ರಾಹುಲ್‌ರಿಂದ ಕಪಟ ನಾಟಕ : ಬಿವೈವಿ ವಾಗ್ದಾಳಿ



**ಬೆಂಗಳೂರು :** ಲೋಕಸಭಾ ಚುನಾವಣೆಯಲ್ಲಿ ಮತಗಳ್ಳತನವಾಗಿದೆ ಎಂದು ಆರೋಪಿಸಿ ಬೆಂಗಳೂರಿನಲ್ಲಿ ಆ. 5 ರಂದು ರಾಹುಲ್‌ಗಾಂಧಿ ಪ್ರತಿಭಟನೆ ನಡೆಸಲು ಮುಂದಾಗಿರುವುದಕ್ಕೆ ಕಿಡಿಕಾರಿರುವ ರಾಜ್ಯ ಬಿಜೆಪಿ, ರಾಹುಲ್‌ಗಾಂಧಿ ಪ್ರಜಾಪ್ರಭುತ್ವದ ಮೇಲೆ ವಿಶ್ವಾಸ ಕಳೆದುಕೊಂಡು ಹತಾಶರಾದಂತಿದೆ. ಕಪಟ ನಾಟಕ ಆರಂಭಿಸಿದ್ದಾರೆ ಎಂದು ವಾಗ್ದಾಳಿ ನಡೆಸಿದೆ.

ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿಂದು ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಮಾಜಿ ಸಚಿವ ಸಿ.ಟಿ .ರವಿ ಅವರು, ರಾಹುಲ್‌ಗಾಂಧಿ ಅವರ ಮತಗಳ್ಳತನ ಪ್ರತಿಭಟನೆ ಒಂದು ದೊಡ್ಡ ಡ್ರಾಮಾ ಎಂದು ಟೀಕಿಸಿದರು.

ಕಾಂಗ್ರೆಸ್ ಪಕ್ಷ ರಾಜ್ಯ ಮತ್ತು ದೇಶದಲ್ಲಿ ಹೊಸ ವರಸೆ ಆರಂಭಿಸಿದೆ. ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಚುನಾವಣಾ ಆಯೋಗವನ್ನು ದುರ್ಬಳಕೆ ಮಾಡಿಕೊಂಡಿದೆ ಎಂದು ಸುಖಾಸುಮ್ಮನೆ ದೂರುತ್ತಿದೆ ಎಂದು ಹರಿಹಾಯ್ದರು.

ಲೋಕಸಭಾ ಚುನಾವಣೆಯಲ್ಲಿ ಅಕ್ರಮ ನಡೆದಿರುವುದಕ್ಕೆ ಸಾಕ್ಷಿ, ಪುರಾವೆ ಇದೆ ಎಂದು ರಾಹುಲ್ ಹೇಳಿದ್ದಾರೆ. ಹಾಗಾದರೆ ಪುರಾವೆ, ಸಾಕ್ಷಿಯನ್ನು ನ್ಯಾಯಾಲಯಕ್ಕೆ ಕೊಟ್ಟು ಪ್ರಶ್ನೆ ಮಾಡಬಹುದಿತ್ತು ಅದು ಬಿಟ್ಟು ಕಪಟ ನಾಟಕ ಆರಂಭಿಸಿದ್ದಾರೆ ಎಂದು ಟೀಕಿಸಿದರು.

ಕಾಂಗ್ರೆಸ್‌ನ ರಾಹುಲ್‌ಗಾಂಧಿಗೆ ಪ್ರಧಾನಿ ಸ್ಥಾನದಲ್ಲಿ ಮೋದಿ ಅವರನ್ನು ನೋಡಲು ಆಗುತ್ತಿಲ್ಲ .ಸಹಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ದೇಶವನ್ನು ಅಡ್ಡದಾರಿಗೆ ತೆಗೆದುಕೊಂಡು ಹೋಗುವ ಕೆಲಸ ಮಾಡುತ್ತಿದ್ದಾರೆ. ರಾಹುಲ್ ಗಾಂಧಿ ಹಾಗೂ ಕಾಂಗ್ರೆಸ್‌ನ ನಡವಳಿಕೆ ಪ್ರಜಾಪ್ರಭುತ್ವದ ಕಗ್ಗೊಲೆ ಮಾಡುವ ನಡವಳಿಕೆ ಆಗಿದೆ ಎಂದು ಟೀಕಿಸಿದರು.

ಈ ಹಿಂದೆ ತುರ್ತು ಪರಿಸ್ಥಿತಿ ಹೇರಿದ್ದ ಸಂದರ್ಭವನ್ನು ಮತ್ತೆ ಸೃಷ್ಟಿಸಲು ರಾಹುಲ್‌ಗಾಂಧಿ ಹೊರಟಂತಿದೆ ಎಂದು ಹರಿಹಾಯ್ದರು.

ರಾಹುಲ್‌ಗಾಂಧಿ ಅವರು ತಮ್ಮ ನಾಯಕತ್ವದ ಬಗ್ಗೆ ವಿಶ್ವಾಸ ಕಳೆದುಕೊಂಡಿದ್ದಾರೆ. ಹಾಗಾಗಿ ಈ ರೀತಿಯ ಡ್ರಾಮಾ ಆರಂಭಿಸಿದ್ದಾರೆ ಎಂದರು.

ಮತದಾರರ ಪಟ್ಟಿ ಪರಿಷ್ಕರಣೆಗೆ ಸರ್ಕಾರಿ ಅಧಿಕಾರಿಗಳನ್ನು ಬಳಸಿಕೊಳ್ಳುತ್ತಾರೆ. 2014ರ ಮೊದಲು ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿತ್ತು. 2013 ರಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿತ್ತು. 2019 ಮತ್ತು 2024ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ರಾಜ್ಯದಲ್ಲಿ ಅಧಿಕಾರದಲ್ಲಿತ್ತು. ಅಧಿಕಾರಿಗಳನ್ನು ವರ್ಗಾವಣೆ ಪೋಸ್ಟಿಂಗ್ ಮಾಡಿದ್ದು ಕಾಂಗ್ರೆಸ್ ಹಾಗಾದರೆ ಅಧಿಕಾರ ದುರ್ಬಳಕೆ ಮಾಡಿದ್ದು ಯಾರು ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಪಕ್ಷಕ್ಕೆ ಅಕ್ರಮ ಮಾಡಿದ ಇತಿಹಾಸ ಇದೆ. ಹಾಗಾಗಿ ಅವರಿಗೆ ಅಕ್ರಮ ಎಸಗಿರಬಹುದೇ ಎಂಬ ಅನುಮಾನ ಕಾಡುತ್ತಿದೆ. ರಾಹುಲ್‌ಗಾಂಧಿ ತಾನು ಕಳ್ಳ ಪರರ ನಂಬ ಎಂಬಂತೆ ಹೇಳಿಕೆ ಕೊಡುತ್ತಿದ್ದಾರೆ. ಕಾಂಗ್ರೆಸ್ ನಡವಳಿಕೆ ಕೂಡಾ ಇದೇ ರೀತಿ ಆಗಿದೆ ಎಂದು ಹೇಳಿದರು.

ರಾಹುಲ್‌ಗಾಂಧಿ ಮಾಡಿರುವ ಆರೋಪ ಸಾಬೀತಾಗದಿದ್ದರೆ ಅವರನ್ನು ಹುಚ್ಚಾಸ್ಪತ್ರೆಗೆ ಕಳುಹಿಸಬೇಕು ಎಂದು ಹೇಳಿದರು.

# ಚಿತ್ರದುರ್ಗ: ತಂಬಾಕು ಕಾರ್ಯಾಚರಣೆ

**ಚಿತ್ರದುರ್ಗ :** ಕೋಟ್ಪಾ–2003ರ ಕಾಯ್ದೆಯ ಕುರಿತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಈಚೆಗೆ ಚಿತ್ರದುರ್ಗ ನಗರ ಪ್ರದೇಶಗಳಲ್ಲಿ ಜಿಲ್ಲಾ ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ಭೇಟಿ ನೀಡಿ ದಂಡ ವಿಧಿಸಿದೆ.

ಯುವಜನತೆಯು ಅತೀ ಹೆಚ್ಚಾಗಿ ತಂಬಾಕಿನ ದುಶ್ಚಟಗಳಿಗೆ ಒಳಗಾಗುತ್ತಿದ್ದಾರೆ. ಇದರಿಂದಾಗಿ ಸಮಾಜದಲ್ಲಿ ಸಾವಿನ ಸಂಖ್ಯೆಯಲ್ಲಿ ಹೆಚ್ಚಾಗಿ ಯುವಕರೇ ಬಲಿಯಾಗುತ್ತಿದ್ದಾರೆ ಎಂದು ಯುವಕರಿಗೆ ಮತ್ತು ಅಂಗಡಿ ಮಾಲೀಕರಿಗೆ ತಿಳಿಸುತ್ತಾ ತಂಬಾಕು ಕಾರ್ಯಾಚರಣೆಯನ್ನು ಮಾಡಿ ಸಾರ್ವಜನಿಕರಲ್ಲಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಉಗಿಯದಂತೆ ಎಚ್ಚರಿಸಿ ಜಾಗೃತಿಯನ್ನು ಮೂಡಿಸಲಾಯಿತು.

ಸಂಬಂಧಪಟ್ಟ ಸೆಕ್ಷನ್–4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು ಮತ್ತು ಸೆಕ್ಷನ್–4 ಅಡಿಯಲ್ಲಿ 19 ಕೇಸುಗಳನ್ನು ದಾಖಲಿಸಿ ರೂ. 1775 ದಂಡವನ್ನು ಮತ್ತು ಸೆಕ್ಷನ್–6ಎ ಅಡಿಯಲ್ಲಿ 08 ಕೇಸುಗಳನ್ನು ದಾಖಲಿಸಿ ರೂ. 775 ದಂಡವನ್ನು ವಸೂಲಿ ಮಾಡಲಾಯಿತು.

ತಂಬಾಕು ದಾಳಿಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ, ಸಮಾಜ ಕಾರ್ಯಕರ್ತ ಕೆ.ಎಂ.ತಿಪ್ಪೇಸ್ವಾಮಿ, ಜಿಲ್ಲಾ ಸರ್ವೇಕ್ಷಣಾ ಘಟಕದ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸಿ.ವಿಶ್ವ ಇದ್ದರು.

# ನಿವೇಶನ ರಹಿತರಿಗೆ ವಸತಿ ಸೌಲಭ್ಯ ಕಲ್ಪಿಸಲು ಒತ್ತಾಯಿಸಿ ಭಾರತ ಕಮ್ಯುನಿಸ್ಟ್ ಪಕ್ಷ ಪ್ರತಿಭಟನೆ

**ಚಿತ್ರದುರ್ಗ :** ನಿವೇಶನ ರಹಿತರಿಗೆ ವಸತಿ ಸೌಲಭ್ಯ ಕಲ್ಪಿಸುವಂತೆ ಭಾರತ ಕಮ್ಯುನಿಸ್ಟ್ ಪಕ್ಷದ ಸಹಯೋಗದೊಂದಿಗೆ ನಿವೇಶನ ಮತ್ತು ವಸತಿ ರಹಿತರ ಹೋರಾಟ ಸಮಿತಿಯಿಂದ ಒನಕೆ ಓಬವ್ವ ವೃತ್ತದಲ್ಲಿ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ದಾವಣಗೆರೆ ರಸ್ತೆಯಲ್ಲಿರುವ ಯೂನಿಯನ್ ಪಾರ್ಕ್‌ನಿಂದ ಮೆರವಣಿಗೆ ಮೂಲಕ ಆಗಮಿಸಿದ ಪ್ರತಿಭಟನಾಕಾರರು ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರಗಳನ್ನು ಕೂಗಿದರು.

ಭಾರತ ಕಮ್ಯುನಿಸ್ಟ್ ಪಕ್ಷದ ರಾಜ್ಯ ಕಾರ್ಯದರ್ಶಿ ನಿವೇಶನ ಮತ್ತು ವಸತಿ ರಹಿತರ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಸಾತಿ ಸುಂದರೇಶ್ ಮಾತನಾಡಿ ಜಿಲ್ಲೆಯಲ್ಲಿ ಐವತ್ತು ಸಾವಿರ ಕುಟುಂಬಗಳಿಗೆ ನಿವೇಶನವಿಲ್ಲ. ಎಲ್ಲೆಲ್ಲಿ ಸರ್ಕಾರಿ ಭೂಮಿ ಇದೆಯೋ ಅದನ್ನು ಬಡವರ ವಸತಿಗಾಗಿ ಮೀಸಲಿಡಬೇಕು. ರಾಜ್ಯದಲ್ಲಿ ಹದಿನೇಳು ಲಕ್ಷ ಎಕರೆ ಗೋಮಾಳ ಜಮೀನಿದೆ. ಹನ್ನೊಂದು ಲಕ್ಷ ಎಕರೆ ಒತ್ತುವರಿಯಾಗಿದ್ದು, ಶ್ರೀಮಂತರ ವಶದಲ್ಲಿದೆ. ಕಮ್ಯುನಿಸ್ಟ್ ಪಕ್ಷ ಬಡವರ ಪರವಾಗಿದೆ. ನಿವೇಶನ, ಮನೆಗಾಗಿ ಹೋರಾಡಬೇಕಾಗಿರುವುದರಿಂದ ಎಲ್ಲರೂ ಒಗ್ಗಟ್ಟಾಗಿ ಎಂದು ಮನವಿ ಮಾಡಿದರು.

ಆಳುವ ಸರ್ಕಾರಗಳು ಬಡವರ ಪರವಾಗಿಲ್ಲ.




2000 ರಲ್ಲಿ ರಾಜೀವ್‌ಗಾಂಧಿ ವಸತಿ ನಿಗಮ ಸ್ಥಾಪನೆಯಾಯಿತು. ಅಂದಿನಿಂದ ನಿವೇಶನ ರಹಿತರಿಗೆ ಮನೆಗಳನ್ನು ಕಟ್ಟಿಸಿಕೊಡುವ ಕೆಲಸ ಮಾಡುತ್ತಿದೆ. ನಿವೇಶನಕ್ಕಾಗಿ ಅರ್ಜಿ ಕೊಟ್ಟಿದ್ದೇವೆ. ಇನ್ನು ಕೊಡುತ್ತೇವೆ. ನಿಗಮದ ವೆಬ್‌ಸೈಟ್ ಕಂಪ್ಯುಟರ್‌ನಲ್ಲಿ ಮೊದಲು ನಿವೇಶನ ರಹಿತರ ಹೆಸರುಗಳನ್ನು ಸೇರಿಸಬೇಕು. ಸರ್ಕಾರದಿಂದ ಜಮೀನು ಕೇಳೋಣ. ಅಲ್ಲಿಯವರೆಗೂ ತಾಳ್ಮೆಯಿಂದ ಕಾಯಬೇಕೆಂದು ನಿವೇಶನ ಮತ್ತು ವಸತಿ ರಹಿತರನ್ನು ಜಾಗೃತಿಗೊಳಿಸಿದರು.

ನಿವೇಶನ ಮತ್ತು ವಸತಿ ರಹಿತರ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ಕಾಂ.ಜಿ.ಸಿ.ಸುರೇಶ್‌ಬಾಬು ಮಾತನಾಡಿ ಜಿಲ್ಲೆಯಲ್ಲಿ ಒಂದು ಲಕ್ಷ 26 ಸಾವಿರ ನಿವೇಶನರಹಿತರಿದ್ದಾರೆ. ತೆಲಂಗಾಣದಲ್ಲಿ ವಸತಿ ರಹಿತರಿಗೆ ಮನೆಗಳನ್ನು ಕಟ್ಟಿಸಿಕೊಳ್ಳಲು ಐದು ಲಕ್ಷ ರೂ.ಗಳನ್ನು ನೀಡುತ್ತಿದೆ. ಕೇರಳದಲ್ಲಿ ಆರುವರೆ ಲಕ್ಷ ರೂ.ಗಳನ್ನು ಕೊಡುತ್ತಿದೆ. ನಮ್ಮ ರಾಜ್ಯದಲ್ಲಿ ಒಂದುವರೆ ಲಕ್ಷ ರೂ.ಗಳು ನೀಡುತ್ತಿರುವುದು ಯಾವುದಕ್ಕೂ ಸಾಕಾಗುವುದಿಲ್ಲ. ಅದಕ್ಕಾಗಿ ಐದು ಲಕ್ಷ ರೂ.ಗಳನ್ನು ನೀಡಬೇಕೆಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ಜಿಲ್ಲೆಯಲ್ಲಿ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿರುವ ಸರ್ಕಾರಿ ಭೂಮಿಯನ್ನು ಕಾಯ್ದಿರಿಸಿ ವಸತಿ ರಹಿತರಿಗೆ ಹಂಚಿ ಮನೆಗಳನ್ನು ಕಟ್ಟಿಸಿಕೊಡಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಎಲ್ಲಾ ವಸತಿ ರಹಿತರನ್ನು ಗುರುತಿಸಿ ವಸತಿ ವ್ಯವಸ್ಥೆ ಕಲ್ಪಿಸುವಂತೆ ವಿನಂತಿಸಿದರು.

ನಿವೇಶನ ಮತ್ತು ವಸತಿ ರಹಿತರ ಹೋರಾಟ ಸಮಿತಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಂ.ಟಿ.ಆರ್. ಉಮಾಪತಿ, ತಾಲ್ಲೂಕು ಅಧ್ಯಕ್ಷ ಡಾ.ಜಿ.ಹೆಚ್. ಹನುಮಂತಪ್ಪ, ತಾಲ್ಲೂಕು ಕಾರ್ಯದರ್ಶಿ ಕಾಂ.ಈ.ಸತ್ಯಕೀರ್ತಿ, ಕಾಂ.ಬಿ.ಬಸವರಾಜು, ಕಾಂ.ಸಿ.ವೈ.ಶಿವರುದ್ರಪ್ಪ, ಕಾಂ. ಎಂ.ಬಿ.ಜಯದೇವಮೂರ್ತಿ, ಕಾಂ.ಎಸ್.ಬಾಬು, ಕಾಂ.ಶ್ರೀಧರ್‌ಯಾದವ್, ಕಾಂ.ಜಾಫರ್ ಷರೀಫ್, ಕಾಂ.ಡಿ.ಪೆನ್ನಯ್ಯ, ಕಾಂ. ಮಾರಣ್ಣ, ಕಾಂ.ಎನ್.ಸಿ.ಕುಮಾರಸ್ವಾಮಿ, ಕಾಂ.ಹೆಚ್. ಕೆ.ಸುನಿತಮ್ಮ, ಕಾಂ.ಹೆಚ್.ಎಸ್.ರೇಣುಕಮ್ಮ, ಕಾಂ. ಎಸ್.ಸಿ.ಕುಮಾರ್, ಕಾಂ.ಕೆಂಚಮ್ಮ ಕಾಂ.ಶಾಜಿಯ, ಕಾಂ.ಅಮೀನಾಭಿ, ಕಾಂ.ಮಹೇಶ್ವರಿ, ಕಾಂ.ಗಂಗಮ್ಮ, ಕಾಂ.ರಾಮಕೃಷ್ಣ, ಕಾಂ.ಶಶಿಧರ ಸೇರಿದಂತೆ ನೂರಾರು ನಿವೇಶನ ಮತ್ತು ವಸತಿ ರಹಿತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಅಗ್ನಿಹೋತ್ರದಿಂದ ಭೂಪಾಲದ ಒಂದು ಪ್ರದೇಶದಲ್ಲಿ ವಿಷಗಾಳಿ ಪ್ರವೇಶ ತಡೆ

**ದಾವಣಗೆರೆ :** ಸಂವಿಧಾನದ ಮೌಲ್ಯಗಳನ್ನು ಜೀವಂತಗೊಳಿಸಲು, ಜಾತಿ, ಧರ್ಮದ ಭೇದವನ್ನು ಬಿಟ್ಟು ಭ್ರಾತೃತ್ವವನ್ನು ಹೆಚ್ಚಿಸಲು ಏಕತೆ ಮತ್ತು ಅಖಂಡತೆಯನ್ನು ಸಾಧಿಸಲು, ಅಗ್ನಿಹೋತ್ರ ಒಂದು ಪರಿಣಾಮಕಾರಿ ಮಾರ್ಗವಾಗಿದೆ ಎಂದು ರಾಜ್ಯ ಉಚ್ಚ ನ್ಯಾಯಾಲಯದ ನ್ಯಾಯಾಮೂರ್ತಿ ಹಂಚಾಟೆ ಸಂಜೀವಕುಮಾರ್ ಹೇಳಿದ್ದಾರೆ.

ನಗರದ ತ್ರಿಶೂಲ್ ಕಲಾ ಭವನದಲ್ಲಿ ಶ್ರೀ ಸಿದ್ಧಲಿಂಗೇಶ್ವರ ಗದ್ದುಗೆ ಮಠ (ಕಾಲಜ್ಞಾನ ಮಠ)ದಿಂದ ಲೋಕಕಲ್ಯಾಣಾರ್ಥವಾಗಿ, ಸನಾತನ ಧರ್ಮದ ರಕ್ಷಣೆಗಾಗಿ, ದೈವೀಶಕ್ತಿಯ ಸಾಕರ ಹಾಗೂ ಪರಿಸರ ಶುದ್ಧತೆಗಾಗಿ ಹಮ್ಮಿಕೊಳ್ಳಲಾಗಿದ್ದ 'ಸಿದ್ಧ ಅಗ್ನಿಹೋತ್ರ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಗ್ನಿಹೋತ್ರದಲ್ಲಿ ದ್ವೇಷ, ಅಸೂಯೆ, ಲೋಭ, ಮದ, ಮತ್ಸರಗಳಿಗೆ ಇಲ್ಲಿ ಯಾವುದೇ ಅವಕಾಶವಿಲ್ಲ. ಎಲ್ಲರೂ ನಮ್ಮವರು ಎಂಬ ಮನೋಭಾವ ಬಂದಾಗ, ಸಹೋದರತೆ ತಾನಾಗಿಯೇ ಜನ್ಮತಾಳುತ್ತದೆ. ಇದೇ ಸಂವಿಧಾನದ ಪೀಠಿಕೆಯ ತಿರುಳಾಗಿದೆ ಎಂದು ಹೇಳಿದರು.



ಸಿದ್ಧ ಅಗ್ನಿಹೋತ್ರವು ಕೇವಲ ಧಾರ್ಮಿಕ ಸಂಸ್ಥೆಗಳಿಗೆ ಸೀಮಿತವಾದದ್ದಲ್ಲ. ಪ್ರತಿ ಮನೆಯಲ್ಲಿ ಲಿಂಗಭೇದ, ವಯಸ್ಸಿನ ಭೇದವಿಲ್ಲದೆ ಎಲ್ಲರೂ ನಡೆಸ ಬಹುದಾದ ಪವಿತ್ರವಾದ ಹಾಗೂ ವೈಜ್ಞಾನಿಕ ಪೂಜೆ ಯಾಗಿದೆ ಎಂದು ನ್ಯಾಯಾಧೀಶರು ಪ್ರತಿಪಾದಿಸಿದರು.

ಭೋಪಾಲ್ ಅಗ್ನಿ ದುರಂತದಲ್ಲಿ, ವಿಷಕಾರಿ ಗಾಳಿಯು ಸುಮಾರು ಹತ್ತು ಕಿಲೋಮೀಟರ್‌ಗಳ ವ್ಯಾಪ್ತಿಯಲ್ಲಿ ಹರಡಿ, ಸಾವಿರಾರು ಜನರನ್ನು ಬಲಿತೆಗೆದುಕೊಂಡಿತು. ಇದು ಭಾರತದ ಇತಿಹಾಸದಲ್ಲೇ ಅತ್ಯಂತ ದೊಡ್ಡ ದುರಂತಗಳಲ್ಲಿ ಒಂದಾಗಿದೆ. ಈ ದುರಂತದಲ್ಲಿ ಅನೇಕರು ಸಾವನ್ನಪ್ಪಿದರೆ, ಇನ್ನೂ ಅನೇಕರು ಅಂಗವೈಕಲ್ಯಕ್ಕೆ ಒಳಗಾದರು. ಆದರೆ, ಆ ದುರಂತದ ಸಂದರ್ಭದಲ್ಲಿ ಎರಡು ಕಿಲೋಮೀಟರ್ ಅಂತರದಲ್ಲಿ ನಾಲ್ಕು ಬ್ರಾಹ್ಮಣ ಕುಟುಂಬಗಳು ಪ್ರತಿದಿನ ಅಗ್ನಿಹೋತ್ರವನ್ನು ನಡೆಸುತ್ತಿದ್ದವು. ಇದರಿಂದಾಗಿ ಆ ಪ್ರದೇಶದಲ್ಲಿ ವಿಷಕಾರಿ ಗಾಳಿಯ ಪ್ರವೇಶವನ್ನು ತಡೆಯಲಾಯಿತು. ಇದು ಅಗ್ನಿಹೋತ್ರದ ಅದ್ಭುತ ಶಕ್ತಿಯನ್ನು ತೋರಿಸುತ್ತದೆ. ವೈಜ್ಞಾನಿಕವಾಗಿಯೂ ಇದು ಸಾಬೀತಾಗಿದೆ.

# ಉತ್ತಮ ಸಮಾಜ ನಿರ್ಮಾಣಕ್ಕೆ ಶಕ್ತಿ ಮೀರಿ ಶ್ರಮಿಸಿ

## ಮಹಿಳಾ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ ಕಾರ್ಯಾಗಾರದಲ್ಲಿ ನ್ಯಾಯಾಧೀಶರಾದ ಮಹಾವೀರ್ ಮ ಕರೆಣ್ಣವರ್

**ದಾವಣಗೆರೆ :** ಸಮಾಜದಲ್ಲಿನ ಬಡತನ, ಸಾಮಾಜಿಕ ಅಸಮತೋಲನ, ಮಾನವ ಕಳ್ಳಸಾಗಾಣಿಕೆ ತಡೆಗಟ್ಟುವ ಸಲುವಾಗಿ ಎಲ್ಲರೂ ಶಕ್ತಿಮೀರಿ ಪ್ರಯತ್ನಿಸೋಣ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ್ ಹೇಳಿದರು.

ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಹಿಳಾ ಸಬಲೀಕರಣ, ಸುಧಾರಣಾ ಸಂಸ್ಥೆಗಳು ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾದ "ಮಹಿಳಾ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ" ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆ ಮತ್ತು ಮಕ್ಕಳ ಕಳ್ಳಸಾಗಣೆಯ ಜಾಲವಿಂದು ಹೈಟೆಕ್ ಮಾದರಿ ಪಡೆದಿದೆ. ಇಂದಿನ ಮಕ್ಕಳಿಗೆ ಮೊಬೈಲ್, ಇನ್ನಿತರೆ ಅಗತ್ಯ ವಸ್ತುಗಳ ಬಗ್ಗೆ ಹೆಚ್ಚಿನ ಒಲವಿದೆ. ಇದನ್ನೆ ಬಂಡವಾಳವನ್ನಾಗಿಸಿಕೊಂಡ ಕೆಲವರು ಮಹಿಳೆ ಮತ್ತು ಮಕ್ಕಳಿಗೆ ಆಸೆ ಆಮೀಷ ನೀಡುವ ಮೂಲಕ ಲೈಂಗಿಕ ಶೋಷಣೆಗಾಗಿ, ಮಕ್ಕಳ ಒತ್ತಾಯಪೂರ್ವಕ ಬಿಕ್ಷಾಟನೆಗೆ, ಜೀತಕ್ಕೆ, ಬಾಲಕಾರ್ಮಿಕತೆಗೆ, ಅಂಗಾಂಗ ಕಸಿ, ಬಾಲ್ಯ ವಿವಾಹ ಹಾಗೂ ಮದ್ಯ–ಮಾದಕ ವಸ್ತುಗಳ ಸಾಗಾಟಕ್ಕಾಗಿ ಮಾನವ ಕಳ್ಳಸಾಗಣೆ ಮಾಡಲಾಗುತ್ತಿದೆ. ಇಂತಹ ದುಷ್ಕೃತ್ಯಕ್ಕೆ ಕೇವಲ ಮಕ್ಕಳನ್ನು, ಯುವಕರು ವಯಸ್ಕರನ್ನು ಸಹ ಬಳಸಿಕೊಳ್ಳಲಾಗುತ್ತಿದೆ. ಆದ್ದರಿಂದ ಅಧಿಕಾರಿಗಳು ಪ್ರಕರಣಗಳನ್ನು ಬೇಧಿಸುವಲ್ಲಿ ಹದ್ದಿನ ಕಣ್ಣಿಡಬೇಕಾಗಿದೆ. ವಿಶೇಷವಾಗಿ ಗ್ರಾಮ, ಹೋಬಳಿ ಹಾಗೂ ತಾಂಡಗಳಲ್ಲಿ ಈ ಕುರಿತು ಅರಿವು ಮೂಡಿಸಬೇಕು. ಉತ್ತಮ ಸಮಾಜ ನಿರ್ಮಿಸುವಲ್ಲಿ ತಾವೆಲ್ಲರೂ ಕೈ ಜೋಡಿಸಿ ನದಿ ಪ್ರವಾಹಕ್ಕೆ ವಿರುದ್ಧ ದಿಕ್ಕಿನಲ್ಲಿ ಈಜುತ್ತಿರುವ ಅನಿಷ್ಠ ಪದ್ಧತಿಯ ನಿರ್ಮೂಲನೆಗೆ ಶಕ್ತಿ ಮೀರಿ ಪ್ರಯತ್ನಿಸೋಣ ಎಂದರು.



ಮಕ್ಕಳ ರಕ್ಷಣಾ ಆಯೋಗದ ಸದಸ್ಯರು ಹಾಗೂ ಜಿಲ್ಲಾ ಮಾನವ ಕಳ್ಳ ಸಾಗಾಣಿಕೆ ತಡೆ ಸಮಿತಿ ಸದಸ್ಯ ರೂಪ ನಾಯ್ಕ್ ಮಾತನಾಡಿ, ಮಾನವ ಮತ್ತು ಮಕ್ಕಳ ಹಕ್ಕುಗಳು ಉಲ್ಲಂಘನೆಯಾಗುತ್ತಿರುವುದೇ ಇದಕ್ಕೆ ಪ್ರಮುಖ ಕಾರಣ. ಇದು ಶಾಲಾ ಹಂತದಲ್ಲಿಯೇ ಶಾಲೆಯಿಂದ ಹೊರಗುಳಿಯುವುದು, ವಿವಿಧ ಕಾರಣಗಳಿಂದ ಶೋಷಣೆಗೆ ಒಳಗಾಗುವುದು ಸೇರಿದಂತೆ ಹಲವಾರು ರೀತಿಯಲ್ಲಿ ಶೋಷಣೆಗೆ ಒಳಗಾಗುತ್ತಿದ್ದಾರೆ. ಇಲ್ಲಿ ಮಾನವ ಹಕ್ಕುಗಳು ಬಹುಮುಖ್ಯ ಪಾತ್ರವಹಿಸುತ್ತವೆ. ಆದ್ದರಿಂದ ಸ್ಥಳೀಯ ಆಡಳಿತ ಸಂಸ್ಥೆಗಳಾದ ಗ್ರಾಮ ಪಂಚಾಯತಿ, ಶಾಲಾ ಮಟ್ಟದಲ್ಲಿ ಹೆಚ್ಚಿನ ಜಾಗೃತವಹಿಸಿ ಕಾರ್ಯನಿರ್ವಹಿಸಬೇಕಿದೆ. ನಮ್ಮ ದೇಶವನ್ನು ಮುಂದುವರೆಯುತ್ತಿರುವ ರಾಷ್ಟ್ರವಾಗಿ ಗುರುತಿಸಿಕೊಂಡಿದೆ. ಆದರೆ ಇಂದಿಗೂ ಬಿಕ್ಷಾಟನೆ ದೃಶ್ಯಗಳು ಕಂಡುಬರುತ್ತಿರುವುದಲ್ಲದೇ, ಅಗತ್ಯ ಮೂಲಭೂತ ಸೌಕರ್ಯಗಳಿಲ್ಲ. ಆರ್ಥಿಕ ಮತ್ತು ಸಾಮಾಜಿಕವಾಗಿ ಬಲಹೀನವಾಗಿರುವುದರಿಂದಲೇ ಇಂತಹ ಪ್ರಕರಣಗಳು ಹೆಚ್ಚುತ್ತಿವೆ. ಹಾಗಾಗಿ ಸಾರ್ವಜನಿಕರಿಗೆ ಬಡತನ, ನೈಜ ಬದುಕಿನ ಬಗ್ಗೆ ಮತ್ತಷ್ಟು ಅರಿವು ಅಗತ್ಯ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಾನಾಯ್ಕ್ ಮಾತನಾಡಿ, ಮಹಿಳಾ ಮತ್ತು ಮಕ್ಕಳ ಕಳ್ಳಸಾಗಾಣೆ, ಬಾಲ್ಯವಿವಾಹ, ಮಹಿಳಾ ಮತ್ತು ಮಕ್ಕಳ ಮೇಲಿನ ದೌರ್ಜನ್ಯ ತಡೆಗಟ್ಟಲು ಗ್ರಾಮ ಪಂಚಾಯತ್, ಹಾಗೂ ತಾಲ್ಲೂಕು ಮಟ್ಟದಲ್ಲಿ ಸರ್ಕಾರ ವಿವಿಧ ಸಮಿತಿಗಳನ್ನು ರಚಿಸಿ ಅನುಷ್ಠಾನಗೊಳಿಸಿದೆ. ಈ ಮೂಲಕ ಅಧಿಕಾರಿಗಳು ತಳಮಟ್ಟದಿಂದ ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು. ಆಗ ಮಾತ್ರ ಇಂತಹ ದುಷ್ಕೃತ್ಯಗಳಿಗೆ ಸಂಪೂರ್ಣವಾಗಿ ಕಡಿವಾಣ ಹಾಕಲು ಸಾಧ್ಯವಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನನು ಸೇವೆಗಳ ಪ್ರಾಧಿಕಾರ ಸದಸ್ಯ ಮಹಾವೀರ ಮ. ಕರೆಣ್ಣವರ್ ಪ್ರತಿಜ್ಞಾವಿಧಿ ಭೋಧಿಸಿದರು. ವಕೀಲೆ ಅನಿತಾ.ಸಿ.ಪಿ ಮಹಿಳಾ ಮತ್ತು ಮಕ್ಕಳ ಅನೈತಿಕ ಕಳ್ಳಸಾಗಾಣೆ ಕುರಿತು ಉಪನ್ಯಾಸ ನೀಡಿದರು.

ಕಾರ್ಯಾಗಾರದಲ್ಲಿ ರಾಜ್ಯ ಮಾನವ ಕಳ್ಳಸಾಗಾಣಿಕೆ ಸಮಿತಿ ಸದಸ್ಯ ರಾಜೇಂದ್ರನ್.ಎ. ಜಿಲ್ಲಾ ನಿರೂಪಣಾಧಿಕಾರಿ ಗುರುಪ್ರಸಾದ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತಾ, ಜಿಲ್ಲಾ ಮಕ್ಕಳ ರಕ್ಷಣಾ ಘಟಕಾಧಿಕಾರಿ ಪ್ರಕಾಶ್, ಜಗಳೂರು ಮಹಿಳಾ ಠಾಣೆ ಇನ್ಸ್‌ಪೆಕ್ಟರ್ ಆಶಾ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಾದಕ ವಸ್ತು ಮಾರಾಟ ಕಂಡಲ್ಲಿ ಕಠಿಣ ಕ್ರಮಕ್ಕೆ ಸೂಚನೆ: ಶಾಸಕ ತಮ್ಮಯ್ಯ

**ಚಿಕ್ಕಮಗಳೂರು, ಆ.1:** ಜಿಲ್ಲೆಯಲ್ಲಿ ಮಾದಕ ವಸ್ತುಗಳ ವ್ಯಾಪಾರ–ವ್ಯವಹಾರ ಕಂಡು ಬಂದಲ್ಲಿ ಕಟ್ಟುನಿಟ್ಟಾದ ಕ್ರಮ ಕೈಗೊಳ್ಳುವಂತೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಲಾಗಿದೆ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಚಿಕ್ಕಮಗಳೂರು, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಬೆಂಗಳೂರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜ್ಞಾನ ಜ್ಯೋತಿ ಟಿ.ಎಂ.ಎಸ್. ವಿದ್ಯಾ ಸಂಸ್ಥೆ, ಚಿಕ್ಕಮಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಇಂದು ನಗರದ ಟಿ.ಎಂ.ಎಸ್. ರೋಟರಿ ಹಾಲ್‌ನಲ್ಲಿ ಡಾ.ಶ್ರೀ ಮ.ನಿ.ಪ್ರ. ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ವ್ಯಸನಮುಕ್ತ ದಿನಾಚರಣೆ ಹಾಗೂ ವಿಚಾರ ಸಂಕಿರಣದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಪಂಚಾಯಿತಿಯ ಕೆ.ಡಿ.ಪಿ. ಸಭೆಯಲ್ಲಿ ಈ ಬಗ್ಗೆ ಚರ್ಚೆಯಾಗಿದ್ದು, ಮಾದಕ ವಸ್ತು ಮಾರಾಟ ಮಾಡುವುದಕ್ಕೆ ಅವಕಾಶ ನೀಡಬಾರದು ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ತಾವು ಅಧಿಕಾರಿಗಳಿಗೆ ನಿರ್ದೇಶನ ನೀಡಿರುವುದಾಗಿ ತಿಳಿಸಿದ ಅವರು, ದೇಶದ ದಿಕ್ಕನ್ನೇ ಬದಲಿಸುವ ಶಕ್ತಿ ಇರುವ ಯುವಜನತೆ ವ್ಯಸನಗಳಿಗೆ ಬಲಿಯಾದರೆ, ಅವರ ಕುಟುಂಬ, ಸಮಾಜ ಅಷ್ಟೇ ಅಲ್ಲ, ಇಡೀ ದೇಶವೇ ದಿಕ್ಕು ತಪ್ಪುತ್ತದೆ ಎಂದು ಹೇಳಿದರು.

ಮಾದಕ ವ್ಯಸನಿಗಳಾದಲ್ಲಿ ಅವರ ವ್ಯಕ್ತಿಗತ ಜೀವನ ಮಾತ್ರವಲ್ಲ ಸಾಮಾಜಿಕ ಜೀವನದ ಮೇಲೂ ದುಷ್ಪರಿಣಾಮ

ಬೀರುತ್ತದೆ. ಈ ಚಟಕ್ಕೆ ಬಿದ್ದವರು ಅಪರಾಧ ಕೃತ್ಯಗಳಲ್ಲಿ ತೊಡಗಿ ಸಮಾಜಕ್ಕೆ ಮಾರಕವಾಗುತ್ತಾರೆ. ಈ ಹಿನ್ನೆಲೆಯಲ್ಲಿ ಸಂಸ್ಕಾರವಂತ ದೇಶದಲ್ಲಿ ಜನಿಸಿರುವ ನಾವು ಕ್ಷಣಿಕ ಸಂತೋಷ ಕೊಡುವ ಈ ಚಟದಿಂದ ದೂರ ಉಳಿಯಬೇಕು ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ಮಾತನಾಡಿ, ಎಲ್ಲರ ಬದುಕಿನಲ್ಲಿ ಯೋಗ್ಯತೆ ಇರುತ್ತದೆ. ಆದರೆ ಯೋಗ ಮಾತ್ರ ಕೂಡಿಬಂದಲ್ಲಿ ಮಾತ್ರ ಅವಕಾಶವನ್ನು ಪಡೆದುಕೊಳ್ಳಬಹುದು. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಚೆನ್ನಾಗಿ ಓದಲು, ಉತ್ತಮ ಉದ್ಯೋಗ ಮಾಡಲು ಎಲ್ಲಾ ಯೋಗ್ಯತೆಗಳನ್ನು ಹೊಂದಿದ್ದರೂ ಪ್ರಯತ್ನ ಮಾಡುವುದು ಅಗತ್ಯ. ಈ ದಿಸೆಯಲ್ಲಿ ನಮ್ಮ ಬದುಕಿಗೆ ಕೆಟ್ಟದ್ದರತ್ತ ಕಣ್ಣು ಹಾಯಿಸಲೂ ಬಾರದು. ಅದರಲ್ಲೂ ಮಾದಕ ವಸ್ತುಗಳ ವ್ಯಾಮೋಹಕ್ಕೆ ಒಳಗಾಗಬಾರದು. ಅಂಥವುಗಳನ್ನು ಕೆಟ್ಟದ್ದು ಎಂದು ಹೇಳುವ ಧೈರ್ಯವೂ ನಮ್ಮಲ್ಲಿ ಇರಬೇಕು. ಆ ಮೂಲಕ ಈ ಪೀಳಿಗೆಯನ್ನು ಉತ್ತಮ ಹಾದಿಗೆ ಒಯ್ಯುವಂತಾಗಬೇಕು ಎಂದು ಆಶಯ ವ್ಯಕ್ತಪಡಿಸಿದರು.



ಡಾ.ಮಹಾಂತ ಶಿವಯೋಗಿಗಳ ಜೀವನ ಚರಿತ್ರೆ ಕುರಿತು ಉಪನ್ಯಾಸ ನೀಡಿದ ನಿವೃತ್ತ ಉಪನ್ಯಾಸಕ ಬಿ.ತಿಪ್ಪೇರುದ್ರಪ್ಪ ಮಾತನಾಡಿ, ತ್ರಿವಿಧ ದಾಸೋಹಗಳಾದ ಜ್ಞಾನಕ್ಕೆ ಅನ್ನಕ್ಕೆ, ಅರಿವೆಗೆ ಒತ್ತುಕೊಟ್ಟು ಅನಾದಿ ಕಾಲದಿಂದಲೂ ಶ್ರಮಿಸುತ್ತಿರುವ ಅನೇಕ ವಿರಕ್ತ ಮಠಗಳು ಕರ್ನಾಟಕದಾದ್ಯಂತ ಇವೆ. ಅದೇ ಸಾಲಿನಲ್ಲಿ ಚಿತ್ತರಗಿಯ ಮಹಾಂತ ಶಿವಯೋಗಿಗಳ ಮಠವೂ ಒಂದು. ಬಸವಾದಿ ಶರಣರ ಆಶಯಗಳನ್ನು ಪಾಲಿಸುವ ನಿಟ್ಟಿನಲ್ಲಿ ಸಂಕಲ್ಪ ಮತ್ತು ದೀಕ್ಷೆಯನ್ನು ಹೊತ್ತುಕೊಂಡು ಕಾರ್ಯೋನ್ಮುಖರಾಗಿರುವ ನಿಟ್ಟಿನಲ್ಲಿ ನಾವು ಮಹಾಂತ ಶಿವಯೋಗಿಗಳ ಜನ್ಮದಿನವನ್ನು ಆಚರಿಸುತ್ತಿದ್ದೇವೆ ಎಂದರು.

ಡಾ.ಮಹಾಂತ ಶಿವಯೋಗಿಗಳು ತಮ್ಮ ಸಮಾಜಮುಖಿ ಕಾರ್ಯಗಳಿಂದ ಮಹಾತ್ಮರಾದವರು. ವ್ಯಸನಮುಕ್ತ ವ್ಯಕ್ತಿ, ಸಮಾಜ, ಕುಟುಂಬ ಹಾಗೂ ವ್ಯಸನಮುಕ್ತ ದೇಶವನ್ನು ಕಟ್ಟುವ ಕಾಯಕದಲ್ಲಿ ಅವರು ಮುಂಚೂಣಿಯಲ್ಲಿದ್ದರು. ಅವರ ಜಯಂತಿಯನ್ನು ಆಚರಣೆ ಮಾಡಲು ಸರ್ಕಾರವೇ ಆದೇಶ ನೀಡಿರುವುದು ಇದೇ ಕಾರಣಕ್ಕೆ. ಅವರು ತಮ್ಮ ಕಿರಿಯ ವಯಸ್ಸಿನಲ್ಲೇ ಆ ಮಠಕ್ಕೆ ಕಿರಿಯ ಸ್ವಾಮೀಜಿಯಾಗಿ ಪಟ್ಟಾಭಿಷಿಕ್ತರಾಗುತ್ತಾರೆ. ಕಾಶಿಯಲ್ಲಿ ಸಕಲ ವಿದ್ಯಾ ಪಾರಂಗತರಾಗಿದ್ದರು. ಉತ್ತರ ಕರ್ನಾಟಕದಲ್ಲಿ ಬರಗಾಲ ಬಂದಾಗ ಗೋಶಾಲೆಗಳು, ಗಂಜಿ ಕೇಂದ್ರಗಳು, ಮೇವಿನ ಕೇಂದ್ರಗಳನ್ನು ತೆರೆಯುವ ಮೂಲಕ ಸಮಾಜಮುಖಿಯಾಗಿ ಕಾರ್ಯ ನಿರ್ವಹಿಸಿದ್ದರು. ಅವರು ಧರ್ಮ, ಜಾತಿ, ಭಾಷೆ, ಪಂಥ, ದೇಶ ಎಲ್ಲವನ್ನೂ ಮೀರಿದ ಶಿವಯೋಗಿಗಳು ಎಂದು ಬಣ್ಣಿಸಿದರು.

ಮದ್ಯಪಾನ ಮತ್ತು ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಉಪನ್ಯಾಸ ನೀಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮಾನಸಿಕ ಆರೋಗ್ಯ ತಜ್ಞ ಡಾ.ವಿನಯ್, ಯುವಜನತೆ ಮೊದಲಿಗೆ ಆಸೆ, ಕುತೂಹಲ ಹಾಗೂ ಒತ್ತಡಗಳಿಗೆ ಬಿದ್ದು ಮಾದಕ ವಸ್ತುಗಳ ಮೋಹಕ್ಕೆ ಒಳಗಾಗಿ ಮುಂದೆ ಅದು ಖುಷಿಗೂ, ಬೇಸರಕ್ಕೂ ಬಳಸುವ ಮೂಲಕ ವ್ಯಸನಿಗಳಾಗುತ್ತಾರೆ. ಕ್ಷಣಿಕವಾಗಿ ಮಿದುಳನ್ನು ಉದ್ದೀಪನಗೊಳಿಸುವ ಈ ಚಟಗಳಿಗೆ ದಾಸರಾದರೆ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಿ ಇಡೀ ಜೀವನವನ್ನು ಹಾಳು ಮಾಡಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮದ್ಯ, ತಂಬಾಕು ವಸ್ತುಗಳು, ಗಾಂಜಾ, ಕೊಕೇನ್, ಹೆರಾಯಿನ್ ಇವು ಮಾದಕ ವಸ್ತುಗಳಾಗಿದ್ದು, ಮಿದುಳು ಚುರುಕಾಗುತ್ತದೆ ಎನ್ನುವ ಕಾರಣಕ್ಕೆ ಯುವಜನರು ಬೇಗ ಅವುಗಳ ದಾಸರಾಗಿಬಿಡುತ್ತಾರೆ. ಉದ್ದೀಪನಗೊಳಿಸುವ ಈ ಚಟಗಳಿಗೆ ದಾಸರಾದರೆ ಮತ್ತೆ ಅವುಗಳಿಂದ ಹೊರ ಬರುವುದು ಕಷ್ಟ. ಚಟಕ್ಕೆ ಒಳಗಾದವರು ಆರೋಗ್ಯ ಇಲಾಖೆಯ ಸಹಾಯವಾಣಿ ಮೂಲಕ ನೆರವು ಪಡೆಯಬಹುದು. ಅಂಥವರು ಒಮ್ಮೆ ಆಸ್ಪತ್ರೆಗೆ ಭೇಟಿ ನೀಡಿ ಈ ಸಂಬಂಧಿತ ರೋಗಿಗಳ ಸ್ಥಿತಿಯನ್ನು ಅವಲೋಕಿಸಬೇಕು ಎಂದು ತಿಳಿಸಿದರು.

ಟೌನ್ ಮಹಿಳಾ ಸಮಾಜದ ಅಧ್ಯಕ್ಷೆ ನೇತ್ರಾ ವೆಂಕಟೇಶ್ ಮಾತನಾಡಿ, ಶಿಕ್ಷಣ ಸಂಸ್ಥೆಯಲ್ಲಿ ಶಿಕ್ಷಣ ಮಾತ್ರವಲ್ಲ, ಸಂಸ್ಕಾರವನ್ನು ಬೆಳೆಸಿಕೊಳ್ಳುವುದು ಅಗತ್ಯ. ಅದರಿಂದ ಮಾತ್ರ ದೇಶಕ್ಕೆ ವಿದ್ಯಾರ್ಥಿಗಳು ಕೊಡುಗೆ ನೀಡಲು ಸಾಧ್ಯ ಎಂದರು.

ಟೌನ್ ಮಹಿಳಾ ಸಮಾಜದ ಕಾರ್ಯದರ್ಶಿ ಶುಭದಾ, ಜಿಲ್ಲಾ ಕೇಂದ್ರ ಗ್ರಂಥಾಲಯಾಧಿಕಾರಿ ಉಮೇಶ್, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜೆ.ಮಂಜೇಗೌಡ ಉಪಸ್ಥಿತರಿದ್ದರು. ಜ್ಞಾನಜ್ಯೋತಿ ಟಿ.ಎಂ.ಎಸ್.ಪದವಿ ಕಾಲೇಜಿನ ಪ್ರಾಂಶುಪಾಲ ಇಂದ್ರೇಶ್ ಸ್ವಾಗತಿಸಿದರು. ಜಿಲ್ಲಾ ಕೇಂದ್ರ ಗ್ರಂಥಾಲಯದ ಸಹಾಯಕ ಗ್ರಂಥಪಾಲಕ ಹೆಚ್.ಬಿ.ಮಹೇಶಪ್ಪ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಇದೇ ಸಂದರ್ಭದಲ್ಲಿ ಅಂಬಳೆಯ ರೇಣುಕಾಮಾತೆ ತೊಗಲುಗೊಂಬೆ ಕಲಾ ಸಂಘದ ವತಿಯಿಂದ ಮಾದಕ ವಸ್ತುಗಳ ದುಷ್ಪರಿಣಾಮದ ಕುರಿತು ತೊಗಲು–ಗೊಂಬೆಯಾಟ ಪ್ರದರ್ಶಿಸಲಾಯಿತು.

# ಸಪ್ತ ಧಾನ್ಯ ಕಷಾಯ ಬೆಳೆ ವರ್ಧಕ

**ಚಿಕ್ಕಮಗಳೂರು:** ಸಪ್ತ ಧಾನ್ಯ ಕಷಾಯವು ಬೆಳೆಯ ಗುಣಮಟ್ಟವನ್ನು ಹೆಚ್ಚಿಸುವ ಸರಳ, ಸಾವಯವ ವಿಧಾನವಾಗಿದೆ ಎಂದು ತಿಳಿಸಿರುವ ಜಂಟಿ ಕೃಷಿ ನಿರ್ದೇಶಕಿ ಹೆಚ್.ಎಸ್.ಸುಜಾತ ಅವುಗಳನ್ನು ತಯಾರಿಸುವ ಬಗೆಯನ್ನು ವಿವರಿಸಿದ್ದಾರೆ.

ಎರಡು ಲೀಟರ್ ಸಾಮರ್ಥ್ಯದ ಎರಡು ಪಾತ್ರೆಗಳು, ದೇಶಿ ಆಕಳ ಗೋಮೂತ್ರ 5 ಲೀಟರ್, ಎಳ್ಳು, ಗೋಧಿ ಕಾಳು, ಹೆಸರು, ಉದ್ದು, ಅಲಸಂದಿ, ಮಡಿಕೆ, ಅವರೆ ಕಾಳು, ಕಡಲೆಕಾಳು ತಲಾ 100 ಗ್ರಾಂ ಈ ಕಷಾಯ ತಯಾರಿಗೆ ಅಗತ್ಯವಾಗಿದೆ.

ತಯಾರಿಕೆ ವಿಧಾನ: ಒಂದು ಪಾತ್ರೆಯಲ್ಲಿ 100 ಗ್ರಾಂ ಎಳ್ಳನ್ನು ತೆಗೆದುಕೊಂಡು ತೋಯುವಷ್ಟು ನೀರು ಹಾಕಿ ರಾತ್ರಿಯಿಡೀ ನೆನೆಸಿಡಬೇಕು. ಮರುದಿನ ಬೆಳಿಗ್ಗೆ ಇನ್ನೊಂದು ದೊಡ್ಡ ಪಾತ್ರೆಯಲ್ಲಿ ತಲಾ 100 ಗ್ರಾಂ ಹೆಸರು, ಉದ್ದು, ಅಲಸಂದಿ, ಮಡಿಕೆ, ಅವರೆ ಕಾಳು, ಕಡಲೆಕಾಳು ಮತ್ತು ಗೋದಿ ಕಾಳುಗಳನ್ನು ಬೆರೆಸಿ, 6 ಇಂಚು ಎತ್ತರದವರೆಗೆ ನೀರು ಹಾಕಿ ಮೊಳಕೆ ಬರುವಂತೆ ಇಡಬೇಕು. ಮೊಳಕೆ ಬಂದ ನಂತರ, ಎರಡೂ ಪಾತ್ರೆಗಳ ಕಾಳುಗಳನ್ನು ಒಟ್ಟಿಗೆ ಸೇರಿಸಿ ಚಟ್ನಿಯಂತೆ ರುಬ್ಬಬೇಕು.ಈ ಚಟ್ನಿಯನ್ನು 200 ಲೀಟರ್ ನೀರಿಗೆ ಬೆರೆಸಿ, 5 ಲೀಟರ್ ದೇಶಿ ಆಕಳ ಗೋಮೂತ್ರ ಮತ್ತು ಮೊಳಕೆಗಾಗಿ ನೆನೆಸಿದ ನೀರನ್ನು ಸೇರಿಸಬೇಕು. ಈ ಮಿಶ್ರಣವನ್ನು ತಂಪಾದ ಸ್ಥಳದಲ್ಲಿ 24 ಗಂಟೆಗಳ ಕಾಲ ಇರಿಸಬೇಕು. ದಿನಕ್ಕೆ ಮೂರು ಬಾರಿ ಪ್ರದಕ್ಷಿಣಾಕಾರವಾಗಿ ಕಲಕಬೇಕು. 24 ಗಂಟೆಗಳ ನಂತರ, ಮಿಶ್ರಣವನ್ನು ಬಟ್ಟೆಯಿಂದ ಸೋಸಿ, ಬೆಳೆ ಕಟಾವಿಗೆ 15–21 ದಿನಗಳ ಮೊದಲು ಬೆಳೆಗಳಿಗೆ ಸಿಂಪಡಿಸಬೇಕು.ಕಾಳುಗಳು ಜೊಳ್ಳಾಗುವುದಿಲ್ಲ. ಕಾಳಿನ ತೂಕ ಹೆಚ್ಚಾಗುತ್ತದೆ. ಕಾಳುಗಳಿಗೆ ಹೊಳಪು ಬರುತ್ತದೆ ಎಂದು ಅವರು ಮಾಹಿತಿ ನೀಡಿದ್ದಾರೆ.

# ಪಡಿತರ ಚೀಟಿದಾರರಿಗೆ ಅಕ್ಕಿ ವಿತರಣೆ

**ಚಿಕ್ಕಮಗಳೂರು:** ಸಾರ್ವಜನಿಕ ವಿತರಣಾ ಪದ್ಧತಿಯಡಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿದಾರರಿಗೆ 2025ರ ಆಗಸ್ಟ್ ಮಾಹೆಗೆ ಈ ಕೆಳಗಿನಂತೆ ಅಕ್ಕಿ ವಿತರಿಸಲಾಗುತ್ತಿದೆ.ಅಂತ್ಯೋದಯ (ಎಎವೈ) ಪ್ರತೀ ಪಡಿತರ ಚೀಟಿಗೆ ಚಿಕ್ಕಮಗಳೂರು, ಕಡೂರು, ತರೀಕೆರೆ ಹಾಗೂ ಅಜ್ಜಂಪುರ ತಾಲ್ಲೂಕಿನವರಿಗೆ ಎನ್‌ಎಫ್‌ಎಸ್‌ಎ ಯೋಜನೆಯಲ್ಲಿ ಕೇಂದ್ರದ 14 ಕೆ.ಜಿ. ಅಕ್ಕಿ, 21 ಕೆ.ಜಿ. ರಾಗಿ, ಮೂಡಿಗೆರೆ, ಕೊಪ್ಪ, ಶೃಂಗೇರಿ, ಎನ್.ಆರ್.ಪುರ ತಾಲ್ಲೂಕಿನವರಿಗೆ ಕೇಂದ್ರದ 35 ಕೆ.ಜಿ. ಅಕ್ಕಿ, ಈ ಎಲ್ಲಾ ತಾಲ್ಲೂಕುಗಳಿಗೆ ಅನ್ನಭಾಗ್ಯ ಯೋಜನೆಯಡಿ 4 ಮತ್ತು 4ಕ್ಕಿಂತ ಹೆಚ್ಚು ಸದಸ್ಯರಿರುವ ಪಡಿತರ ಚೀಟಿಯ ಪ್ರತೀ ಸದಸ್ಯರಿಗೆ 5 ಕೆ.ಜಿ. ಅಕ್ಕಿ ವಿತರಿಸಲಾಗುವುದು. ಚಿಕ್ಕಮಗಳೂರು, ಕಡೂರು, ತರೀಕೆರೆ ಹಾಗೂ ಅಜ್ಜಂಪುರ ತಾಲ್ಲೂಕಿನವರಿಗೆ ಆದ್ಯತಾ (ಬಿಪಿಎಲ್) ಪಡಿತರ ಚೀಟಿಗೆ ಒಬ್ಬರು ಸದಸ್ಯರಿಗೆ ಎನ್‌ಎಫ್‌ಎಸ್‌ಎ ಯೋಜನೆಯಡಿ ಕೇಂದ್ರದಿಂದ 2 ಕೆ.ಜಿ. ಅಕ್ಕಿ, 3 ಕೆ.ಜಿ. ರಾಗಿ, ರಾಜ್ಯದಿಂದ 5 ಕೆ.ಜಿ. ಅಕ್ಕಿ, ಅನ್ನಭಾಗ್ಯ ಯೋಜನೆಯಡಿ ಕೇಂದ್ರ ಹಾಗೂ ರಾಜ್ಯದ ತಲಾ 5 ಕೆ.ಜಿ. ಅಕ್ಕಿ, ಮೂಡಿಗೆರೆ, ಕೊಪ್ಪ, ಶೃಂಗೇರಿ, ಎನ್.ಆರ್.ಪುರ ತಾಲ್ಲೂಕಿನವರಿಗೆ ಕೇಂದ್ರ ಹಾಗೂ ರಾಜ್ಯದಿಂದ 5 ಕೆ.ಜಿ. ಅಕ್ಕಿ, ಅನ್ನಭಾಗ್ಯ ಯೋಜನೆಯಡಿ 5 ಕೆ.ಜಿ. ಅಕ್ಕಿ ವಿತರಿಸಲಾಗುವುದು ಎಂದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಸು, ಕುರಿ, ಕೋಳಿ ಸಾಕಣೆ ತರಬೇತಿ

**ಚಿಕ್ಕಮಗಳೂರು:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಹಸು, ಕುರಿ ಮತ್ತು ಕೋಳಿ ಸಾಕಾಣಿಕೆ ಕುರಿತ 13 ದಿನಗಳ ಉಚಿತ ತರಬೇತಿಯು ಸೆಪ್ಟೆಂಬರ್ 8 ರಿಂದ ಆರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ ಯುವತಿಯರು ಅರ್ಜಿ ಸಲ್ಲಿಸಬಹುದು.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್‌ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಆಗಸ್ಟ್ 30 ಕೊನೆಯ ದಿನವಾಗಿದೆ. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585, 9241482541, 9113880324 ಅನ್ನು ಸಂಪರ್ಕಿಸಬಹುದು ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ನೈಸರ್ಗಿಕ ಸಂಪತ್ತು ಹಿತಮಿತವಾಗಿ ಬಳಸಿ : ಸಚಿವ ಈಶ್ವರ ಬಿ.ಖಂಡ್ರೆ



**ಹಾಸನ :** ನೈಸರ್ಗಿಕ ಸಂಪತ್ತನ್ನುಅತೀಯಾಗಿ ಬಳಕೆ ಮಾಡುತ್ತಿದ್ದು, ಪ್ರಕೃತಿ ನಾಶಕ್ಕೂ ಕೂಡಾಕಾರಣವಾಗುತ್ತಿದೆ ಹಾಗಾಗಿ ಹಿತಮಿತವಾಗಿ ಬಳಕೆ ಮಾಡುವುದರಜೊತೆಗೆಸಂರಕ್ಷಣೆಗೆಹೆಚ್ಚಿನಒತ್ತು ನೀಡಬೇಕುಎಂದುಅರಣ್ಯ,ಜೀವ ಶಾಸ್ತ್ರ ಹಾಗೂ ಪರಿಸರ ಸಚಿವರಾದಈಶ್ವರ ಬಿ.ಖಂಡ್ರೆಅವರುತಿಳಿಸಿದ್ದಾರೆ.

ಚನ್ನರಾಯಪಟ್ಟಣತಾಲ್ಲೂಕಿನ ಬೆಲಸಿಂದ ಪ್ರಕೃತಿ ವನದಲ್ಲಿನವೀಕರಣಗೊಂಡಿರುವಉದ್ಯಾನವನ ಉದ್ಘಾಟಿಸಿ ಮಾತನಾಡಿದಅವರುಪರಿಸರವನ್ನು ಸಂರಕ್ಷಣೆ ಮಾಡುವುದು ಪ್ರತಿಯೊಬ್ಬರಜವಾಬ್ದಾರಿ, ಆರೋಗ್ಯಕರವಾದ ವಾತವರಣವನ್ನುಮುಂದಿನ ಪೀಳಿಗೆಗೆ ಯೋಗ್ಯರೀತಿಯಲ್ಲಿ ಹಸ್ತಾಂತರ ಮಾಡಬೇಕುಎಂದು ತಿಳಿಸಿದರು.

ಒಟ್ಟು ಭೂಭಾಗದಲ್ಲಿ ಶೇ.33 ರಷ್ಟುಅರಣ್ಯ ಪ್ರದೇಶಇರಬೇಕುಆದರೆಹಾಲಿಇರುವ ಶೇ.21 ರಷ್ಟುಅರಣ್ಯ ಪ್ರದೇಶವನ್ನುಉತ್ತಮರೀತಿಯಲ್ಲಿ ನಿರ್ವಹಣೆ ಮಾಡುವ ಮೂಲಕ ಮುಂದಿನ ಪೀಳಿಗೆಗೆ ಉಳಿಸಬೇಕು ಎಂದರಲ್ಲದೆ, ಮನುಷ್ಯರಿಗೆಪ್ರಾಣವಾಯು ನೀಡುವಮರಗಿಡಗಳನ್ನು ನೆಟ್ಟು ಪಾಲನೆ ಪೋಷಣೆ ಮಾಡುವುದುಎಲ್ಲರ ಹೊಣೆಗಾರಿಕೆಯಾಗಿದೆಎಂದರು.

ಪ್ರಕೃತಿ ವನದಲ್ಲಿರುವ ವಿವಿಧ ಪ್ರಭೇಧಗಳ ಮರಗಳ ಹೆಸರುಗಳು ಮಕ್ಕಳಿಗೆ ಪರಿಚಯವಾಗು ವರೀತಿಯಲ್ಲಿನಾಮಫಲಕಗಳನ್ನು ಅಳವಡಿಸಿ ಎಂದ ಸಚಿವರುಕನಿಷ್ಠ ಹತ್ತು ಮರಗಳ ಹೆಸರುಗಳನ್ನು ಮಗು ಹೇಳುವ ರೀತಿಯಾದರು ಆಗಬೇಕು. ಸ್ಥಳೀಯ ಪ್ರಭೇಧಗಳ ಸಸಿಗಳ ನರ್ಸರಿಅಭಿವೃದ್ಧಿ ಪಡಿಸುವಂತೆ ತಿಳಿಸಿದರು.

ರಾಜ್ಯದಲ್ಲಿಎಲ್ಲಾ ತಾಲ್ಲೂಕುಗಳಲ್ಲಿ ಉದ್ಯಾನವನಇರಬೇಕು ಎಂಬ ಯೋಜನೆಯಂತೆ, ಉದ್ಯಾನ ನಿರ್ಮಿಸಲಾಗಿದೆ. ಎಲ್ಲಿಲ್ಲಿ ಇಲ್ಲವೋ ಅಂಥ ಕಡೆ ಉದ್ಯಾನ ನಿರ್ಮಿಸಲಾಗುವುದು. ಸ್ವಚ್ಛಪರಿಸರಕ್ಕೆ ಸಸ್ಯಸಂಪತ್ತುಅತ್ಯವಶ್ಯಕಎಂದು ಹೇಳಿದರು.

ಮಾನವ ಮತ್ತು ಪ್ರಾಣಿ ಸಂಘರ್ಷ ಪುರಾತನವಾದುದು, ಇದಕ್ಕೆಜನರಲ್ಲಿಜಾಗೃತಿ ಮೂಡಿಸಬೇಕಾಗಿದೆಎಂದಅವರುಅರಣ್ಯಇಲಾಖೆಯಅಧಿಕಾರಿ ಸಿಬ್ಬಂದಿಗಳು ಜೀವನದ ಹಂಗು ತೊರೆದು ಕೆಲಸ ಮಾಡುತ್ತಿದ್ದಾರೆ. ಜೀವ ಮತ್ತುಜೀವನೋಪಾಯಅತಿಮುಖ್ಯ. ಈ ನಿಟ್ಟಿನಲ್ಲಿಸಾಮಾಜಿಕ ಜಾಲತಾಣಗಳ ಮೂಲಕ ಅರಿವು ಮೂಡಿಸಲುಕ್ರಮವಹಿಸಬೇಕಿದೆಎಂದರು.

ಜಿಲ್ಲೆಯಲ್ಲಿಆನೆಕಾರಿಡಾರ್ ಪ್ರಾರಂಭಿಸಲು 53 ಕೋಟಿಮಂಜೂರಾತಿಗೆರಾಜ್ಯಸಚಿವಸಚಿವಸಂಪುಟ ಒಪ್ಪಿಗೆನೀಡಿದೆ. ಇಲಾಖೆಯಿಂದಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು. ಕೇಂದ್ರಒಪ್ಪಿದ ನಂತರ ಆರಂಭಿಸಲಾಗುವುದುಎಂದರು.

ರಾಜ್ಯದಲ್ಲಿ 6500 ಆನೆಗಳಿದ್ದು,ದೇಶದಲ್ಲಿಯೇ ಮೊದಲಸ್ಥಾನದಲ್ಲಿದೆ. 565 ಹುಲಿಗಳಿದ್ದು ಎರಡನೇ ಸ್ಥಾನದಲ್ಲಿದೆ.ವನ್ಯಜೀವಿಗಳ ಸಂರಕ್ಷಣೆ ಮಾಡುವ ಹೊಣೆಎಲ್ಲರ ಮೇಲಿದೆಎಂದಅವರು ಸಹಬಾಳ್ವೆ ಅತ್ಯಗತ್ಯಎಂದುತಿಳಿಸಿದರು.

ಆಧುನಿಕಯುಗದಲ್ಲಿಯುವಜನತೆಯಲ್ಲಿ ಪಾಶ್ಚಿಮಾತ್ಯ ಅನುಕರಣೆ ಹೆಚ್ಚಾಗಿದ್ದು, ಒತ್ತಡಗಳಲ್ಲಿ ಸಿಲುಕಿದ್ದಾರೆ. ಅಧ್ಯಯನದ ಪ್ರಕಾರ ಶೇ.30 ರಷ್ಟು ಸಮಯವನ್ನು ಮೊಬೈಲ್‌ಫೋನ್‌ನಲ್ಲೆ ಕಳೆಯುತ್ತಾ ಮಾನಸಿಕವಾಗಿ ದುರ್ಬಲರಾಗಿದ್ದಾರೆ, ಐಷಾರಾಮಿಜೀವನದಲ್ಲಿತೊಡಗಿಕೊಂಡುಆರೋಗ್ಯವನ್ನು ಹಾಳುಮಾಡಿಕೊಳ್ಳುತ್ತಿದ್ದಾರೆ ಹಾಗಾಗಿ ಒತ್ತಡಗಳನ್ನು ಕಡಿಮೆ ಮಾಡಲುಇಂತಹ ಪ್ರಕೃತಿ ವನಗಳ ಅಗತ್ಯವಿದೆಎಂದರು.

ಯುವಜನತೆ ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ ಇವರುಗಳು ಪ್ರಕೃತಿ ವನಗಳಲ್ಲಿ ಪ್ರತಿನಿತ್ಯ ವಾಯುವಿಹಾರ, ಸೈಕ್ಲಿಂಗ್ ಮತ್ತಿತರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡುಮನಃ ಪರಿವರ್ತನೆಯಾಗಬೇಕಿದೆಎಂದು ತಿಳಿಸಿದರು.

ಬೆಲಸಿಂದ ಪ್ರಕೃತಿ ವನವು ರಾಷ್ಟ್ರೀಯ ಹೆದ್ದಾರಿ 75ಕ್ಕೆ ಹೊಂದಿಕೊಂಡಿದ್ದುಚನ್ನರಾಯಪಟ್ಟಣ ಪಟ್ಟಣದಿಂದ ಕೇವಲ 2 ಕಿ.ಮೀ ಮತ್ತುಜಿಲ್ಲಾಕೇಂದ್ರ ಹಾಸನದಿಂದ 36 ಕಿ.ಮೀ ದೂರದಲ್ಲಿದ್ದು ವಿಶಾಲವಾದ ಪಾರಗೋಲ, ನೇಚರ್ ವಾಕ್ ವ್ಯವಸ್ಥೆ,ಅರಣ್ಯ ಪ್ರದೇಶದಲ್ಲಿ ಬಾಡಿಗೆ ಸೈಕ್ಲಿಂಗ್ ವ್ಯವಸ್ಥೆ, ಕೆರೆಯಲ್ಲಿದೋಣಿ ವಿಹಾರ ವ್ಯವಸ್ಥೆ,ಪಕ್ಷಿಗಳ ವೀಕ್ಷಣಾ ವ್ಯವಸ್ಥೆ, ಗ್ರೀನ್ ಲೈಬ್ರರಿ ವ್ಯವಸ್ಥೆ, ಮಕ್ಕಳಿಗೆ ಆಟವಾಡಲು ಸುಸಜ್ಜಿತ ಆಟ ಸಾಮಾನುಗಳ ವ್ಯವಸ್ಥೆ,ಅರಣ್ಯವನ್ನು ವೀಕ್ಷಣೆ ಮಾಡಲು 2 ವಾಚ್‌ಟವರ್ ವ್ಯವಸ್ಥೆ, ಶಾಲಾ ಕಾಲೇಜುಗಳ ಮಕ್ಕಳಿಗೆ ಕಾರ್ಯಕ್ರಮಆಯೋಜನೆ ಮತ್ತು ಶಿಬಿರಗಳನ್ನು ನಡೆಸಲು ಬಯಲುರಂಗಮಂದಿರವನ್ನು ಹೊಂದಿದೆಎಂದರು.

ಇದೇ ವೇಳೆಜಿಲ್ಲಾ ಆನೆ ಕಾರ್ಯಪಡೆಯ ಸಮಗ್ರತಂತ್ರಜ್ಞಾನಆಧಾರಿತಥರ್ಮಲ್‌ಡ್ರೋನ್‌ಸ್ಕ್ವಾಡ್‌ಅನ್ನು ಉದ್ಘಾಟಿಸಿದರು. ಈ ಥರ್ಮಲ್‌ಡ್ರೋನ್‌ಸ್ಕ್ವಾಡ್‌ಅನ್ನುಕಾಡಾನೆ ಮಾನವ ಸಂಘರ್ಷಇರುವ ಪ್ರದೇಶಗಳಲ್ಲಿ ಮುಂಜಾನೆ ಮತ್ತುರಾತ್ರಿ ವೇಳೆಯಲ್ಲಿ ಕಾಡಾನೆಗಳ ಚಲನವಲನಗಳನ್ನು ಪರಿಣಾಮಕಾರಿಯಾಗಿ ಗಮನಿಸಿ ತುರ್ತಾಗಿ ಸಾರ್ವಜನಿಕರಿಗೆ ಹಾಗೂ ಇಲಾಖಾ ಸಿಬ್ಬಂದಿಗಳಿಗೆ ಮಾಹಿತಿ ನೀಡಲುಉಪಯೋಗಿಸಲಾಗುತ್ತದೆ. ಡ್ರೋನ್‌ಸ್ಕ್ವಾಡ್‌ವಾಹನವು ಥರ್ಮಲ್‌ಡ್ರೋನ್‌ನೊಂದಿಗೆಕಂಪ್ಯೂಟರ್ ಸಿಸ್ಟಮ್‌ಅನ್ನು ಒಳಗೊಂಡಿದ್ದು ಕಾಡಾನೆಗಳ ಚಲನವಲನಗಳನ್ನು ವಾಹನದಲ್ಲಿಯೇ ಗಮನಿಸಿಕೊಂಡು ಮಾಹಿತಿಯನ್ನು ನೀಡಬಹುದಾಗಿರುತ್ತದೆ.

ಶಾಸಕರಾದಸಿ.ಎನ್‌ಬಾಲಕೃಷ್ಣಅವರುಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿಪಟ್ಟಣದಹೊರವಲಯದಲ್ಲಿರುವ ಬೆಲಸಿಂದ ವನ 285 ಎಕರೆ ಪ್ರದೇಶದಲ್ಲಿದೆ. ಇದರಲ್ಲಿ 50 ಎಕರೆ ಪ್ರದೇಶದಲ್ಲಿ ಸಾಕಷ್ಟುಅಭಿವೃದ್ಧಿ ಕೈಗೊಳ್ಳಲಾಗಿದೆ. ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಂತ್ತಿರುವ ಬೆಲಸಿಂದವನದಲ್ಲಿ ಅರಣ್ಯಇಲಾಖೆಯಿಂದ ಪ್ರವಾಸಿ ಮಂದಿರ ನಿರ್ಮಿಸಬೇಕು. ಹೊರಗುತ್ತಿಗೆಯಆಧಾರದ ಮೇಲೆ ಅರಣ್ಯರಕ್ಷಕರನ್ನು ನೇಮಿಸಬೇಕು ಎಂದು ಸಚಿವರಿಗೆ ಮನವಿಮಾಡಿದರು.ಸದರಿ ಪ್ರಕೃತಿವನವನ್ನುಅರಣ್ಯ ಇಲಾಖೆ ಮತ್ತು ಪ್ರವಾಸೋದ್ಯಮ ಇಲಾಖಾ ವತಿಯಿಂದಅಭಿವೃದ್ಧಿ ಪಡಿಸಲಾಗಿದೆಎಂದು ತಿಳಿಸಿದರು.ಪುರಸಭಾಅಧ್ಯಕ್ಷರಾದ ಮೋಹನ್,ಅರಣ್ಯ ಸಂರಕ್ಷಣಾಧಿಕಾರಿಗಳಾದ ಏಡುಕೊಂಡಲು, ಜಿಲ್ಲಾಧಿಕಾರಿಗಳಾದ ಲತಾಕುಮಾರಿ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಸೌರಭ್‌ಕುಮಾರ್, ಸಾಮಾಜಿಕಅರಣ್ಯದ ಉಪ ಅರಣ್ಯ ಸಂರಕ್ಷಣಾಧಿಕಾರಿ ಸಹನ್‌ಕುಮಾರ್, ನಿವೃತ್ತ ವಲಯಅರಣ್ಯಾಧಿಕಾರಿಧರ್ಮಪ್ಪ, ಪರಿಸರ ಪ್ರೇಮಿಗಳಾದ ಚ.ನಾ.ಆಶೋಕ್ ಹಾಗೂ ಮತ್ತಿತರರು ಹಾಜರಿದ್ದರು.

# 89ನೇ ವರ್ಷದ ಅಜಾದ್ ಪಾರ್ಕ್ ಗಣಪತಿ ಪೆಂಡಾಲ್‌ಗೆ ಭೂಮಿಪೂಜೆ



**ಚಿಕ್ಕಮಗಳೂರು:** ಪ್ರತೀ ವರ್ಷದಂತೆ ಈ ವರ್ಷವೂಗಣೇಶೋತ್ಸವ ನಡೆಸಲು ಪೆಂಡಾಲ್ ನಿರ್ಮಾಣಕ್ಕೆ ಚಾಲನೆ ನೀಡಲಾಗಿದ್ದು, ಸರ್ವರಿಗೂ ವಿಘ್ನವಿನಾಯಕ ಒಳಿತನ್ನು ಮಾಡಲಿ ಎಂದು ನಗರಸಭಾಧ್ಯಕ್ಷೆ ಶೀಲಾ ದಿನೇಶ್ ಶುಭ ಹಾರೈಸಿದರು.

ಅವರುಇಂದು ನಗರದ ಬೋಳರಾಮೇಶ್ವರ ದೇವಸ್ಥಾನದ ಆವರಣದಲ್ಲಿ ಅಜಾದ್ ಪಾರ್ಕ್‌ಗಣಪತಿ ಪೆಂಡಾಲ್‌ಗೆ 89ನೇ ವರ್ಷದಗಣೇಶೋತ್ಸವಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಭಾಗವಹಿಸಿದ್ದ ಮಂಗಳ ತಮ್ಮಯ್ಯ ಮಾತನಾಡಿ, ಈ ವರ್ಷದಗಣೇಶಚತುರ್ಥಿ ನಗರದಎಲ್ಲಾ ನಾಗರೀಕರಿಗೆ ಹಾಗೂ ನಾಡಿನಜನತೆಗೆ ಸುಖ, ಶಾಂತಿ, ನೆಮ್ಮದಿ ಕರುಣಿಸಲಿ ಎಂದು ಪ್ರಾರ್ಥಿಸಿದರು.

ಪಲ್ಲವಿ ಸಿ.ಟಿ. ರವಿ ಮಾತನಾಡಿ, ವಿಘ್ನವಿನಾಯಕ ಸರ್ವರಿಗೂ ಸನ್ಮಂಗಳವನ್ನುಂಟುಮಾಡಲಿ ಎಂದುಕೋರಿದರು.

ಗಣಪತಿ ಸೇವಾ ಸಮಿತಿ ಕಾರ್ಯದರ್ಶಿ ಕೇಶವಮೂರ್ತಿ ಮಾತನಾಡಿ, ಆ.27 ರಿಂದ 21 ದಿನಗಳ ಕಾಲ ಶ್ರೀಯವರನ್ನು ಪ್ರತಿಷ್ಠಾಪನೆ ಮಾಡಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಾದ ಹರಿಕಥೆ, ಭಜನೆ, ಆರ್ಕೆಸ್ಟ್ರಾ, ಸುಗಮ ಸಂಗೀತ, ಮ್ಯಾಜಿಕ್ ಶೋ ಇತ್ಯಾದಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆಎಂದರು.

ಗಣೇಶೋತ್ಸವದ ಅಂಗವಾಗಿ ಗಣಹೋಮ, ಸಾರ್ವಜನಿಕ ಅನ್ನಸಂತರ್ಪಣೆಯನ್ನು ಏರ್ಪಡಿಸಿದ್ದು, ಈ ಕಾರ್ಯಕ್ಕೆಇಂದು ಭೂಮಿಪೂಜೆಯನ್ನುಏರ್ಪಡಿಸಲಾಗಿದೆ. ಇಂದಿನಿಂದ ಪೆಂಡಾಲ್ ನಿರ್ಮಾಣಕಾರ್ಯಆರಂಭವಾಗಲಿದೆಎಂದು ಹೇಳಿದರು.

ಪ್ರತಿ ವರ್ಷದಂತೆ ನಗರದ ಬಸವನಹಳ್ಳಿ ರಂಗನಾಥಸ್ವಾಮಿದೇವಾಲಯದಿಂದ ಶ್ರೀಯವರನ್ನು ಎಂಜಿರಸ್ತೆಯಲ್ಲಿ ಮೆರವಣಿಗೆ ಮೂಲಕ ಪೆಂಡಾಲಿಗೆತಂದು ಪ್ರತಿಷ್ಠಾಪಿಸಲಾಗುವುದೆಂದು ತಿಳಿಸಿದರು.

ಗಣಪತಿ ಸೇವಾ ಸಮಿತಿಅಧ್ಯಕ್ಷ ಸಿ.ಎಸ್. ಕುಬೇರ, ಕಾರ್ಯದರ್ಶಿ ಕೇಶವಮೂರ್ತಿ, ಖಜಾಂಚಿ ಮಂಜುನಾಥ್ ಸೇರಿದಂತೆ 21 ಜನ ನಿರ್ದೇಶಕರುಗಳನ್ನು ಆಯ್ಕೆಮಾಡಲಾಗಿದೆಎಂದರು.

ಈ ಸಂದರ್ಭದಲ್ಲಿ ನಗರಸಭೆರೂಪಕುಮರಗಣಪತಿ ಸೇವಾ ಸಮಿತಿಅಧ್ಯಕ್ಷ ಸಿ.ಎಸ್. ಕುಬೇರ ಹಾಗೂ ಸಮಿತಿಯ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.

# ಆ.17,18 ರಂದು ಶ್ರೀ ಮಡಿವಾಳ ಮಾಚಿದೇವರ ಶ್ರಾವಣ ಮಾಸದ ಸ್ಮರಣೋತ್ಸವ, ಪ್ರತಿಭಾ ಪುರಸ್ಕಾರ

**ದಾವಣಗೆರೆ:** ದಾವಣಗೆರೆ ಶ್ರೀ ಮಡಿವಾಳ ಮಾಚಿದೇವ ಸಂಘ ಮತ್ತು ಮಹಿಳಾ ಸಂಘ ಹಾಗೂ ಮಡಿಕಟ್ಟೆ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಶ್ರೀ ಮಡಿವಾಳ ಮಾಚಿದೇವರ ಶ್ರಾವಣ ಮಾಸದ ಸ್ಮರಣೋತ್ಸವ ಕಾರ್ಯಕ್ರಮವನ್ನು ಆಗಸ್ಟ್ 17 ಮತ್ತು 18ರಂದು ಇಲ್ಲಿನ ವಿನೋಬನಗರದಲ್ಲಿರುವ ಶ್ರೀ ಮಾಚಿದೇವ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಆಗಸ್ಟ್ 17ರಂದು ಬೆಳಗ್ಗೆ 11:30 ಕ್ಕೆ ಸಮಾಜದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿರುವ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಚಿತ್ರದುರ್ಗ ಮಾಚಿದೇವ ಮಹಾಮಠದ ಶ್ರೀ ಡಾ. ಬಸವ ಮಾಚಿದೇವ ಸ್ವಾಮೀಜಿ ಮತ್ತು ಶ್ರೀ ಜಡೆಸಿದ್ದ ಶಿವಯೋಗಿಶ್ವರ ಮಠದ ಶ್ರೀ ಶಿವಾನಂದ ಸ್ವಾಮೀಜಿಯವರ ದಿವ್ಯ ಸಾನಿಧ್ಯ ಹಾಗೂ ಸಂಘದ ಜಿಲ್ಲಾಧ್ಯಕ್ಷ ಎಂ ನಾಗೇಂದ್ರಪ್ಪ ಅಧ್ಯಕ್ಷತೆ ವಹಿಸಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಎಸ್ ಎಸ್ ಮಲ್ಲಿಕಾರ್ಜುನ್ ಉದ್ಘಾಟನೆ ನೆರವೇರಿಸಲಿದ್ದಾರೆ.

# ಆಗ್ನೇಯ ಪದವಿಧರ ಕ್ಷೇತ್ರದಚುನಾವಣೆ ಪೂರ್ವಭಾವಿ ಸಮಾಲೋಚನಾ ಸಭೆ.

**ದಾವಣಗೆರೆ :** ದಿನಾಂಕ:–10–08–2025 ರ ಭಾನುವಾರ ಬೆಳಿಗ್ಗೆ 11 ಗಂಟೆಗೆದಾವಣಗೆರೆ ನಗರದ ಪಿ.ಬಿರಸ್ತೆಯಲ್ಲಿರುವನಿವೃತ್ತಪೊಲೀಸ್ ಭವನದಲ್ಲಿಆಗ್ನೇಯ ಪದವೀಧರರಕ್ಷೇತ್ರದಚುನಾವಣೆ ಪೂರ್ವಭಾವಿ ಸಮಾಲೋಚನಾಸಭೆಯನ್ನುಕರೆಯಲಾಗಿದೆ. ಸಭೆಯಉದ್ಘಾಟನೆಯನ್ನು ಮಾಜಿ ಸಚಿವರಾದ ಶ್ರೀಮತಿ ಬಿ.ಟಿ ಲಲಿತಾ ನಾಯಕರವರು ನೇರವೇರಿಸಲಿದ್ದಾರೆ. ಸಭೆಯಅಧ್ಯಕ್ಷತೆಯನ್ನುಜಿಲ್ಲಾಕಾಂಗ್ರೇಸ್‌ಅಧ್ಯಕ್ಷರಾದ ಹೆಚ್.ಬಿ ಮಂಜಪ್ಪರವರು ವಹಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿದಾವಣಗೆರೆ ನಗರಾಭಿವೃದ್ಧಿವ್ಯಾಪ್ತಿ ಪ್ರಾಧಿಕಾರದಅಧ್ಯಕ್ಷರಾದ ದಿನೇಶ.ಕೆ ಶೆಟ್ಟಿ, ಪ್ರಗತಿಪರಚಿಂತಕರಾದಕೆ.ಎಲ್ ಅಶೋಕ, ನೂರ್ ಶ್ರೀಧರ, ಜಸ್ಟಿನ್ ಜೈಕುಮಾರ್, ಅನಿತಾಬಾಯಿ ಮಾಲತೇಶ್‌ರಾವ್,ಎ.ಬಿ ರಾಮಚಂದ್ರಪ್ಪ, ದಾದು ಸೇಠ್, ರವಿ ನಾರಾಯಣ್, ರುದ್ರಮುನಿ, ನಾಗೇಂದ್ರಪ್ಪ, ಶಾಮನೂರು ಟಿ. ಬಸವರಾಜ್, ದಾದಾಪೀರ್ ನವಿಲೇಹಾಳ, ವರುಣ್‌ಕುಮಾರ, ಅರುಣ್‌ಕುಮಾರ್, ಚಮನ್ ಸಾಬ್.ಟಿ, ಅಯೂಬ್ ಪೈಲ್ವಾನ್, ಕೆ.ಜಿ ಶಿವಕುಮಾರ, ಎಲ್.ಬಿ ಹನುಮಂತಪ್ಪ ಹರಿಹರ, ಶಂಶೀರ್ ಜಗಳೂರು,ಆರೀಫ್‌ಖಾನ್, ಮಾಗನಹಳ್ಳಿ ಪರಸಣ್ಣ, ಜಿ.ಸಿ ನಿಂಗಪ್ಪ, ಹನುಮಂತಪ್ಪ ಮಾಂತುಕೊಂಡ,ಜಿಲ್ಲಾಮತ್ತುತಾಲ್ಲೂಕುಘಟಕದಕಾಂಗ್ರೇಸ್ ಪಕ್ಷದ ಮುಖಂಡರು, ಅಭಿಮಾನಿಗಳು, ಕಾರ್ಯಕರ್ತರು, ಸ್ನೇಹಿತರು, ಹಿತೈಷಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕಾಂಗ್ರೇಸ್ ಪಕ್ಷದ ಪ್ರಬಲ ಟಿಕೆಟ್‌ಆಕಾಂಕ್ಷಿ ಶ್ರೀ ಅನೀಸ್ ಪಾಷಕೋರಿದ್ದಾರೆ.

# ಕಲಾಕುಂಚದಿಂದ ರಾಜ್ಯ ಮಟ್ಟದ ಉಚಿತ ಶ್ರಾವಣ ಕವನ ಸ್ಪರ್ಧೆಯ ಫಲಿತಾಂಶ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ ಪ್ರತೀ ವರ್ಷದಂತೆ ಈ ವರ್ಷವೂ ಶ್ರಾವಣ ಮಾಸದ ಪ್ರಯುಕ್ತ ರಾಜ್ಯ ಮಟ್ಟದ ಉಚಿತ ಕವನ ಸ್ಪರ್ಧೆ ಹಮ್ಮಿಕೊಂಡಿದ್ದು, ಸ್ಪರ್ಧೆಯ ಫಲಿತಾಂಶ ಈ ಕೆಳಗಿನಂತಿದೆ ಎಂದು ತೀರ್ಪುಗಾರರು, ಕವಯಿತ್ರಿ, ಸಾಹಿತಿ ಶ್ರೀಮತಿ ಶೈಲಾ ವಿನೋದ್ ದೇವರಾಜ್ ತಿಳಿಸಿದ್ದಾರೆ.

ಪ್ರಥಮ ಬಹುಮಾನ ದಾವಣಗೆರೆ ಜಿಲ್ಲೆ, ಚನ್ನಗಿರಿಯ ಡಾ॥ ನಮಿತಾ ಸತೀಶ್, ದ್ವಿತೀಯ ಬಹುಮಾನ ಶಿವಮೊಗ್ಗ ಜಿಲ್ಲೆಯ ಮಾಚೇನಹಳ್ಳಿಯ ಎಸ್.ಪರಶುರಾಮಪ್ಪ, ತೃತೀಯ ಬಹುಮಾನ ಹಾವೇರಿಯ ರಾಜೇಂದ್ರ ಹೆಗಡೆ, ಸಮಾಧಾನಕರ ಬಹುಮಾನಗಳು ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಬಾರೆಬೆಟ್ಟು ಸಂಧ್ಯಾ ಶ್ಯಾಮಭಟ್, ದಕ್ಷಿಣ ಕನ್ನಡ ಜಿಲ್ಲೆಯ ಕರ್ನಾಡು ಪಂಕಜಾ ಕೆ.ರಾಮಭಟ್, ಧಾರವಾಡದ ರೇಖಾ ಜೋಶಿ,

ದಾವಣಗೆರೆಯ ಶ್ರೀಮತಿ ಕುಸುಮಾ ಲೋಕೇಶ್ ಪಡೆದಿರುತ್ತಾರೆ ಎಂದು ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ಪ್ರಕಟಿಸಿದ್ದಾರೆ.ಸ್ಪರ್ಧೆಯ ನಿಯಮದ ಪ್ರಕಾರ ಯಾವುದೇ ಸಭೆ, ಸಮಾರಂಭ ಇಲ್ಲದೇ ವಿಜೇತರಾದ ಕವಿ, ಕವಯತ್ರಿಯರು ಕೊಟ್ಟ, ವ್ಯಾಟ್ಸಪ್‌ಗೆ ಅವರವರ ಫಲಿತಾಂಶ, ಅಭಿನಂದನಾ ಪತ್ರ ಕಳಿಸಲಾಗುವುದು.

ಕಲಾಕುಂಚದಿಂದ ನಿರಂತರವಾಗಿ ವರ್ಷ ಪೂರ್ತಿ ಇಂತಹ ಉಚಿತ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ಅವಕಾಶವಂಚಿತರಾದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರು ಈ ಮುಕ್ತವಾದ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ವಿನಂತಿಸಿದ್ದಾರೆ.

# ಅಂಗಾಗ ದಾನದಿಂದ ಅಮರತ್ವ

ಆಸ್ಪತ್ರೆಯ ಅಂಗಳದಲ್ಲಿ ಪ್ರತಿದಿನವೂ ನೂರಾರು ಕಥೆಗಳು ನಡೆಯುತ್ತವೆ ಕೆಲವೊಂದು ಜೀವನದ ಜಯದ ಕಥೆಗಳು, ಇನ್ನೂ ಕೆಲವೊಂದು ನಿರೀಕ್ಷೆಯ ಕೊನೆಯ ತಿರುವುಗಳು. ಆದರೆ ಕೆಲವರು ಅಜ್ಞಾತವಾಗಿ ಇತರರ ಬದುಕಿಗೆ ಬೆಳಕು ನೀಡುತ್ತಾರೆ ಅವರು ಅಂಗದಾನಿಗಳು.

ಅಂಗದಾನವೆಂದರೆ, ವ್ಯಕ್ತಿಯ ಮೃತ್ಯುವಿನ ನಂತರ ಅವನ ಅಂಗಗಳನ್ನು ಇತರರ ಜೀವ ಉಳಿಸಲು ಬಳಸುವ ಮಹತ್ವಪೂರ್ಣ ಕಾರ್ಯ. ಒಂದು ಅಂಗದಾತರು ಎಂಟು ಜನರ ಜೀವ ಉಳಿಸಬಲ್ಲರು. ಹೃದಯ, ಉಸಿರಿನ ಕಚಗುಳಿ, ಯಕೃತ್, ಹಕ್ಕಗಳು, ಕರುಳಿನ ಭಾಗ, ಕಣ್ಣು, ಚರ್ಮ ಎಲ್ಲವೂ ದಾನವಾಗಬಹುದು.

ಅಂಗದಾನದ ಅಗತ್ಯತೆ

ಭಾರತದಲ್ಲಿ ಪ್ರತಿವರ್ಷ ಲಕ್ಷಾಂತರ ಜನರು ಅಂಗದಾನದ ನಿರೀಕ್ಷೆಯಲ್ಲಿ ಜೀವ ಮರಣದ ಹಾದಿಯಲ್ಲಿ ಸಾಗುತ್ತಿದ್ದಾರೆ. ಆದರೆ ದಾನಿಗಳ ಸಂಖ್ಯೆ ತುಂಬಾ ಕಡಿಮೆ. ಇದರ ಹಿಂದೆ ಅನೇಕ ಭಯಗಳು, ತಪ್ಪು ನಂಬಿಕೆಗಳು, ಧಾರ್ಮಿಕ ಆತಂಕಗಳು ಇವೆ. ಹೀಗಾಗಿ ಜನರಲ್ಲಿ ಅಂಗದಾನದ ಕುರಿತು ಜಾಗೃತಿ ಮೂಡಿಸುವುದು ಅತ್ಯಗತ್ಯವಾಗಿದೆ.

ಪ್ರೇರಣೆಯ ಶಕ್ತಿ

ಅಂಗದಾನಕ್ಕೆ ಪ್ರೇರಣೆ ಬೇಕು ಅದು ಅಂತಃಕರಣದ ಮಾತು. ತಮ್ಮ ಮೃತದೇಹವನ್ನು ಸಹ ಇತರರಿಗೆ ಕೊಡುಗೆಯಾಗಿ ನೀಡುವ ಉನ್ನತ ಮೌಲ್ಯ ಈ ಕಾರ್ಯದಲ್ಲಿದೆ. ಕೆಲವರು ಆತ್ಮೀಯರ ಜೀವನ ಉಳಿದಿರುವುದನ್ನು ಕಂಡು ಪ್ರೇರಿತರಾಗುತ್ತಾರೆ, ಕೆಲವರು ಮಾನವೀಯತೆಯ ಭಾವದಿಂದಲೇ ಮುಂದೆ ಬರುತ್ತಾರೆ.

ಮಕ್ಕಳಿಗೆ, ಯುವಕರಿಗೆ, ಸಮಾಜದ ಪ್ರತಿಯೊಬ್ಬರಿಗೂ ಈ ವಿಷಯ ತಿಳಿಯಬೇಕು. ಶಾಲೆ, ಕಾಲೇಜು, ದೇವಸ್ಥಾನ, ಸಮಾಜದ ಸಭೆಗಳಲ್ಲಿ ಈ ಕುರಿತು ಮಾತನಾಡಬೇಕು. “ಅಂಗದಾನದಿಂದ ಅಮರತೆಯನ್ನು ಸೇರುವ ಸಾಧ್ಯತೆ ಇದೆ” ಎಂಬ ಅರಿವು ಎಲ್ಲರಲ್ಲೂ ಮೂಡಬೇಕು.


## ಅಂಗದಾನದ ಬಗ್ಗೆ ಇದ್ದ ತಪ್ಪು ನಂಬಿಕೆಗಳು

**ತಪ್ಪು ನಂಬಿಕೆ:** ಅಂಗಗಳನ್ನು ತೆಗೆದ ಮೇಲೆ ದೇಹದ ಆಕರ ಬದಲಾಗುತ್ತದೆ.

**ನಿಜ:** ವೈದ್ಯರು ಸೌಮ್ಯವಾಗಿ ಅಂಗಗಳನ್ನು ತೆಗೆದು, ದೇಹವನ್ನು ನಿಕಟ ಸಂಬಂಧಿಗಳಿಗೆ ಗೌರವದಿಂದ ಹಸ್ತಾಂತರಿಸುತ್ತಾರೆ.

**ತಪ್ಪು ನಂಬಿಕೆ:** ಧರ್ಮಗಳು ಅಂಗದಾನ ವಿರೋಧಿಸುತ್ತವೆ.

**ನಿಜ:** ಬಹುತೇಕ ಧರ್ಮಗಳು ಅಂಗದಾನವನ್ನು ದಾನ ಮತ್ತು ಮಾನವ ಸೇವೆಯಾಗಿ ಒಪ್ಪಿಕೊಂಡಿವೆ.



“ನೀವು ಒಂದು ಜೀವ ಉಳಿಸಿದರೆ, ಒಂದು ಜಗತ್ತನ್ನು ಉಳಿಸಿದ್ದಂತೆ.”
ಹೆಸರಿಲ್ಲದ ಮಹಾತ್ಮ

ನೀವು ಅಂಗದಾನಿಗೆ ಮುಂದೆ ಬರಬೇಕೆ?
notto.mohfw.gov.in ನಲ್ಲಿ ನೋಂದಾಯಿಸಿಕೊಳ್ಳಿ.
ಅಂಗದಾನದ ಕಾರ್ಡ್ ಇಟ್ಟುಕೊಳ್ಳಿ.
ಕುಟುಂಬಕ್ಕೆ ನಿಮ್ಮ ಇಚ್ಛೆಯ ಬಗ್ಗೆ ತಿಳಿಸಿ.

### ವೈದ್ಯರ ಪಾತ್ರ:

ವೈದ್ಯರು ಕೇವಲ ಚಿಕಿತ್ಸಕರು ಅಲ್ಲ ಅವರು ಮಾರ್ಗದರ್ಶಕರು, ಜಾಗೃತಿದಾತರು. ತುರ್ತು ಪರಿಸ್ಥಿತಿಯಲ್ಲಿ ಕುಟುಂಬದೊಂದಿಗೆ ಸೂಕ್ತ ಸಂವಹನ ನಡೆಸುವುದು ನಮ್ಮ ಕರ್ತವ್ಯ. ಎಷ್ಟು ದಯೆಯಿಂದ ಮಾತನಾಡಿದೆಯೋ ಅಷ್ಟೇ ಸಹಾನುಭೂತಿಯ ತಳಹದಿಯಲ್ಲಿ ಅಂಗದಾನದ ನಿರ್ಧಾರ ಮೂಡಬಹುದು. ವೈದ್ಯ ವಿದ್ಯಾರ್ಥಿಗಳಿಗೆ ಈ ವಿಷಯದ ಬುದ್ಧಿವಂತಿಕೆ ಮತ್ತು ನೈತಿಕತೆ ಕಲಿಸುವುದು ಸಮಾನ ಮುಖ್ಯವಾಗಿದೆ.

ನಮ್ಮ ಕೊಡುಗೆ – ಇನ್ನೊಬ್ಬರ ಬದುಕುಅಂಗದಾನ ಮರಣದ ನಂತರವೂ ಬದುಕು ನೀಡುವ ಶ್ರೇಷ್ಠ ಮಾನವೀಯ ಕಾರ್ಯ. ನಾವು ನಮ್ಮ ಅಂಗಗಳನ್ನು ದಾನಮಾಡುವುದರಿಂದ ಮುಂದಿನ ಯಾರೋ ಒಬ್ಬನ ಬದುಕಿಗೆ ಹೊಸ ಬೆಳಕು ಬರುತ್ತದೆ. ನಮ್ಮ ಬದುಕಿನ ಅಂತ್ಯ ಮತ್ತೊಬ್ಬರ ಆರಂಭವಾಗಬಹುದು.

–ಡಾ. ಆರ್. ಮೋಹನ್,
ಮೂತ್ರಪಿಂಡ ತಜ್ಞರು,
ಜೆ ಜೆ ಎಂ ಮೆಡಿಕಲ್ ಕಾಲೇಜು,
ದಾವಣಗೆರೆ

## ಅರಣ್ಯ ಭೂಮಿಗಳ ಕ್ರೋಢೀಕೃತ ದಾಖಲೆ

# ಜಂಟಿ ಮೋಜಣಿ ನಡೆಸಿ ಗಡಿ ಗುರುತಿಸಿ : ಜಿಲ್ಲಾಧಿಕಾರಿ

**ಚಿತ್ರದುರ್ಗ :** ಅಧಿಸೂಚಿತ (ರಿಸರ್ವ್) ಅರಣ್ಯ ಪ್ರದೇಶಗಳ ದಾಖಲೆಗಳು ಸ್ಪಷ್ಟವಾಗಿದ್ದು, ಈಗಾಗಲೇ ಬಹುಪಾಲು ಪ್ರದೇಶಗಳ ಗಡಿ ರೇಖೆಗಳು ಸ್ಪಷ್ಟವಾಗಿರುತ್ತವೆ. ಆದರೂ ಗೊಂದಲವಿರುವ ಕೆಲವು ಕಡೆ ತಹಶೀಲ್ದಾರರು ಹಾಗೂ ವಲಯ ಅರಣ್ಯಾಧಿಕಾರಿಗಳು ಜಂಟಿ ಮೋಜಣಿ ನಡೆಸಿ ಗಡಿ ಗುರುತಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ವನ (ಸಂರಕ್ಷಣೆ ಮತ್ತು ಸಂವರ್ಧನೆ) ಅಧಿನಿಯಮ 1980 ಮತ್ತು ತಿದ್ದುಪಡಿ ಅಧಿನಿಯಮ 1988 ಮತ್ತು ನಿಯಮ 2023ರಂತೆ ಅರಣ್ಯ ಭೂಮಿಗಳ ಕ್ರೋಢೀಕೃತ ದಾಖಲೆಗಳನ್ನು ಸಿದ್ಧಪಡಿಸುವ ಸಂಬಂಧ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರಿಭಾವಿತ (ಡೀಮ್ಡ್) ಅರಣ್ಯ ಪ್ರದೇಶಗಳ ಪಟ್ಟಿಯನ್ನು ಪರಿಶೀಲಿಸಿಕೊಂಡು ಮಾನದಂಡಗಳನ್ವಯ ಕ್ಷೇತ್ರ ಮಟ್ಟದ ಪರಿಶೀಲನೆ ನಡೆಸಿ, ವರದಿ ಸಲ್ಲಿಸಲು ಜಂಟಿ ಪರಿಶೀಲನಾ ಸಮಿತಿ ಹಾಗೂ ಕ್ಷೇತ್ರ ಮಟ್ಟದ ಜಂಟಿ ಮೋಜಣಿ ತಂಡಗಳಿಗೆ ನಿರ್ದೇಶಿಸಿದ ಅವರು, ಅರಣ್ಯ ಭೂಮಿಗಳ ಕ್ರೋಢೀಕೃತ ದಾಖಲೆ ಸಂಬಂಧ ಸರ್ವೇ ಕಾರ್ಯ ನಡೆಸಲು ಷೆಡ್ಯೂಲ್ ಪ್ರಕಾರ ಸಮಯ ನಿಗಧಿಪಡಿಸಿಕೊಂಡು ವ್ಯವಸ್ಥಿತವಾಗಿ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎಸ್. ಆಕಾಶ್ ಮಾತನಾಡಿ, ಪರಿಭಾವಿತ ಅರಣ್ಯ ಭೂಮಿಗಳ ಕ್ಷೇತ್ರ ಮಟ್ಟದ ಜಂಟಿ ಮೋಜಣಿಗಾಗಿ ಎಲ್ಲ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗುವುದು ಎಂದರು.



ಪ್ರಾದೇಶಿಕ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಗೋಪ್ಯನಾಯ್ಕ್ ಮಾತನಾಡಿ, ವನ (ಸಂರಕ್ಷಣೆ ಮತ್ತು ಸಂವರ್ಧನೆ) ಅಧಿನಿಯಮ 1980 ಮತ್ತು ತಿದ್ದುಪಡಿ ಅಧಿನಿಯಮ 1988 ಮತ್ತು ನಿಯಮ 2023ರಂತೆ ಸರ್ವೋಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ಸಂಖ್ಯೆ 1164/2023, 2024ರ ಫೆಬ್ರವರಿ 19ರಲ್ಲಿನ ಆದೇಶದಂತೆ ಅರಣ್ಯ ಭೂಮಿಗಳ ಕ್ರೋಢೀಕೃತ ದಾಖಲೆಗಳನ್ನು ಸಿದ್ಧಪಡಿಸುವ ಸಲುವಾಗಿ ರಾಜ್ಯಮಟ್ಟದ ಸಮಿತಿ, ಕಂದಾಯ ವಿಭಾಗ ಮಟ್ಟದ ಸಮಿತಿ, ಜಿಲ್ಲಾ ಮಟ್ಟದ ಸಮಿತಿಗಳನ್ನು ರಚಿಸಲಾಗಿದೆ. ಅಧಿಸೂಚಿತ ಮತ್ತು ಘೋಷಿತ ಅರಣ್ಯ ಪ್ರದೇಶಗಳು, ಯಾವುದೇ ಸರ್ಕಾರಿ ದಾಖಲೆಗಳಲ್ಲಿ "ಅರಣ್ಯ" ಎಂಬುದನ್ನು ಒಳಗೊಂಡಿದ್ದು, (1)ರಲ್ಲಿ ಹೊರತುಪಡಿಸಿದ ಅರಣ್ಯಗಳು ಹಾಗೂ ನಿಘಂಟು ವ್ಯಾಖ್ಯಾನದಡಿ ಅರಣ್ಯ ಗುಣಲಕ್ಷಣಗಳುಳ್ಳ ಪರಿಭಾವಿತ ಅರಣ್ಯ ಪ್ರದೇಶಗಳು ಎಂದು ಅರಣ್ಯ ಭೂ ದಾಖಲೆಗಳನ್ನು ವಗೀಕರಿಸಬೇಕಾಗಿರುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು.

ಅರಣ್ಯ ಭೂಮಿಗಳನ್ನು ಗುರುತಿಸಿ ಕ್ರೋಢೀಕೃತ, ಏಕೀಕೃತ ದಾಖಲೆಗಳನ್ನು ವಗೀಕರಿಸಿ ಸಲ್ಲಿಸಲು ತಾಲ್ಲೂಕು ಮಟ್ಟದ ಜಂಟಿ ಪರಿಶೀಲನಾ ಸಮಿತಿಯನ್ನು ಹಾಗೂ ಕ್ಷೇತ್ರ ಮಟ್ಟದ ಜಂಟಿ ಮೋಜಣಿ ತಂಡಗಳನ್ನು ರಚಿಸಲಾಗಿರುತ್ತದೆ ಎಂದು ತಿಳಿಸಿದ ಅವರು, ತಾಲ್ಲೂಕು ಮಟ್ಟದ ಜಂಟಿ ಪರಿಶೀಲನಾ ಸಮಿತಿ ಹಾಗೂ ಕ್ಷೇತ್ರ ಮಟ್ಟದ ಜಂಟಿ ಮೋಜಣಿ ತಂಡಗಳು ನಿರ್ವಹಿಸಬೇಕಾದ ಕಾರ್ಯ ವಿಧಾನಗಳ ಕುರಿತು ಸಭೆಗೆ ವಿವರಿಸಿದರು.

ಸಭೆಯಲ್ಲಿ ಭೂ ದಾಖಲೆಗಳ ಉಪನಿರ್ದೇಶಕ ರಾಮಾಂಜನೇಯ, ತೋಟಗಾರಿಕೆ ಉಪನಿರ್ದೇಶಕ ಶರಣ ಬಸಪ್ಪ ಬೋಗಿ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಪ್ರಾದೇಶಿಕ ಮತ್ತು ಸಾಮಾಜಿಕ ವಲಯ ವಲಯ ಅರಣ್ಯಾಧಿಕಾರಿಗಳು ತಹಶೀಲ್ದಾರ್‌ಗಳು, ಭೂ ದಾಖಲೆಗಳ ಸಹಾಯಕ ನಿರ್ದೇಶಕರು ಇದ್ದರು.

## ಜಿಲ್ಲಾಡಳಿತದಿಂದ ಸ್ವಾತಂತ್ರ್ಯೋತ್ಸವ

**ಚಿಕ್ಕಮಗಳೂರು, ಆ.12:** ಜಿಲ್ಲಾಡಳಿತದ ವತಿಯಿಂದ ಆಗಸ್ಟ್ 15 ರಂದು ಬೆಳಿಗ್ಗೆ 9 ಗಂಟೆಗೆ ಸ್ವಾತಂತ್ರ್ಯೋತ್ಸವವನ್ನು ನಗರದ ನೇತಾಜಿ ಸುಭಾಶ್ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ರಾಷ್ಟ್ರ ಧ್ವಜಾರೋಹಣವನ್ನು ನೆರವೇರಿಸಲಿದ್ದಾರೆ. ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿ ಶ್ರೀ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಟಿ.ಡಿ.ರಾಜೇಗೌಡ, ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷೆ ಡಾ.ಆರತಿ ಕೃಷ್ಣ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಶ್ರೀನಿವಾಸ್ ಭಾಗವಹಿಸಲಿದ್ದಾರೆ.

ಚಿಕ್ಕಮಗಳೂರು ಕ್ಷೇತ್ರದ ಶಾಸಕ ಹೆಚ್.ಡಿ.ತಮ್ಮಯ್ಯ ಅಧ್ಯಕ್ಷತೆ ವಹಿಸಲಿದ್ದು, ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ. ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಜಿ.ಹೆಚ್.ಶ್ರೀನಿವಾಸ್, ಕೆ.ಎಸ್.ಆನಂದ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ನಗರಸಭೆ ಅಧ್ಯಕ್ಷರಾದ ಬಿ.ಶೀಲಾ ದಿನೇಶ್ ಪಾಲ್ಗೊಳ್ಳಲಿದ್ದಾರೆ.

### ನಗರಸಭೆಯಿಂದ ಸ್ವಾತಂತ್ರ್ಯೋತ್ಸವ

ಚಿಕ್ಕಮಗಳೂರು, ಆ.12: ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಆಗಸ್ಟ್ 15 ರಂದು ಬೆಳಿಗ್ಗೆ 8 ಗಂಟೆಗೆ ಚಿಕ್ಕಮಗಳೂರು ನಗರಸಭಾ ಕಚೇರಿಯ ಆವರಣದಲ್ಲಿ ರಾಷ್ಟ್ರ ಧ್ವಜಾರೋಹಣವನ್ನು ನಗರಸಭೆ ಅಧ್ಯಕ್ಷೆ ಬಿ.ಶೀಲಾ ದಿನೇಶ್ ಅವರು ನೆರವೇರಿಸಲಿದ್ದಾರೆ ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳೆ ವಿಮಾ ಯೋಜನೆಯ ದಿನಾಂಕ ವಿಸ್ತರಣೆ

**ಚಿಕ್ಕಮಗಳೂರು :** ಸರ್ಕಾರವು 2025ರ ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯ ವ್ಯಾಪ್ತಿಗೆ ಚಿಕ್ಕಮಗಳೂರು, ಕಡೂರು, ಕೊಪ್ಪ, ಮೂಡಿಗೆರೆ, ಎನ್.ಆರ್.ಪುರ, ಶೃಂಗೇರಿ, ತರೀ-ಕೆರೆ, ಅಜ್ಜಂಪುರ ಹಾಗೂ ಕಳಸ ತಾಲ್ಲೂಕುಗಳನ್ನು ಒಳಪಡಿಸಲಾಗಿದೆ.

ವಿಮಾ ಯೋಜನೆಗೆ ಬೆಳೆ ಸಾಲ ಪಡೆಯದ ರೈತರಿಗೆ ಅಂತಿಮ ದಿನಾಂಕವನ್ನು ಆಗಸ್ಟ್ 14 ರವರೆಗೆ ಹಾಗೂ ಸಾಲ ಪಡೆದ ರೈತರಿಗೆ ಅಂತಿಮ ದಿನಾಂಕವನ್ನು ಆಗಸ್ಟ್ 30ರವರೆಗೆ ವಿಸ್ತರಿಸಲಾಗಿದೆ.

# ಸ್ವಾಧೀನಾನುಭವ ಪತ್ರಕ್ಕೆ ವಿನಾಯಿತಿ ನೀಡಲು ಶಾಸಕರಿಗೆ ಮನವಿ

**ಚಿಕ್ಕಮಗಳೂರು:** ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ತಾತ್ಕಾಲಿಕ ಮತ್ತು ಶಾಶ್ವತ ವಿದ್ಯುತ್ ಸಂಪರ್ಕಗಳಿಗೆ ಸ್ವಾಧೀನಾನುಭವ ಪತ್ರಕ್ಕೆ ವಿನಾಯಿತಿ ನೀಡಲು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು ಎಂದು ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಜಿಲ್ಲಾ ಸಂಘದ ಪದಾಧಿಕಾರಿಗಳು ಶಾಸಕ ಹೆಚ್.ಡಿ. ತಮ್ಮಯ್ಯ ಅವರಿಗೆ ಮನವಿ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಸಂಘದ ಜಿಲ್ಲಾಧ್ಯಕ್ಷ ಆರ್. ಹರೀಶ್ ಗ್ರಾಹಕರಿಗೆ ವಿದ್ಯುತ್ ನೀಡುವ ಸಲುವಾಗಿ ಸಾರ್ವಜನಿಕರು ಪ್ರಸ್ತುತ ಐದು ಎಸ್ಕಾಂ ಕಂಪನಿಗಳಿಗೆ ಸೇತುವೆಯಾಗಿ ಎಲ್ಲಾ ಕಂಪನಿಗಳ ಅಧಿಕಾರಿಗಳೊಡನೆ ಜೊತೆಗೂಡಿ ವ್ಯವಸ್ಥಿತವಾಗಿ ವಿದ್ಯುತ್ ಸಂಪರ್ಕವನ್ನು ಸಕಾಲದಲ್ಲಿ ಅಳವಡಿಸುತ್ತಾ ಉತ್ತಮ ಸೇವೆಯನ್ನು ಸಲ್ಲಿಸುತ್ತಿದ್ದಾರೆ ಎಂದರು.

ಸಂಘದ ಸದಸ್ಯರು ವಸತಿಗಳಿಗೆ, ಕೈಗಾರಿಕೆಗಳಿಗೆ, ವಾಣಿಜ್ಯ ಕಟ್ಟಡಗಳಿಗೆ ಹಾಗೂ ಬಹುಮಹಡಿ ಕಟ್ಟಡಗಳಿಗೆ ಇಲಾಖೆಯ



ಆದೇಶದಂತೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಿ ಇಡೀ ರಾಜ್ಯವನ್ನು ಬೆಳಕಿನ ಮೂಲಕ ವೈಭವೀಕರಿಸಿದ್ದಾರೆ. ರಾಜ್ಯದ ಸರ್ವತೋಮುಖ ಬೆಳವಣಿಗೆಯಲ್ಲಿ ಸರ್ಕಾರದ ಅಧಿಕಾರಿಗಳ ಜೊತೆಯಲ್ಲಿ ಸಂಘದ ಸದಸ್ಯರ ಶ್ರಮವು ವಿದ್ಯುದ್ದೀಕರಣದಲ್ಲಿ ಸ್ಮರಣೀಯವಾಗಿದೆ ಎಂದು ತಿಳಿಸಿದರು.

ಈಗಾಗಲೇ ಸಂಘವು ರಾಜ್ಯಾದ್ಯಂತ 15000ಕ್ಕೂ ಹೆಚ್ಚು ಸದಸ್ಯರುಗಳನ್ನು ಹೊಂದಿದೆ. ಇದನ್ನು ನಂಬಿ 30 ಲಕ್ಷಕ್ಕೂ ಹೆಚ್ಚು ಕಾರ್ಮಿಕರು, ಸೂಪರ್‌ವೈಸರ್‌ಗಳು, ಸಾಮಾಗ್ರಿ ಸರಬರಾಜು, ಮಾರಾಟ ಮತ್ತು ತಯಾರಿಕೆ ಕುಟುಂಬಗಳು ಅವಲಂಬಿತವಾಗಿ ಜೀವನ ನಡೆಸುತ್ತಿದ್ದಾರೆ ಎಂದು ಹೇಳಿದರು.

ಆ ನಿಟ್ಟಿನಲ್ಲಿ ಸರ್ವೋಚ್ಚ ನ್ಯಾಯಾಲಯ ಆದೇಶದಂತೆ ನೂತನ ಕಟ್ಟಡಗಳಿಗೆ ತಾತ್ಕಾಲಿಕ ಮತ್ತು ಶಾಶ್ವತ ವಿದ್ಯುತ್ ಸಂಪರ್ಕ, ನೀರು ಸರಬರಾಜು, ಒಳಚರಂಡಿ ಸಂಪರ್ಕಗಳಿಗೆ ಗ್ರಾ.ಪಂ, ಪ.ಪಂ, ಪುರಸಭೆ, ನಗರಸಭೆ ಸೇರಿದಂತೆ ಸ್ಥಳೀಯ ಪ್ರಾಧಿಕಾರಗಳಿಂದ ಸ್ವಾಧೀನಾನುಭವ ಪತ್ರವನ್ನು ಪಡೆದು ಮೇಲಿನ ಮೂಲ ಭೂತ ಸೌಕರ್ಯಗಳಿಗಾಗಿ ಸಂಬಂಧಿಸಿದ ಕಚೇರಿಗಳಿಗೆ ಸಲ್ಲಿಸುವುದು ಕಡ್ಡಾಯವಾಗಿದೆ ಎಂದರು.

ಈ ಆದೇಶದಿಂದ ರಾಜ್ಯಾದ್ಯಂತ ಎಲ್ಲಾ ರೀತಿಯ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುತ್ತಿಲ್ಲ. ಇದರಿಂದ ಬೃಹತ್ ಉದ್ಯಮವನ್ನು ನಂಬಿರುವ ಕಟ್ಟಡ ಕೆಲಸಗಾರರು, ವಿನ್ಯಾಸಗಾರರು, ಸಿವಿಲ್, ವಿದ್ಯುತ್ ಗುತ್ತಿಗೆದಾರರು ಇತ್ಯಾದಿ ಸೇರಿದಂತೆ ಲಕ್ಷಾಂತರ ಕುಟುಂಬಗಳು ಬೀದಿಗೆ ಬೀಳುವ ಸ್ಥಿತಿ ನಿರ್ಮಾಣದ ಜೊತೆಗೆ ಬಹುದೊಡ್ಡ ಆದಾಯದ ಮೂಲಕ್ಕೆ ಕೊಡಲಿಪೆಟ್ಟು ಬೀಳಲಿದೆ ಎಂದರು.

ಆದ್ದರಿಂದ ಶಾಸಕರು ರಾಜ್ಯಸರ್ಕಾರದ ಗಮನಕ್ಕೆ ತಂದು ವಿಧಾನಸೌಧದಲ್ಲಿ ನಡೆಯುವ ಮಳೆಗಾಲದ ಅಧಿವೇಶನದಲ್ಲಿ ಸರ್ಕಾರದ ಗಮನ ಸೆಳೆದು, ಎಲ್ಲಾ ರೀತಿಯ ಕಟ್ಟಡ ಕಾರ್ಮಿಕರು, ಗ್ರಾಹಕರಿಗೆ ನ್ಯಾಯ ಒದಗಿಸಿಕೊಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷರಾದ ಯು.ನರೇಶ್, ಕೆ.ಟಿ.ಪ್ರಸನ್ನ, ಪ್ರಧಾನ ಕಾರ್ಯದರ್ಶಿ ಆರ್.ಎಂ.ಮರಿಯಾರಾಜ್, ಸಹಕಾರ್ಯದರ್ಶಿ ಹೆಚ್.ಇ.ಹರೀಶ್‌ಕುಮಾರ್, ಸಂಘಟನಾ ಕಾರ್ಯದರ್ಶಿ ಕೆ.ಎಸ್.ಶಾಂತಕುಮಾರ್, ಕೋಶಾಧ್ಯಕ್ಷ ಕೆ.ಅಬ್ದುಲ್‌ಅಲಿ ಹಾಜರಿದ್ದರು.

# ಪ್ರತ್ಯೇಕ ಕೊಠಡಿ ವ್ಯವಸ್ಥೆಗೆ ಒತ್ತಾಯಿಸಿ ನಗರಸಭೆ ವಿಪಕ್ಷ ಸದಸ್ಯರ ಪ್ರತಿಭಟನೆ





**ಚಿಕ್ಕಮಗಳೂರು:** ವಿರೋಧ ಪಕ್ಷದ ಸದಸ್ಯರು ನಗರಸಭೆಗೆ ಬಂದರೆ ಕುಳಿತುಕೊಳ್ಳಲು ಪ್ರತ್ಯೇಕ ಕೊಠಡಿ ವ್ಯವಸ್ಥೆ ಮಾಡುವಂತೆ ಒತ್ತಾಯಿಸಿ ನಗರಸಭೆ ಅಧ್ಯಕ್ಷರ ವಿರುದ್ಧ ವಿಪಕ್ಷ ಸದಸ್ಯರು ಪ್ರತಿಭಟನಾ ಧರಣಿ ನಡೆಸಿದ ಘಟನೆ ಇಂದು ನಡೆದ ನಗರಸಭೆ ಸಾಮಾನ್ಯ ಸಭೆಯಲ್ಲಿ ನಡೆಯಿತು.

ನಗರಸಭೆ ಅಧ್ಯಕ್ಷೆ ಶೀಲಾ ದಿನೇಶ್ ಅಧ್ಯಕ್ಷತೆಯಲ್ಲಿ ಇಂದು ನಡೆದ ಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ ವಿರೋಧ ಪಕ್ಷದ ಸದಸ್ಯರು ಆಡಳಿತ ಪಕ್ಷದ ಸದಸ್ಯರು ಬಂದ-ರೆ ಅಧ್ಯಕ್ಷರು, ಉಪಾಧ್ಯಕ್ಷರ ಕೊಠಡಿಯಲ್ಲಿ ಕುಳಿತುಕೊಳ್ಳುತ್ತಾರೆ. ವಿರೋಧ ಪಕ್ಷದ ಸದಸ್ಯರು ಎಲ್ಲಿ ಕುಳಿತುಕೊಳ್ಳಬೇಕು ಎಂದು ಪ್ರಶ್ನಿಸಿ, ಕಳೆದ ಸಭೆಯಲ್ಲಿ ಪ್ರತ್ಯೇಕ ಕೊಠಡಿಗೆ ನಿರ್ಣಯ ಕೈಗೊಳ್ಳಲಾಗಿದೆ. ಆದರೆ, ಅದು ಜಾರಿಗೆ ಬಂದಿಲ್ಲವೆಂದು ತಿಳಿಸಿದರು.

ಪ್ರತ್ಯೇಕ ಕೊಠಡಿ ನಿರ್ಮಿಸಿಕೊಡಲು ಕಾನೂನಿನಲ್ಲಿ ಅವಕಾಶ ಇಲ್ಲ ಎಂಬರ್ಥದಲ್ಲಿ ಅಧ್ಯಕ್ಷರು, ಸಂಬಂಧಿಸಿದ ಇಂಜಿನಿಯರ್, ಆಡಳಿತ ಪಕ್ಷದ ಸದಸ್ಯ ಕುಮಾರಗೌಡ ಹೇಳಿದಾಗ ಇದನ್ನು ವಿರೋಧಿಸಿ ಸಭೆಯಿಂದ ಹೊರನಡೆದ ವಿಪಕ್ಷ ಸದಸ್ಯರು ನಗರಸಭೆ ಎದುರು ಧರಣಿ ನಡೆಸಿದರು. ಅಧ್ಯಕ್ಷರ ವಿರುದ್ಧ ಘೋಷಣೆ ಕೂಗಿದರು.

> "ನಗರಸಭೆ ಅಧ್ಯಕ್ಷರು ನಮ್ಮ ಅಧ್ಯಕ್ಷರು ಎಂದು ಹೇಳುವ ಮೂಲಕ ಅಧ್ಯಕ್ಷರ ಆಯ್ಕೆ ಸಂದರ್ಭದಲ್ಲಿ ಹೇಳಿದ ವಿರೋಧ ಪಕ್ಷದ ಸದಸ್ಯರು, ಈಗ ಅಧ್ಯಕ್ಷರು ವಿರುದ್ಧ ಪ್ರತಿಭಟನೆ ನಡೆಸಿದ್ದು, ಅಧ್ಯಕ್ಷರಿಗೆ ಅಪಮಾನ ಮಾಡಿದಂತಾಗಿದೆ.
> -ಟಿ.ರಾಜಶೇಖರ್

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಬಿಜೆಪಿಯ ನಗರಸಭೆ ಸದಸ್ಯ ಟಿ.ರಾಜಶೇಖರ್, ವಿರೋಧ ಪಕ್ಷ ಸದಸ್ಯರ ಮನವೊಲಿಸಲು ಯತ್ನಿಸಿದರು. ಅದು ಫಲಕಾರಿಯಾಗಲಿಲ್ಲ, ಖುದ್ದು ಅಧ್ಯಕ್ಷ-ರೇ ಬಂದು ಕರೆಯಬೇಕೆಂದು ಪಟ್ಟುಹಿಡಿದರು.

ಒಂದು ಹಂತದಲ್ಲಿ ನಗರಸಭೆ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ನಗರಸಭೆ ಆಯುಕ್ತರು ಆಗಮಿಸಿ ವಿಪಕ್ಷ ಸದಸ್ಯರ ಮನವೊಲಿಸಿದ ಬಳಿಕ ತೆರಳಿ ತಮ್ಮ ಆಸನದಲ್ಲಿ ಕುಳಿತುಕೊಂಡರು.

# ವ್ಯಕ್ತಿತ್ವ ಹಿಗ್ಗಿಸಿಕೊಂಡರೆ ಮನೆಗಳು ಮಹಾಮನೆ

### ಶ್ರಾವಣ ಸಂಜೆಯಲ್ಲಿ ಬಸವಮರುಳಸಿದ್ದ ಸ್ವಾಮೀಜಿ ಅಭಿಮತ

**ಚಿಕ್ಕಮಗಳೂರು :** ವ್ಯಕ್ತಿತ್ವ ಹಿಗ್ಗಿಸಿಕೊಂಡರೆ ಮನೆ ಮಹಾಮನೆಯಾಗುತ್ತದೆ ಎಂದು ಬಸವತತ್ತ್ವಪೀಠದ ಅಧ್ಯಕ್ಷ ಶ್ರೀಡಾ.ಬಸವಮರುಳಸಿದ್ದ ಸ್ವಾಮೀಜಿ ನುಡಿದರು.

ಮಾಧ್ಯಮ ಸಂಸ್ಕೃತಿ ಪ್ರತಿಷ್ಠಾನ, ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಹಾಗೂ ಐಸಿರಿ ಫೌಂಡೇಶನ್ ಸಹಯೋಗದೊಂದಿಗೆ ಜುಲೈ26 ರಿಂದ ಆಗಸ್ಟ್24ರ ವರೆಗೆ ಆಯೋಜಿಸಿರುವ 'ಅಂಗಳದೆಡೆಗೆ ಮಂಗಳ ನುಡಿ-ನಡಿಗೆ' 'ಶ್ರಾವಣ ಮಾಸದ ಪ್ರವಚನ ಮಾಲಿಕೆ'ಯ ಅಂಗವಾಗಿ ಶುಕ್ರವಾರ ಸಂಜೆ ಕಲ್ಯಾಣ ನಗರದ ಜಗದೀಶಬಾಬು ಮನೆಯಂಗಳದಲ್ಲಿ 'ಮನೆ-ಮಹಾಮನೆ' ಕುರಿತು ಅವರು ಉಪನ್ಯಾಸ ಕಾರ್ಯಕ್ರಮದ ಸಾನಿಧ್ಯವಹಿಸಿ ಅವರು ಮಾತನಾಡಿದರು.

ಹಿರಿಯರನ್ನು ಪ್ರೀತಿ-ವಿಶ್ವಾಸದಿಂದ ನೋಡಿಕೊಂಡು ಹೋಗುವ ದೊಡ್ಡ ಜವಾಬ್ದಾರಿ ನಮ್ಮ ಸಮಾಜದ ಮೇಲಿದೆ. ಅಪ್ಪ-ಅಮ್ಮನನ್ನು ಚೆನ್ನಾಗಿ ನೋಡಿಕೊಳ್ಳುವ ಸಂಸ್ಕಾರ-ಸಂಸ್ಕೃತಿ ನಮ್ಮದಾಗಬೇಕು. ಮಕ್ಕಳು ನಮ್ಮನ್ನೆ ಅನುಕರಿಸುತ್ತವೆ ಎಂಬ ಪ್ರಜ್ಞೆ ಅಗತ್ಯ. ಕೌಟುಂಬಿಕ ಮೌಲ್ಯಗಳು ಪಾಲನೆಯಾಗಬೇಕೆಂದವರು ನುಡಿದರು.

ಅನುಕೂಲ ಜಾಸ್ತಿಯಾಗಿ ಬಾಂಧವ್ಯಗಳು ಸಡಿಲವಾಗುತ್ತಿವೆ. ಭಯ ಸಂಶಯದ ತಲ್ಲಣಗಳ ಕಂದಕ ಎದೆಗಳ ನಡುವಿನ ಸೇತುವೆಯನ್ನು ಮುರಿದಿದೆ ಎಂಬ ಜಿ.ಎಸ್.ಶಿವರುದ್ರಪ್ಪರ ಕಾವ್ಯ ಉಲ್ಲೇಖಿಸಿದ ಸ್ವಾಮೀಜಿ, ಸಣ್ಣತನದಿಂದಾಗಿ ಮಾನವೀಯ ಗುಣಗಳು ಜಾಳಾಗುತ್ತಿವೆ ಎಂದರು.

ಅಪನಂಬಿಕೆ ಮನುಷ್ಯರಲ್ಲಿ ಮಾತ್ರ ಇರುವುದೇ ಹೊರತು ಬೇರ‍್ಯಾವುದೇ ಜೀವಿಗಳಲ್ಲಿ ಇರುವುದಿಲ್ಲ. ಮನೆಯಲ್ಲಿ ಪ್ರೀತಿ, ವಿಶ್ವಾಸ, ನಂಬಿಕೆ, ತ್ಯಾಗ ಇದ್ದರೆ ಮಹಾಮನೆಯೆನಿಸಿಕೊಳ್ಳುತ್ತದೆ. ಪರಸ್ಪರ ಬಾಂಧವ್ಯಗಳು ಬೆಸೆದಾಗ ಕಷ್ಟಸುಖಗಳನ್ನು ಹಂಚಿಕೊಳ್ಳುವ ವಾತಾವರಣ ಸೃಷ್ಟಿಯಾಗಿ ಅನೇಕ ಸಣ್ಣಪುಟ್ಟ ಭಿನ್ನಾಭಿಪ್ರಾಯಗಳು, ವೈಮನಸ್ಸು ದೂರಾಗುತ್ತದೆ ಎಂದ

# ಮಕ್ಕಳ ಮನಸ್ಸಿಗೆ ಮುಟ್ಟುವಂತೆ ಬೋಧಿಸಿ ಮನೋಸ್ಥೈರ್ಯ ತುಂಬುವ ಹೊಣೆಗಾರಿಕೆ ಶಿಕ್ಷಕರುಗಳ ಮೇಲಿದೆ : ಮಂಜುನಾಥ್

**ಚಿತ್ರದುರ್ಗ :** ಉರ್ದು ಮಾಧ್ಯಮದಲ್ಲಿ ಫಲಿತಾಂಶ ಸುಧಾರಣೆಯಾಗಬೇಕಾಗಿರುವುದರಿಂದ ಮಕ್ಕಳ ಮನಸ್ಸಿಗೆ ನಾಟುವಂತೆ ಬೋಧಿಸಿ ಮನೋಸ್ಥೈರ್ಯ ತುಂಬುವ ಹೊಣೆಗಾರಿಕೆ ಶಿಕ್ಷಕರುಗಳ ಮೇಲಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಎಂ.ಆರ್.ಮಂಜುನಾಥ್ ಕರೆ ನೀಡಿದರು.

ಮುಸ್ಲಿಂ ಎಜುಕೇಷನಲ್ ಅಂಡ್ ಎಂಪವರ್‌ಮೆಂಟ್ ಟ್ರಸ್ಟ್ ವತಿಯಿಂದ ಜಿಲ್ಲೆಯ ಆರು ತಾಲ್ಲೂಕಿನ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಉರ್ದು ಶಿಕ್ಷಕರುಗಳಿಗೆ ಅಹಮದ್ ಪ್ಯಾಲೇಸ್‌ನಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ವರ್ಣಮಾಲೆ ಅಕ್ಷರ ಲಿಪಿಯಿಂದ ಹಿಡಿದು ಶುದ್ದವಾಗಿ ಬರೆಯುವುದನ್ನು ಮೊದಲು ಮಕ್ಕಳಿಗೆ ಕಲಿಸಬೇಕು. ಕೇಳಿಸಿಕೊಳ್ಳುವುದು, ಮಾತನಾಡುವುದು, ಓದುವುದು, ಬರೆಯುವುದು ಸರಿಯಿದ್ದಾಗ ಗಣಿತ, ಆಂಗ್ಲ, ವಿಜ್ಞಾನ ಭಾಷೆಗಳನ್ನು ಸುಲಭವಾಗಿ ಅರ್ಥಮಾಡಿಕೊಂಡು ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸಬಹುದು. ಟಿ.ವಿ.ಮೊಬೈಲ್‌ನಿಂದ ಮಕ್ಕಳನ್ನು ದೂರವಿರಿಸಿ. ಪೋಷಕರುಗಳು ಮಕ್ಕಳ ಶಿಕ್ಷಣದ ಕಡೆ ಹೆಚ್ಚಿನ ನಿಗಾವಹಿಸಬೇಕು. ಸರ್ಕಾರ ಮಧ್ಯಾಹ್ನದ ಬಿಸಿಯೂಟ, ಪಠ್ಯಪುಸ್ತಕ, ಶೂ

ಸಾಕ್ಸ್, ಮೊಟ್ಟೆ, ಬಾಳೆಹಣ್ಣು ಹೀಗೆ ಎಲ್ಲಾ ಸೌಲಭ್ಯಗಳನ್ನು ಕೊಡುತ್ತಿದೆ. ಬಳಸಿಕೊಂಡು ಶಿಕ್ಷಣವಂತರಾಗಬೇಕು ಎಂದು ಹೇಳಿದರು.

ನಿಧಾನಗತಿಯಲ್ಲಿ ಕಲಿಯುವ ಮಕ್ಕಳ ಪಟ್ಟಿ ಮಾಡಿ ಯಾವ ವಿಷಯದ ಕಲಿಕೆಯಲ್ಲಿ ಹಿಂದಿದ್ದಾರೆನ್ನುವುದನ್ನು ಗಮನಿಸಿ ಸರ್ವತೋಮುಖ ಬೆಳವಣಿಗೆಗೆ ಉರ್ದು ಶಿಕ್ಷಕರು ಶ್ರಮಿಸಬೇಕು. ಯಾವುದೇ ಭಾಷೆಯನ್ನಾಗಲಿ ಸರಳವಾಗಿ ಕಲಿಸಿ. ಕೂಡುವುದು, ಕಳೆಯುವುದು, ಭಾಗಿಸುವುದು ಸರಿಯಾಗಿ ಬರಬೇಕು. ಅದಕ್ಕಾಗಿ ಮಕ್ಕಳಿಗೆ ಪ್ರತಿನಿತ್ಯವು ಡ್ರಿಲ್ಲಿಂಗ್ ಮಾಡಬೇಕು. ತರಗತಿಯಲ್ಲಿ ಮಕ್ಕಳನ್ನು ಬೈಯುವ ಬದಲು ಪ್ರೋತ್ಸಾಹಿಸಿ ಶಿಕ್ಷಣದ ಕಡೆ ಆಸಕ್ತಿ ಮೂಡುವಂತೆ ನೋಡಿಕೊಳ್ಳಿ. ಪ್ರತಿಯೊಂದು ಮಗುವಿನಲ್ಲಿಯೂ ಒಂದಲ್ಲ ಒಂದು ರೀತಿಯ ಪ್ರತಿಭೆಯಿರುತ್ತದೆ ಗುರುತಿಸುವುದು ನಿಮ್ಮ ಕೈಯಲ್ಲಿದೆ. ರಾಷ್ಟ್ರಪತಿ ಅಬ್ದುಲ್‌ಕಲಾಂ ಕಡುಬಡತನದಿಂದ ಮೇಲೆ ಬಂದು ಸಾಧನೆಗೈದವರು. ಅಂತಹ ಸಾಧಕರು ಬಹಳಷ್ಟಿದ್ದಾರೆ. ಅವರುಗಳ ಆಚಾರ, ವಿಚಾರ, ನಡೆ, ನುಡಿಯನ್ನು ಮಕ್ಕಳು ಪಾಲಿಸಬೇಕಿದೆ. ಮಕ್ಕಳನ್ನು ತಿದ್ದಿ ತೀಡಿ ಸರಿದಾರಿಗೆ ತಂದರೆ ದೇಶಕ್ಕೆ ಮಾನವ ಸಂಪತ್ತನ್ನು ಕೊಡುಗೆಯಾಗಿ ನೀಡಿದಂತಾಗುತ್ತದೆ. ಪ್ರಾಥಮಿಕ ಹಂತದಲ್ಲಿಯೇ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ಕೊಟ್ಟು ಭವಿಷ್ಯಕ್ಕೆ ಶಿಕ್ಷಕರುಗಳು ದಾರಿ ದೀಪವಾಗಬೇಕೆಂದು ಎಂ.ಆರ್.ಮಂಜುನಾಥ್ ತಿಳಿಸಿದರು.




ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಮಾತನಾಡಿ ಶೈಕ್ಷಣಿಕವಾಗಿ ಪ್ರಗತಿಯತ್ತ ಸಾಗುತ್ತಿದ್ದರೂ ಕಳೆದ ಐದು ಆರು ವರ್ಷಗಳಿಂದ ಉರ್ದು ಶಾಲೆಗಳಲ್ಲಿ ಮಕ್ಕಳ ಹಾಜರಾತಿ ಕಡಿಮೆಯಾಗುತ್ತಿದೆ. ಇದರಿಂದ ಶಿಕ್ಷಕರುಗಳ ಸಂಖ್ಯೆಯೂ ಸಹಜವಾಗಿ ಕಡಿತಗೊಳ್ಳುತ್ತದೆ. 2010 ರಲ್ಲಿ ಜಿಲ್ಲೆಯಲ್ಲಿ ಐದುನೂರಕ್ಕೂ ಹೆಚ್ಚು ಉರ್ದು ಶಿಕ್ಷಕರುಗಳಿದ್ದರು. ಏಕೆ ಕಡಿಮೆಯಾಗಿದೆ ಎನ್ನುವುದರ ಚಿಂತನ ಮಂಥನವಾಗಬೇಕಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಅಲ್ಪಸಂಖ್ಯಾತ ಮಕ್ಕಳು ಶೈಕ್ಷಣಿಕವಾಗಿ ಬದಲಾವಣೆಯಾಗಬೇಕಿದೆ ಎಂದು ಹೇಳಿದರು.

ಶಿಕ್ಷಕರುಗಳು ಆಸಕ್ತಿಯಿಂದ ಕೆಲಸ ಮಾಡದಿದ್ದರೆ ಜಿಲ್ಲೆಯಲ್ಲಿ ಉರ್ದು ಶಾಲೆಗಳು ಬೇರೆ ಶಾಲೆಗಳ ಜೊತೆ ವಿಲೀನವಾಗುವುದರಲ್ಲಿ ಅನುಮಾನವಿಲ್ಲ. ಮಾತೃ ಭಾಷೆಯಲ್ಲಿ ಮಗುವಿನ ಶಿಕ್ಷಣಕ್ಕೆ ಆದ್ಯತೆ ಕೊಡಬೇಕು. ಸ್ಪರ್ಧಾತ್ಮಕ ಯುಗದಲ್ಲಿ ಗುಣಮಟ್ಟದ ಶಿಕ್ಷಣವನ್ನು ಮಕ್ಕಳಿಗೆ ನೀಡದಿದ್ದರೆ ಸರ್ಕಾರಿ ಶಾಲೆಗಳು ಉಳಿಯುವುದಿಲ್ಲ. ಮಗುವಿನ ಸರ್ವತೋಮುಖ ಬೆಳವಣಿಗೆಗೆ ಶಿಕ್ಷಕರುಗಳು ಪೂರಕವಾಗಿ ಕೆಲಸ ಮಾಡುವುದೆ ನಿಜವಾದ ಶಿಕ್ಷಣ. ಶಿಕ್ಷಣದ ಜೊತೆ ಸಂಸ್ಕಾರ ಕಲಿಸಿದಾಗ ಮಕ್ಕಳು ಸಮಾಜದಲ್ಲಿ ಉತ್ತಮ ಪ್ರಜೆಗಳಾಗಿ ಬೆಳೆಯುತ್ತಾರೆ. ಶಾಲೆ ಬಿಟ್ಟ ಮಕ್ಕಳ ಕಡೆ ಪೋಷಕರುಗಳು ಗಮನ ಕೊಡಿ. ಉರ್ದು ಶಾಲೆಯಲ್ಲಿ ಸಾಕಷ್ಟು ಸಮಸ್ಯೆಗಳಿರುವುದರಿಂದ ಜವಾಬ್ದಾರಿಯಿಂದ ಕೆಲಸ ಮಾಡುವಂತೆ ಶಿಕ್ಷಕರುಗಳಲ್ಲಿ ಮನವಿ ಮಾಡಿದರು.

ಮುಸ್ಲಿಂ ಎಜುಕೇಷನಲ್ ಅಂಡ್ ಎಂಪವರ್‌ಮೆಂಟ್ ಟ್ರಸ್ಟ್ ಅಧ್ಯಕ್ಷ ನಿವೃತ್ತ ಡಿ.ವೈ.ಎಸ್ಪಿ. ಸೈಯದ್ ಇಸಾಕ್ ಮಾತನಾಡುತ್ತ ಟ್ರಸ್ಟ್ ಆರಂಭಿಸಿ ಐದು ವರ್ಷಗಳಾಯಿಗಿದೆ ಅಂದಿನಿಂದ ಪ್ರತಿ ವರ್ಷವೂ ಜಿಲ್ಲೆಯ ಉರ್ದು ಶಿಕ್ಷಕರುಗಳಿಗೆ ಕಾರ್ಯಾಗಾರವನ್ನು ನಡೆಸಿಕೊಂಡು ಬರಲಾಗುತ್ತಿದೆ. ಉರ್ದು ಮಾಧ್ಯಮ ಶಾಲೆಗಳಲ್ಲಿ ಕಡಿಮೆ ಫಲಿತಾಂಶ ಬರುತ್ತಿರುವುದು ಮನಸ್ಸಿಗೆ ನೋವುಂಟಾಗುತ್ತದೆ. ಮುಸ್ಲಿಂ ಸಮಾಜದ ಮಕ್ಕಳು ಶಾಲೆ ಬಿಟ್ಟು ಚಿಕ್ಕಂದಿನಲ್ಲಿಯೇ ಕೆಲಸಕ್ಕೆ ಹೋಗುವ ಬದಲು ಶಿಕ್ಷಣವಂತರಾಗಬೇಕೆಂಬುದು ನನ್ನ ಆಸೆ. ಅದಕ್ಕೆ ಶಿಕ್ಷಕರುಗಳ ಪರಿಶ್ರಮವೂ ಮುಖ್ಯ. ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಮುಸ್ಲಿಂ ಮಕ್ಕಳು ಸದೃಢರಾಗಬೇಕಾದರೆ ಮೊದಲು ವಿದ್ಯಾವಂತರಾಗಬೇಕೆಂದು ಹೇಳಿದರು.

# ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್‌ಟಾಪ್ ವಿತರಣೆ



**ಹೊಳಲ್ಕೆರೆ :** ಸಾರ್ವಜನಿಕರ ಬದುಕನ್ನು ನಿಮ್ಮ ಸ್ವಂತ ಬದುಕೆಂದು ಅರ್ಥಮಾಡಿಕೊಂಡು ನಿಮ್ಮ ಬಳಿ ಬರುವವರಿಗೆ ಕೆಲಸ ಮಾಡಿಕೊಡಿ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಕಂದಾಯ ಇಲಾಖೆ ನೌಕರರಲ್ಲಿ ಮನವಿ ಮಾಡಿದರು.

ಕಂದಾಯ ಇಲಾಖೆ ವತಿಯಿಂದ ಹೊಳಲ್ಕೆರೆ ತಾಲ್ಲೂಕು ಕಚೇರಿಯಲ್ಲಿ ಬುಧವಾರ ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್‌ಟಾಪ್ ವಿತರಿಸಿ ಮಾತನಾಡಿದರು.

ಸ್ವಾತಂತ್ರ್ಯ ಪೂರ್ವ ನಂತರದಲ್ಲಿ ಎಷ್ಟೋ ದಾಖಲೆಗಳು ಸಿಗುತ್ತಿರಲಿಲ್ಲ. ಹಾಗಾಗಿ ಗಣಕೀಕೃತ ಕಾಗದ ಪತ್ರಗಳಿಗೆ ಈಗ ಬಹಳ ಪ್ರಾಮುಖ್ಯತೆಯಿದೆ. ಕಂದಾಯ ಇಲಾಖೆ ನೌಕರರ ಮೇಲೆ ಸಾರ್ವಜನಿಕರಿಂದ ಸಾಕಷ್ಟು ಆಕ್ಷೇಪಣೆಗಳಿವೆ. ಜನಸಾಮಾನ್ಯರಿಗೆ ಸಿಗಬೇಕಾದ ಸೌಲಭ್ಯಗಳನ್ನು ಮುಟ್ಟಿಸುವುದಕ್ಕಾಗಿ ಸರ್ಕಾರ ನಿಮಗೆ ಲ್ಯಾಪ್‌ಟಾಪ್‌ಗಳನ್ನು ಕೊಟ್ಟಿದೆ. ಬಳಸಿಕೊಂಡು ಸರಿಯಾಗಿ ಕೆಲಸ ಮಾಡಿ ಎಂದು ಗ್ರಾಮ ಆಡಳಿತಾಧಿಕಾರಿಗಳಿಗೆ ಸೂಚಿಸಿದರು.

ಜನನ, ಮರಣ ಪ್ರಮಾಣ ಪತ್ರಗಳಿಂದ ಹಿಡಿದು ಪಹಣಿ, ಆಸ್ತಿ ಹದ್ದುಬಸ್ತು ಪ್ರತಿಯೊಂದು ನಿಮ್ಮ ಕೈಯಿಂದಲೇ ಆಗಬೇಕು. ನೀವುಗಳು ನ್ಯಾಯಯುತವಾದ ಬೇಡಿಕೆಗಳಿಗೆ ಮುಷ್ಕರ ನಡೆಸುವುದು ತಪ್ಪಲ್ಲ. ಸರ್ಕಾರ ಕೂಡ ನಿಮಗೆ ಸ್ಪಂದಿಸಿದೆ. ಸಾರ್ವಜನಿಕರು ವಿಶ್ವಾಸವಿಟ್ಟು ನಿಮ್ಮ ಬಳಿ ಬರುತ್ತಾರೆ. ಕೆಲಸದ ನಿಮಿತ್ತ ಕಚೇರಿಗೆ ಬರುವವರನ್ನು ವಿನಾ ಕಾರಣ ಅಲೆದಾಡಿಸಬೇಡಿ. ನಿಗಧಿತ ಸಮಯದಲ್ಲಿ ಕೆಲಸ ಮಾಡಿಕೊಟ್ಟಾಗ ನಿಮ್ಮನ್ನು ಗೌರವದಿಂದ ಕಾಣುತ್ತಾರೆಂದರು.

ಚಳ್ಳಕೆರೆ ತಾಲ್ಲೂಕಿನಲ್ಲಿರುವ ಡಿ.ಆರ್.ಡಿ.ಓ.ದಲ್ಲಿ ಯುದ್ದ ಸಾಮಾಗ್ರಿಗಳನ್ನು ತಯಾರಿಸುವ ಕುರಿತು ಮಾತುಕತೆ ನಡೆಯುತ್ತಿದೆ. ಪ್ರತಿ ವರ್ಷವೂ ಹತ್ತು ಲಕ್ಷ ಕೋಟಿ ರೂ.ಗಳ ಖರ್ಚಾಗುತ್ತದೆ. ಇದು ಹೆಮ್ಮೆಯ ವಿಷಯ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಮೆಚ್ಚುಗೆ ವ್ಯಕ್ತಪಡಿಸಿದರು.

ತಹಶೀಲ್ದಾರ್ ಬೀಬಿ ಫಾತಿಮ ಹಾಗೂ ಸಿಬ್ಬಂದಿ ವರ್ಗದವರು ಈ ಸಂದರ್ಭದಲ್ಲಿ ಹಾಜರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**